ಸಂಪುಟ : 13 Volume | ಸಂಚಿಕೆ : 193 Issue | ಪುಟಗಳು : 08 Pages | ಶನಿವಾರ 13 ಸೆಪ್ಟೆಂಬರ್ 2025 | ₹2 | RNINO:KARKAN/2011/48371 | BDR/054/2026-20274 | www.mallammanudi.in | mallammanudi@gmail.com | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

" ನಾಳೆಯೇ ಸಾಯಬಹುದೆಂಬಂತೆ ಜೀವಿಸು , ಯಾವಾಗಲೂ ಜೀವಿಸುತ್ತೇನೆ ಎಂಬಂತೆ ಕಲಿಕೆಯನ್ನು ಮಾಡು "
- ಮಹಾತ್ಮಗಾಂಧಿ .

ಸಂಭಾಜಿ ಬ್ರಿಗೇಡ್‌ನ 16ನೇ ವಾರ್ಷಿಕೋತ್ಸವ: 2
ನೊಂದ ಎಲ್ಲ ರೈತರಿಗೆ ಪರಿಹಾರ ಸಿಗಲಿ 4
ಮೊದಲು ಚಿಕಿತ್ಸೆ ನೀಡಬೇಕು ಸೂಚನೆ 8

# ಸೆ.22ರಿಂದ ಜಾತಿ ಗಣತಿ ಮರು ಸಮೀಕ್ಷೆ
## ಡಿಸೆಂಬರ್ ಒಳಗೆ ವರದಿ ಸಲ್ಲಿಕೆ ನಿರೀಕ್ಷೆ:ಸಿ.ಎಂ

ಬೆಂಗಳೂರು,ಸೆ.12:ರಾಜ್ಯದಲ್ಲಿಕರ್ನಾಟಕರಾಜ್ಯಹಿಂದುಳಿದವರ್ಗಗಳ ಆಯೋಗದಿಂದ ಇದೇ ಸೆ. 22 ರಿಂದ ಅ.7ರ ವರೆಗೂ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ನಡೆಯಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಪ್ರಕಟಿಸಿದರು.ತಮ್ಮ ಗೃಹ ಕಚೇರಿ ಕೃಷ್ಣಾದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿಹಿಂದುಳಿದವರ್ಗಗಳಆಯೋಗದಸಾಮಾಜಿಕಮತ್ತುಶೈಕ್ಷಣಿಕ ಸಮೀಕ್ಷೆಬಗ್ಗೆಪ್ರಕಟಿಸಿಸಮೀಕ್ಷೆಯಸ್ವರೂಪದಬಗ್ಗೆಸಮಗ್ರವಿವರನೀಡಿದ ಮುಖ್ಯಮಂತ್ರಿಸಿದ್ದರಾಮಯ್ಯ ಅವರು,ಸಮೀಕ್ಷಾವರದಿಯನ್ನುಡಿಸೆಂಬರ್ ಒಳಗೆಆಯೋಗಸಲ್ಲಿಸಲಿದೆಎಂದರು.ಎಲ್ಲಜಾತಿಧರ್ಮದವರದತ್ತಾಂಶ ಅಂಗೈಯಲ್ಲಿದ್ದರೆ,ಮಾತ್ರಸಾಮಾಜಿಕನ್ಯಾಯದವಿಶೇಷಕಾರ್ಯಕ್ರಮಗಳನ್ನು ರೂಪಿಸಲುಸಾಧ್ಯ.ಹಾಗಾಗಿರಾಜ್ಯದ7ಕೋಟಿಜನರಸಾಮಾಜಿಕ,ಶೈಕ್ಷಣಿಕ ಸ್ಥಿತಿಗತಿಅರಿಯಲುಈಸಮೀಕ್ಷೆನಡೆಸಲಾಗುತ್ತದೆ.ಅತ್ಯಂತವೈಜ್ಞಾನಿಕವಾಗಿ ಆದಷ್ಟುಜಾಗ್ರತೆಯಿಂದಸಮೀಕ್ಷೆನಡೆಸಿ ವರದಿ ಕೊಡುವಂತೆ ಹಿಂದುಳಿದ ವರ್ಗದಆಯೋಗಕ್ಕೆಸೂಚನೆನೀಡಿದ್ದೇನೆಎಂದುಅವರು ಹೇಳಿದರು.ಈ ಸಮೀಕ್ಷಾಕಾರ್ಯಕ್ಕೆ1ಲಕ್ಷ85ಸಾವಿರಶಿಕ್ಷಕರನ್ನುಬಳಸಿಕೊಳ್ಳಲಾಗುತ್ತದೆ. ದಸರಾ ರಜವನ್ನು ಗಮನದಲ್ಲಿಟ್ಟುಕೊಂಡು ಸೆ. 22 ರಿಂದ ಅ. 7ರವರೆಗೆ ಸಮೀಕ್ಷಾ ಕಾರ್ಯವನ್ನು ನಡೆಸಲಾಗುತ್ತದೆ. ಪ್ರತಿ ಶಿಕ್ಷಕರಿಗೆ ಸಮೀಕ್ಷೆ 120 ರಿಂದ 150 ಮನೆಗಳ ವ್ಯಾಪ್ತಿಯನ್ನು ನಿಗದಿಪಡಿಸಲಾಗಿದೆ ಎಂದು ಅವರು ಹೇಳಿದರು.ಸಮೀಕ್ಷಾ ಕಾರ್ಯದಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು. ಯಾರೂಕೂಡಸಮೀಕ್ಷೆಯಿಂದಹೊರಗುಳಿಯಬಾರದು.ಸಮೀಕ್ಷೆಯಲ್ಲಿ 60 ಪ್ರಶ್ನೆಗಳನ್ನು ಕೇಳಲಾಗುವುದು. ಎಲ್ಲರೂ ಪ್ರತಿಯೊಂದು ಪ್ರಶ್ನೆಗಳಿಗೆ ಸಮರ್ಪಕಮಾಹಿತಿನೀಡಬೇಕುಎಂದುಅವರುಮನವಿಮಾಡಿದರು.ಸಮೀಕ್ಷಾ ಕಾರ್ಯ ಒಳಮೀಸಲಾತಿ ಸಂಬಂಧ ನ್ಯಾಯಮೂರ್ತಿ ನಾಗಮೋಹನ್ ದಾಸ್ ಆಯೋಗ ನಡೆಸಿದ ಮಾದರಿಯಲ್ಲೇ ನಡೆಯಲಿದೆ. ಆನ್‌ಲೈನ್ ಮೂಲಕವೂ ಸಮೀಕ್ಷೆಯಲ್ಲಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಆಯೋಗದ ಸಹಾಯವಾಣಿ ಸಂಖ್ಯೆ-8050770004ಕ್ಕೆ ಕರೆ ಮಾಡಿ ಸಾರ್ವಜನಿಕರುಸಮೀಕ್ಷೆಕುರಿತುಯಾವುದೇದೂರುಮತ್ತುಮಾಹಿತಿಯನ್ನು



ಪಡೆಯಬಹುದುಎಂದು ಹೇಳಿದರು.ಸಮೀಕ್ಷಾಪೂರ್ವದಲ್ಲಿಪ್ರತಿಯೊಂದು ಮನೆಯ ವಿದ್ಯುತ್ ಮೀಟರ್ ಆಧಾರದಲ್ಲಿ ಮನೆಯ ಜಿಯೋ ಟ್ಯಾಗ್ ಮಾಡಿ ಯುಎಚ್‌ಐಡಿ ವಿಶೇಷ ಸಂಖ್ಯೆಯನ್ನು ನಮೂದಿಸಲಾಗುವುದು. ಈಗಾಗಲೇ 1 ಕೋಟಿ 55 ಲಕ್ಷ ಮನೆಗಳಿಗೆ ಯುಎಚ್‌ಐಡಿ ಸಂಖ್ಯೆಯನ್ನು ಅಳವಡಿಸಲಾಗಿದೆ. ವಿದ್ಯುತ್ ಸಂಪರ್ಕಇಲ್ಲದ ಮನೆಯ ಸಮೀಕ್ಷೆಯನ್ನು ಮಾಡಲಾಗುವುದು. ಸಮೀಕ್ಷಾ ಸಂದರ್ಭದಲ್ಲಿ ಪಡಿತರ ಚೀಟಿ ಮತ್ತು ಆಧಾರಕಾರ್ಡ್‌ನ್ನು ಮೊಬೈಲ್‌ಸಂಖ್ಯೆಗೆಲಿಂಕ್ ಮಾಡುವಕಾರ್ಯವನ್ನು ಮಾಡಲಾಗುವುದುಎಂದರು.ಈಸಮೀಕ್ಷೆಗಾಗಿರಾಜ್ಯಸರ್ಕಾರಸುಮಾರು 425 ಕೋಟಿ ರೂ.ನ್ನು ಒದಗಿಸಿದೆ. ಅಗತ್ಯ ಬಿದ್ದರೆ ಹೆಚ್ಚುವರಿ ಹಣವನ್ನೂ ನೀಡುತ್ತೇವೆ.ಸಮೀಕ್ಷೆ ನಡೆಸುವ ಶಿಕ್ಷಕರಿಗೆ ತಲಾ 20 ಸಾವಿರ ಗೌರವ ಸಂಭಾವನೆಯನ್ನು ನೀಡಲಾಗುವುದು. ಶಿಕ್ಷಕರಸಂಭಾವನೆಗೆ 325 ಕೋಟಿ ರೂ. ವೆಚ್ಚವಾಗುತ್ತದೆ ಎಂದು ಹೇಳಿದರು.ಆಯೋಗ ವೈಜ್ಞಾನಿಕವಾಗಿ ಯಾವುದೇಲೋಪವಾಗದಂತೆಸಮೀಕ್ಷೆನಡೆಸಬೇಕು. ನಿಗದಿತ ಅವಧಿಯ ಒಳಗಾಗಿ ಸಮೀಕ್ಷಾ ಕಾರ್ಯ ನಡೆಸಬೇಕು ಎಂದ ಅವರು, ಡಿಸೆಂಬರ್ ಒಳಗೆ ವರದಿಸರ್ಕಾರದ ಕೈಸೇರುವ ನಿರೀಕ್ಷೆ ಇದೆ ಎಂದರು.ಈ ಹಿಂದೆ 2015 ರಲ್ಲಿ ಕಾಂತ್‌ರಾಜ್ ಅವರು ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷರಾಗಿದ್ದಾಗ ಶೈಕ್ಷಣಿಕ,ಸಾಮಾಜಿಕ ಸಮೀಕ್ಷೆಯನ್ನು ನಡೆಸಲಾಗಿತ್ತು. ಕಾಂತ್‌ರಾಜ್ ಅವರುವರದಿಯನ್ನುಸಲ್ಲಿಸಿ10ವರ್ಷ ಆದಕಾರಣಹೊಸದಾಗಿ ಸಮೀಕ್ಷೆ ನಡೆಸಲು ತೀರ್ಮಾನಿಸಲಾಗಿದೆ ಎಂದು ಹೇಳಿದರು.ಯಾರೂ ಸಮೀಕ್ಷೆಯಿಂದಹೊರಗುಳಿಯಬಾರದು.ಆರೀತಿಸಿದ್ಧತೆಮಾಡಿಕೊಳ್ಳಲಾಗಿದೆ. ಜಾತಿ ಹೇಳಿಕೊಳ್ಳಲು ಕಷ್ಟವಾದರೆ ಸಹಾಯವಾಣಿಗೆ ಕರೆ ಮಾಡಿ ಜಾತಿ ಹೇಳಬಹುದು.ಆಶಾ ಕಾರ್ಯಕರ್ತರು ನಾಳೆಯಿಂದಲೇ ಮನೆ ಮನೆಗೆ ಹೋಗಿ 60 ಪ್ರಶ್ನೆಗಳ ನಮೂನೆಯನ್ನು ಪ್ರತಿ ಮನೆಗೆ ತಲುಪಿಸುತ್ತಾರೆ. ನಂತರಶಿಕ್ಷಕರುಸಮೀಕ್ಷೆಗೆಹೋಗುತ್ತಾರೆ.ಮತಾಂತರಗೊಂಡವರುಅಥವಾ ಜಾತಿಗೊಂದಲಇದ್ದುದ್ದನ್ನು ಆಯೋಗದತಜ್ಞರತಂಡ ವಿಶ್ಲೇಷಣೆ ಮಾಡಿ ಎಲ್ಲವನ್ನೂ ತೀರ್ಮಾನಿಸುತ್ತದೆ ಎಂದರು.ಅಮೆರಿಕಾದಲ್ಲೂ ಕರಿಯರಿಗೆ ಅಫೆರ್‌ಮೆಟಿವ್ ಆಕ್ಷನ್ ಅಂತ ಇದೆ. ನಮ್ಮಲ್ಲಿ ಮೀಸಲಾತಿ ಇದೆ, ನಾವು ಬಡತನ, ನಿರುದ್ಯೋಗ, ಅನರಕ್ಷತೆ ಹೋಗಲಾಡಿಸಲು ಸಂವಿಧಾನದ ಪ್ರಕಾರವಿಶೇಷಕಾರ್ಯಕ್ರಮಗಳನ್ನುರೂಪಿಸಬೇಕಿದೆ.ಅಸಮಾನತೆಯನ್ನು ತೊಲಗಿಸಲು ಸ್ವಾತಂತ್ರ್ಯ ದೊರೆತು ಇಷ್ಟು ವಷಗಳಾದರು ಸಾಧ್ಯವಾಗಿಲ್ಲ. ಸಮಾನತೆಯನ್ನು ಸಮಾನ ಅವಕಾಶವನ್ನು ಒದಗಿಸಲು ಜನರ ಆರ್ಥಿಕ ಸ್ಥಿತಿ, ಶೈಕ್ಷಣಿಕಸ್ಥಿತಿ ಜಾತಿ ಧರ್ಮ ಎಲ್ಲದರ ಮಾಹಿತಿ ಬೇಕಿದೆ. ಹಾಗಾಗಿಯೇ ಈ ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆನಡೆಸುತ್ತಿದ್ದೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.ದೇಶದಲ್ಲಿಪ್ರಜಾಪ್ರಭುತ್ವಉಳಿಯಬೇಕಾದರೆ, ನಾವುಅಸಮಾನತೆಯನ್ನುತೊಲಗಿಸಲೇಬೇಕು.ಹಾಗಾಗಿಸಮಾನಅವಕಾಶ ಒದಗಿಸಲು ದತ್ತಾಂಶಗಳ ಮಾಹಿತಿ ಅಗತ್ಯವಿದೆ. ಈ ಸಮೀಕ್ಷೆಯಿಂದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಯನ್ನು ಅರಿತು ಅದಕ್ಕೆ ತಕ್ಕಂತೆ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.ಸುದ್ದಿಗೋಷ್ಠಿಯಲ್ಲಿ ಸಚಿವ ಶಿವರಾಜ್‌ತಂಗಡಗಿ, ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ನಾಯ್ಡು, ಆಯೋಗದ ಸದಸ್ಯರುಗಳು, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಜೀರ್ ಅಹ್ಮದ್ ಉಪಸ್ಥಿತರಿದ್ದರು.

## ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ತ್ವರಿತಗೊಳಿಸಲು ಸೂಚನೆ



ರಾಯಚೂರು ಸೆ,12: ರಾಯಚೂರಿನ ವಿಮಾನ ನಿಲ್ದಾಣ ನಿರ್ಮಾಣ ಕಾಮಗಾರಿಯನ್ನು ತ್ವರಿತಗೊಳಿಸಿ, ಬೇಗನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಸೂಚನೆ ನೀಡಿದರು.ಸೆಪ್ಟೆಂಬರ್ 11ರಸಂಜೆರಾಯಚೂರಿನಲ್ಲಿವಿಮಾನನಿಲ್ದಾಣನಿರ್ಮಾಣಕಾಮಗಾರಿಯ ಉದ್ದೇಶಿತ ಸ್ಥಳವಾದ ಯರಮರಸ್ ಹೊರವಲಯದ ಪ್ರದೇಶಕ್ಕೆ ಭೇಟಿ ನೀಡಿ ಕಾಮಗಾರಿಯ ಪರಿವೀಕ್ಷಣೆ ನಡೆಸಿ ಅವರು ಮಾತನಾಡಿದರು.

ವಿಮಾನ ನಿಲ್ದಾಣ ಕಾಮಗಾರಿಯಲ್ಲಿ ಪ್ರಸ್ತಾಪಿಸಿರುವ ರನ್‌ವೇ, ಸಿಆರ್ ಎಫ್ ಕಟ್ಟಡ, ಎಟಿಸಿ ಕಟ್ಟಡ ಮತ್ತು ಮಾಸ್ಟರ್ ಪ್ಲಾನ್‌ದಲ್ಲಿ ತೋರಿಸಿದ ಎಲ್ಲ ಕಾಮಗಾರಿಗಳು ನಿಗದಿಪಡಿಸಿದ ಕಾಲಮಿತಿಯೊಳಗೆ ಪೂರ್ಣವಾಗಬೇಕು ಎಂದುಜಿಲ್ಲಾಧಿಕಾರಿಗಳುಸೂಚನೆನೀಡಿದರು.ಪ್ರಸ್ತುತವಿಮಾನನಿಲ್ದಾಣದ 2.5 ಕಿ ಮೀ ಉದ್ದದ ರನ್ ವೆ ಕಾಮಗಾರಿ ಪೂರ್ಣವಾಗಿದ್ದು, ಈದೀಗ ಮರ್ಮ ಹಾಕಲಾಗುತ್ತದೆ. ನಿಲ್ದಾಣದ ಕಾಂಪೌಂಡ್ ವಾಲ್ ಕಾಮಗಾರಿ ಶೇ.70ರಷ್ಟು ಪೂರ್ಣವಾಗಿದೆ.ಪ್ಯಾಸೆಂಜರ್ ಟರ್ಮಿನಲ್ ಕಟ್ಟಡಕ್ಕೆ ಬುನಾದಿ ಫೂಟಿಂಗ್ ಹಾಕುವ ಕಾಮಗಾರಿ ಪೂರ್ಣವಾಗಿದೆ. ಸಿಎಫ್ ಆರ್ ಕಟ್ಟಡಕ್ಕೆ ಪುಟ್ಟಿಂಗ್ ಹಾಕುವಕಾಮಗಾರಿಸಹಪೂರ್ಣವಾಗಿದೆ.ಇಎಸ್ ಎಸ್ ಪುಟ್ಟಿಂಗ್ ಹಾಕುವ ಕಾಮಗಾರಿ ಶೇ.90ರಷ್ಟು ಪೂರ್ಣವಾಗಿದೆ ಎಂದು ಇದೆ ವೇಳೆ ಅಧಿಕಾರಿಗಳು ಮಾಹಿತಿ ನೀಡಿದರು.

## ಪತ್ನಿ ಬಿಟ್ಟು ಹೋಗಿದ್ದಕ್ಕೆ 30 ಅಡಿ ಬ್ರಿಡ್ಜ್ ಮೇಲಿಂದ ಹಾರಿದ ಪತಿ

ಬೀದರ್:ಸೆ.12: ಮಕ್ಕಳನ್ನು ಕರೆದುಕೊಂಡು ಹೆಂಡತಿ ಬಿಟ್ಟು ಹೋಗಿದ್ದಕ್ಕೆ 30 ಅಡಿ ಬ್ರಿಡ್ಜ್ ಮೇಲಿಂದ ನದಿಗೆ ಹಾರಿರುವ ಘಟನೆ ಬೀದರ್ ಜಿಲ್ಲೆಯ ಭಾಲ್ಕಿತಾಲೂಕಿನಹಲಸಿತೂಗಾಂವ್ ಗ್ರಾಮದಬಳಿನಡೆದಿದೆ.ವ್ಯಕ್ತಿಯನ್ನು ಹಲಸಿತೂಗಾಂವ್ ಗ್ರಾಮದನಿವಾಸಿಪ್ರಭಾಕರ್‌ಸೂರ್ಯವಂಶಿ(38)ಎಂದು ಗುರುತಿಸಲಾಗಿದೆ. ವ್ಯಕ್ತಿ 30 ಅಡಿಯ ಬ್ರಿಡ್ಜ್ ಮೇಲಿಂದ ಮಾಂಜ್ರಾ ನದಿಗೆ ಹಾರುವಭಯಾನಕದೃಶ್ಯವನ್ನುಸ್ಥಳೀಯರುಮೊಬೈಲ್‌ನಲ್ಲಿಸೆರೆಹಿಡಿದಿದ್ದಾರೆ. ಕೆಲವು ವರ್ಷಗಳ ಹಿಂದೆ ಹೆಂಡತಿ ಮತ್ತು ಮಕ್ಕಳು ಬಿಟ್ಟು ತವರು ಮನೆಗೆ ಹೋಗಿದ್ದರು. ಇದರಿಂದ ಮನನೊಂದ ಪತಿ ಪ್ರಭಾಕರ್ ಸೂರ್ಯವಂಶಿ ಕುಡಿತದಚಟಕ್ಕೆದಾಸನಾಗಿದ್ದ.ಇದೀಗನದಿಗೆಹಾರಿನೀರುಪಾಲಾಗಿದ್ದಾನೆ.



ಸದ್ಯ ಅಗ್ನಿಶಾಮಕಸಿಬ್ಬಂದಿಮತ್ತು ಪೊಲೀಸರುಶೋಧಕಾರ್ಯಚರಣೆ ನಡೆಸುತ್ತಿದ್ದಾರೆ.ಈಕುರಿತುಮೆಹಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹೆಚ್ಚಿನ ತನಿಖೆ ಕೈಗೊಂಡಿದ್ದಾರೆ.

## ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಎಫ್‌ಐಆರ್

ಮಂಡ್ಯ:ಸೆ.12: ಮದ್ದೂರು ಪಟ್ಟಣಕ್ಕೆ ಭೇಟಿ ನೀಡಿದ್ದ ವೇಳೆ ಪ್ರಚೋದನಕಾರಿ ಭಾಷಣ ಮಾಡಿದ್ದಾರೆ ಎಂಬ ಆರೋಪದಡಿಯಲ್ಲಿ ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಎಫ್ ಐಆರ್ ದಾಖಲಾಗಿದೆ.

ಗಣೇಶ ಮೆರವಣಿಗೆ ವೇಳೆ ನಡೆದಿದ್ದ ಕಲ್ಲು ತೂರಾಟದ ಬಳಿಕ ಗುರುವಾರ (ಸೆ.11) ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಮದ್ದೂರಿಗೆ ಭೇಟಿ ನೀಡಿದ್ದರು. ಈ ವೇಳೆ ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ್ದರು.



ಗಣಪತಿ ವಿಗ್ರಹಗಳು ದೇಶದ ಯಾವುದೇ ಮಸೀದಿಗಳ ಮುಂದೆ ಹಾದುಹೋಗುವ ಹಕ್ಕಿದೆ, ಇದನ್ನು ವಿರೋಧಿಸುವವರು ಪಾಕಿಸ್ತಾನಕ್ಕೆ ಹೋಗಬೇಕು ಎಂದು ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಲಾಗಿದೆ. ನಾನು ಅಧಿಕಾರಕ್ಕೆ ಬಂದರೆ ಅಕ್ರಮ ಮಸೀದಿಗಳನ್ನು ಕೆಡವಲಾಗುವುದು ಎಂದು ಎಚ್ಚರಿಸಿದ್ದಾರೆ. ನಿರ್ದಿಷ್ಟ ಸಮುದಾಯದ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ್ದಾರೆ ಎಂದು ಆರೋಪಿಸಲಾಗಿದೆ.

ಧಾರ್ಮಿಕ ಭಾವನೆಗಳಿಗೆ ನೋವುಂಟು ಮಾಡುವ ಮತ್ತು ಸಮುದಾಯಗಳ ನಡುವೆ ದ್ವೇಷವನ್ನು ಉತ್ತೇಜಿಸುವ ಉದ್ದೇಶದಿಂದ ಮಾಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಿಎನ್‌ಎಸ್ ಸೆಕ್ಷನ್ 196(1)(ಬಿ), 299, 353(2) ಅನ್ಯಕೋಮಿಗೆ ಧಕ್ಕೆ ಹಾಗೂ ಕೋಮುಗಳ ನಡುವೆ ವೈರತ್ವ ಉಂಟುಮಾಡುವ ಭಾಷಣ ಮಾಡಿರುವ ಆರೋಪದಡಿ ಎಫ್‌ಐಆರ್ ದಾಖಲಾಗಿದೆ. ಪ್ರಚೋದನಕಾರಿ ಭಾಷಣ ಮಾಡಿದ ಹಿನ್ನೆಲೆಯಲ್ಲಿ ಬಿಜೆಪಿ ಮುಖಂಡ ಸಿಟಿ ರವಿ ವಿರುದ್ಧವೂ ಪ್ರಕರಣ ದಾಖಲಾಗಿದೆ.

## ಗಣಪತಿ ಮೆರವಣಿಗೆ ವೇಳೆ ಭೀಕರದುರಂತ : ಟ್ರಕ್ ಹರಿದು 6 ಮಂದಿ ಸಾವು

ಹಾಸನ:ಸೆ.12: ಗಣಪತಿ ವಿಸರ್ಜನಾ ಮೆರವಣಿಗೆ ವೇಳೆ ಭೀಕರ ದುರಂತ ಸಂಭವಿಸಿದೆ. ಮೆರವಣಿಗೆ ಹೋಗುತ್ತಿದ್ದವರ ಮೇಲೆ ಟ್ರಕ್ ಹರಿದು 6 ಮಂದಿ ಮೃತಪಟ್ಟಿದ್ದಾರೆ.ಹಾಸನ ತಾಲೂಕಿನ ಮೊಸಳೆಹೊಸಳ್ಳಿ ಗ್ರಾಮದಲ್ಲಿ ಅಪಘಾತ ಸಂಭವಿಸಿದೆ. ಅವಘಡದಲ್ಲಿ 20ಕ್ಕೂ ಹೆಚ್ಚು ಮಂದಿ ಗಂಭೀರ ಗಾಯಗೊಂಡಿದ್ದಾರೆ. ಸ್ಥಳಕ್ಕೆ ಎಸ್ಪಿ ಮಹಮದ್ ಸುಜೇತಾ ದೌಡಾಯಿಸಿದ್ದಾರೆ.

## ಉಪರಾಷ್ಟ್ರಪತಿಯಾಗಿ ರಾಧಾಕೃಷ್ಣನ್ ಪದಗ್ರಹಣ



ನವದೆಹಲಿ,ಸೆ.12: ದೇಶದ 15ನೇ ಉಪರಾಷ್ಟ್ರಪತಿಯಾಗಿ ಚಂದ್ರಪುರಂ ಪೊನ್ನುಸಾಮಿ ರಾಧಾಕೃಷ್ಣನ್ ಅವರು ಇಂದು ಅಧಿಕಾರ ಸ್ವೀಕರಿಸಿದರು, ಈ ಮೂಲಕ ಇಂದಿನಿಂದ ಉಪರಾಷ್ಟ್ರಪತಿ ಮತ್ತುರಾಜ್ಯಸಭೆಯಸಭಾಪತಿಯಸ್ಥಾನ ಅಲಂಕರಿಸಿದ್ದಾರೆ.ರಾಷ್ಟ್ರಪತಿಭವನದಲ್ಲಿ ಇಂದುನಡೆದಸಮಾರಂಭದಲ್ಲಿರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನೂತನ ಉಪ ರಾಷ್ಟ್ರಪತಿ ಸಿಪಿ ರಾಧಾಕೃಷ್ಣನ್ ಅವರಿಗೆಅಧಿಕಾರಮತ್ತು ಗೌಪ್ಯತೆಯ ಪ್ರಮಾಣ ವಚನ ಬೋಧಿಸಿದರು.ಈ ವೇಳೆಪ್ರಧಾನಿನರೇಂದ್ರ ಮೋದಿ, ಉಪ ಸಭಾಪತಿ ಹರಿವಂಶ್, ಮಾಜಿ ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಕೇಂದ್ರ ಸಚಿವರಾದ ಅಮಿತ್ ಶಾ, ಜೆಪಿ ನಡ್ಡಾ, ರಾಜನಾಥ್ ಸಿಂಗ್, ನಿತಿನ್ ಗಡ್ಕರಿ, ರಾಜ್ಯಸಭೆಯ ಪ್ರತಿಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ,ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿಸೇರಿದಂತೆಕೇಂದ್ರಸಚಿವರುಸೇರಿದಂತೆಸಂಸದರುಭಾಗಿಯಾಗಿದ್ದರು.ಈವೇಳೆಪ್ರಧಾನಿನರೇಂದ್ರ ಮೋದಿ ಸೇರಿದಂತೆಕೇಂದ್ರಸಚಿವರುನೂತನಉಪರಾಷ್ಟ್ರಪತಿಸಿಪಿರಾಧಾಕೃಷ್ಣನ್ ಅವರಿಗೆಅಭಿನಂದನೆಮತ್ತುಶುಭಾಶಯ ಸಲ್ಲಿಸಿದರು.ಆಡಳಿತಾರೂಢರಾಷ್ಟ್ರೀಯಪ್ರಜಾಸತ್ತಾತ್ಮಕಒಕ್ಕೂಟದಅಭ್ಯರ್ಥಿ ಸಿಪಿ ರಾಧಾಕೃಷ್ಣನ್ ಮೊನ್ನೆ ನಡೆದ ಚುನಾವಣೆಯಲ್ಲಿಭಾರತದ15ನೇಉಪಾಧ್ಯಕ್ಷರಾಗಿಆಯ್ಕೆಯಾಗಿದ್ದರು. ಅವರುತಮ್ಮ ಪ್ರತಿಸ್ಪರ್ಧಿ ಇಂಡಿಯಾ ಮೈತ್ರಿಕೂಟದ ಅಭ್ಯರ್ಥಿ ನ್ಯಾಯಮೂರ್ತಿ ಬಿ. ಸುದರ್ಶನ್ ರೆಡ್ಡಿ ವಿರುದ್ಧ 152 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದರು.ಸಿಪಿ ರಾಧಾಕೃಷ್ಣನ್ ಅವರು 452 ಮೊದಲ ಪ್ರಾಶಸ್ತ್ಯ ಮತಗಳನ್ನು ಪಡೆದಿದ್ದರು , ನ್ಯಾಯಮೂರ್ತಿ ಸುದರ್ಶನ್ ರೆಡ್ಡಿ ಅವರು 300 ಮತಗಳನ್ನು ಪಡೆದು ಸೋಲು ಒಪ್ಪಿಕೊಂಡಿದ್ದರು.767 ಸಂಸತ್ ಸದಸ್ಯರ ಪೈಕಿ ಶೇ. 98.2 ರಷ್ಟು ಮತದಾನದಲ್ಲಿ ಭಾಗವಹಿಸಿದ್ದರು. 14 ಸಂಸದರು ಮತ ಚಲಾಯಿಸಲಿಲ್ಲ ಚಲಾಯಿಸಲಾದ ಮತಗಳಲ್ಲಿ 752 ಮತಗಳು ಮಾನ್ಯವಾಗಿದ್ದರೆ, 15 ಮತಗಳು ಅಮಾನ್ಯವಾಗಿದ್ದವು.

## ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಎಲ್ಲರ ಸಹಯೋಗ ಅಗತ್ಯ : ಸಿಇಓ ಡಾ. ಗಿರೀಶ ದಿಲೀಪ ಬದೋಲೆ

ಬೀದರ, ಸೆ.12: ಕರ್ನಾಟಕ ರಾಜ್ಯ ಸರ್ಕಾರವುಕರ್ನಾಟಕರಾಜ್ಯಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ಹಮ್ಮಿಕೊಂಡಿರುವಸಾಮಾಜಿಕಮತ್ತು ಶೈಕ್ಷಣಿಕಸಮೀಕ್ಷೆಅತ್ಯಂತಮಹತ್ವಪೂರ್ಣವಾದ ಸಮೀಕ್ಷೆಯಾಗಿರುವುದರಿಂದ ಎಲ್ಲರ ಸಹಯೋಗ ಅಗತ್ಯ ಎಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ದಿಲೀಪ ಬದೋಲೆ ತಿಳಿಸಿದರು.ಅವರು ಬೀದರ ಜಿಲ್ಲಾಪಂಚಾಯತಸಭಾಂಗಣದಲ್ಲಿಂದುಸಾಮಾಜಿಕಮತ್ತುಶೈಕ್ಷಣಿಕಸಮೀಕ್ಷೆ-2025ರಜಿಲ್ಲಾಮಟ್ಟದಮಾಸ್ಟರ್ ಟ್ರೇನರಗಳಿಗೆಹಮ್ಮಿಕೊಂಡಿದ್ದಒಂದು ದಿನದತರಬೇತಿಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.ಈಸಮೀಕ್ಷೆ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿ ಅರಿಯಲು ಸಹಕಾರಿಯಾಗಲಿದೆ. ಸರ್ಕಾರದ ಯೋಜನೆಗಳ ಲಾಭ ಎಷ್ಟರ ಮಟ್ಟಿಗೆ ಜನರಿಗೆ ತಲುಪಿದೆ ಹಾಗೂ ಅದರಿಂದ ಅವರ ಜೀವನ ಮಟ್ಟದಲ್ಲಾದ ಬದಲಾವಣೆ ನಿಖರವಾಗಿ ತಿಳಿದು ಬರಲಿದೆ. ಈ ಮೂಲಕ ಕಾರ್ಯಕ್ರಮಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಈ ಸಮೀಕ್ಷೆ ದಿಕ್ಸೂಚಿಯಾಗಲಿದೆ ಎಂದರು.ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ ಮಾತನಾಡಿ, ಈಗಾಗಲೇ ಸಮೀಕ್ಷೆಗೆ ಸಂಬಂಧಿಸಿದಂತೆ ಎಲ್ಲಾ ಪೂರ್ವಭಾವಿಕ್ರಮಕೈಗೊಳ್ಳಲಾಗಿದೆ.ಕುಟುಂಬಸಮೀಕ್ಷೆಗಾಗಿಜೆಸ್ಕಾಂಸಿಬ್ಬಂದಿಗಳಸಹಯೋಗದಿಂದಮನೆಗಳನ್ನು ಗುರುತಿಸಿ ಸ್ಟಿಕರ್ ಅಂಟಿಸುವ ಕಾರ್ಯ ಮಾಡಲಾಗಿದೆ. ಮೀಟರ್ ಇಲ್ಲದ ಮನೆಗಳನ್ನು ಗುರುತಿಸುವ ಕಾರ್ಯ ಪ್ರಗತಿಯಲ್ಲಿದೆ.ಈಸಮೀಕ್ಷೆಐತಿಹಾಸಿಕಸಮೀಕ್ಷೆಯಾಗಿದ್ದುಪೂರ್ಣಪ್ರಮಾಣದಲ್ಲಿಜನತೆಸಹಕರಿಸಿಭವ್ಯಭವಿಷ್ಯಕೆ ಸಾಕ್ಷಿಯಾಗಬೇಕೆಂದರು.ಈಸಂದರ್ಭದಲ್ಲಿಬೀದರಸಹಾಯಕಆಯುಕ್ತಮಹಮ್ಮದ್‌ಶಕೀಲ,ಪತ್ರಾಂಕಿತವ್ಯವಸ್ಥಾಪಕ ಕರಬಸಮ್ಮ, ವ್ಯವಸ್ಥಾಪಕ ಅಶೋಕ ಶೇರಿಕಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.ಈ ಕಾರ್ಯಾಗಾರದಲ್ಲಿ ರಾಜ್ಯ ಮಟ್ಟದ ಮಾಸ್ಟರ್ ಟ್ರೇನರ ಡಾ.ಗೌತಮ ಅರಳಿ, ಚನ್ನಬಸವ ಹೇಡೆ, ತಾನಾಜಿ ನರೋಟೆ, ಮಾರುತಿ ಸಗರ ವಿವಿಧಡೆಯಿಂದ ನಿಯೋಜಿತ ಜಿಲ್ಲಾ ಮಟ್ಟದ ಮಾಸ್ಟರ್ ಟ್ರೇನರಗಳಿಗೆ ತರಬೇತಿ ನೀಡಿದರು. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನಿತಾ ಪಟ್ವಾಡಿ ಸ್ವಾಗತಿಸಿದರು.



## ಬಳವಡಗಿ ಕಾಳಜಿ ಕೇಂದ್ರಕ್ಕೆ ಡಿ.ಸಿ.ಭೇಟಿ

ಕಲಬುರಗಿ,ಸೆ.12 ಚಿತ್ತಾಪುರ ತಾಲೂಕಿನ ಬಳವಡಗಿ ಗ್ರಾಮದಲ್ಲಿ ಮಳೆಯಿಂದ ಊರಿನ ಹಳ್ಳ ತುಂಬಿ ಮನೆಗೆಲ್ಲ ನೀರು ಬಂದ ಕಾರಣ ಅಲ್ಲಿನ ನಿವಾಸಿಗಳನ್ನು ರಕ್ಷಿಸಿ ಹಸ್ತಾಂತರ ಮಾಡಿದ ಕಾಳಜಿ ಕೇಂದ್ರಕ್ಕೆ ಶುಕ್ರವಾರ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಭೇಟಿ ನೀಡಿ ಸಂತ್ರಸ್ತರ ಯೋಗಕ್ಷೇಮ ವಿಚಾರಿಸಿದರು.ಈ ಸಂದರ್ಭದಲ್ಲಿ ಸಂತ್ರಸ್ತರ ಅಹವಾಲು ಆಲಿಸಿ ಮಾತನಾಡಿದ ಡಿ.ಸಿ ಅವರು, ಸಂತ್ರಸ್ತರಿಗೆ ಊಟೋಪಚಾರ, ರಾತ್ರಿ ಮಲಗಲು ಹೊದಿಕೆಸೇರಿದಂತೆಸಕಲಮೂಲಸೌಕರ್ಯ ಒದಗಿಸಬೇಕು. ಸಾಂಕ್ರಾಮಿಕರೋಗಹರಡದಂತೆಆರೋಗ್ಯ ಇಲಾಖೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದರು.ಇದಕ್ಕೂ ಮುನ್ನ ಚಿತ್ತಾಪುರ ಪಟ್ಟಣಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಕರ್ನಾಟಕ ಕೊಳಚೆ ಪ್ರದೇಶ ನಿರ್ಮೂಲನೆ ಮಂಡಳಿಯಿಂದ ಪಟ್ಟಣದಲ್ಲಿ ಬಡವರಿಗೆ ಹಂಚಿಕೆ ಮಾಡಲುನಿರ್ಮಿಸಿರುವಜಿ+1 ಮಾದರಿಯ1,000ಮನೆಗಳನ್ನುಫಲಾನುಭವಿಗಳಿಗೆಹಂಚಿಕೆಗೆರಂಡಮೇಜೇಷನ್ ಪ್ರಕ್ರಿಯೆಯಲ್ಲಿಭಾಗವಹಿಸಿದ್ದರು.ತದನಂತರ ಪಟ್ಟಣದಲ್ಲಿನಿರ್ಮಾಣದಹಂತದಲ್ಲಿರುವ ಕೆ.ಪಿ.ಎಸ್.ಶಾಲೆಮತ್ತು ಉಪವಿಜ್ಞಾನ ಕೇಂದ್ರಕ್ಕೆಭೇಟಿನೀಡಿಪರಿಶೀಲಿಸಿದರು.

ಬೆಳೆ ಹಾನಿ ಪ್ರದೇಶ ವೀಕ್ಷಣೆ:

ತಾಲೂಕಿನನಾಗಾವಿಗ್ರಾಮಕ್ಕೆಭೇಟಿ ನೀಡಿದಜಿಲ್ಲಾಧಿಕಾರಿಗಳುಕಳೆದಎರಡು ದಿನದಿಂದಸುರಿಯುತ್ತಿರುವಮಳೆಯಿಂದಾದ ಬೆಳೆಹಾನಿಪರಿಶೀಲಿಸಿದರು.ತಹಶೀಲ್ದಾರ ನಾಗಯ್ಯ ಮಠಪತಿ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.



## 2 ಲಕ್ಷ ಉದ್ಯೋಗ ಸೃಷ್ಟಿಗೆ ಪೂರಕವಾಗಿ ಜವಳಿ ನೀತಿ: ಶಿವಾನಂದ ಪಾಟೀಲ್

ಬೆಂಗಳೂರು:ಸೆ.12: ಜವಳಿ ಹಾಗೂ ಸಿದ್ಧ ಉಡುಪು ಕ್ಷೇತ್ರದಲ್ಲಿ ಹೆಚ್ಚಿನ ಬಂಡವಾಳ ಆಕರ್ಷಣೆ ಮತ್ತು ಸುಮಾರು 2 ಲಕ್ಷ ಉದ್ಯೋಗ ಸೃಷ್ಟಿಗೆ ಪೂರಕವಾಗಿ ಜವಳಿ ನೀತಿ 2025-30 ನೀತಿ ರೂಪಿಸಲಾಗುವುದು ಎಂದು ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ಹೇಳಿದರು.ನೂತನ ಜವಳಿ ನೀತಿ ರಚನೆಗೆಸಲಹೆಪಡೆಯಲುವಿಧಾನಸೌಧದಲ್ಲಿಶುಕ್ರವಾರ(ಸೆ.12)ಕರೆದಿದ್ದಜನಪ್ರತಿನಿಧಿಗಳು, ಜವಳಿ ಉದ್ಯಮಿಗಳ ಸಭೆಯಲ್ಲಿಅವರುಮಾತನಾಡಿದರು. ಈವೇಳೆಇಂದಿನಸಭೆಯಲ್ಲಿವ್ಯಕ್ತವಾಗಿರುವಸಲಹೆಗಳನ್ನುಪರಿಗಣಿಸಿಜವಳಿ ನೀತಿಯಲ್ಲಿ ಅಳವಡಿಸಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.ಜವಳಿ ಕ್ಷೇತ್ರದ ಅಭಿವೃದ್ಧಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. 2020ರಿಂದ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ರಾಜ್ಯ ಜವಳಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮಗಳ ಆಡಿಟ್ ಆಗಿರಲಿಲ್ಲ. ಈಗ ಆಡಿಟ್ ನಡೆದಿದ್ದು, ನಷ್ಟದ ಕಾರಣ ಎರಡನ್ನೂ ವಿಲೀನಮಾಡುವನಿರ್ಧಾರಕೈಗೊಳ್ಳಲಾಗಿದೆ.ಕೈಮಗ್ಗಉತ್ಪನ್ನಗಳನ್ನುಸರ್ಕಾರದಇಲಾಖೆಗಳಿಗೆಖರೀದಿ ಮಾಡಲುಈಗಾಗಲೇಮುಖ್ಯಮಂತ್ರಿಗಳಿಗೆ ಮನವಿಮಾಡಲಾಗಿದೆ.ಶಾಸಕರೊಂದಿಗೆ ಮತ್ತೊಮ್ಮೆ ಮುಖ್ಯಮಂತ್ರಿಗಳ ಬಳಿ ನಿಯೋಗ ತೆರಳುವ ಉದ್ದೇಶವಿದೆ. ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆಕೈಮಗ್ಗಉತ್ಪನ್ನಗಳನ್ನು ಖರೀದಿಮಾಡಿದರೆಕೈಮಗ್ಗನೇಕಾರರಿಗೆ ಉತ್ತೇಜನನೀಡಲುಸಹಕಾರಿಯಾಗಲಿದೆ ಎಂದು ಹೇಳಿದರು.



## ಮದುವೆ ನಿರಾಕರಿಸಿದ ಯುವತಿಗೆ ಚಾಕು ಹಾಕಿದ ಯುವಕ

ಉಡುಪಿ: ಸೆ.12:ಉಡುಪಿ ಜಿಲ್ಲೆಯ ಬ್ರಹ್ಮಾವರದ ಕೊಕ್ಕರ್ಣೆಯಲ್ಲಿ24ವರ್ಷದಯುವತಿಯೊಬ್ಬರಿಗೆನೆರೆಮನೆಯ ಯುವಕಚಾಕುವಿನಿಂದಇರಿದಘಟನೆಶುಕ್ರವಾರನಡೆದಿದೆ. ಇರಿತಕ್ಕೊಳಗಾದಯುವತಿಸ್ಥಿತಿಗಂಭೀರವಾಗಿದೆಕೊಕ್ಕರ್ಣೆಯ ಚೆಗ್ರಿಬೆಟ್ಟು ನಿವಾಸಿ ಸುರೇಶ್ ಪೂಜಾರಿ ಅವರ ಪುತ್ರಿ ರಕ್ಷಿತಾ ಅವರು ಇಂದು ಬೆಳಗ್ಗೆ 8.30 ರ ಸುಮಾರಿಗೆ ಪುಟ್ಟನಕಟ್ಟೆಬಳಿಬಸ್‌ನಿಲ್ದಾಣದಕಡೆಗೆನಡೆದುಕೊಂಡು ಹೋಗುತ್ತಿದ್ದಾಗಕಾರ್ತಿಕ್(27)ಎಂಬಯುವಕಚಾಕುವಿನಿಂದ ಯುವತಿಮೇಲೆದಾಳಿನಡೆಸಿದ್ದಾರೆ.ಯುವತಿಬ್ರಹ್ಮಾವರದ ಸರ್ವೇ ಇಲಾಖೆಯಲ್ಲಿಗುತ್ತಿಗೆಉದ್ಯೋಗಿಯಾಗಿಕೆಲಸ ಮಾಡುತ್ತಿದ್ದಾರೆ.ಯುವತಿಯ ನೆರೆಮನೆಯವರಾದ ಆರೋಪಿಕಾರ್ತಿಕ್,ಮದುವೆಯಾಗಲುನಿರಾಕರಿಸಿದ ನಂತರ ಚಾಕುವಿನಿಂದ ಹಲ್ಲೆ ನಡೆಸಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ.

**ಏಷ್ಯಾ ಕಪ್:ದುಬೈ ನಲ್ಲಿ ನಡೆದ ಪಂದ್ಯದಲ್ಲಿ ಭಾರತಕ್ಕೆ ಯುಎಇ ವಿರುದ್ಧ 9 ವಿಕೆಟ್ ಗಳ ಜಯ**

# ನ. 30 ರಂದು ಬೀದರನಲ್ಲಿ ಸಂಭಾಜಿ ಬ್ರಿಗೇಡ್‌ನ 16ನೇ ವಾರ್ಷಿಕೋತ್ಸವ: ಮನೋಜ ಆಖರೆ




ಮಲ್ಲಮ್ಮ ನುಡಿ ವಾರ್ತೆ ಬೀದರ: ಸೆ.12:ಈ ವರ್ಷದ ನವೆಂಬರ್ 30 ರಂದು ಬೀದರನಲ್ಲಿ ಸಂಭಾಜಿ ಬ್ರಿಗೇಡ್ ಸಂಘಟನೆ ವತಿಯಿಂದ ರಾಷ್ಟ್ರಮಟ್ಟದ 16ನೇ ವರ್ಷಾಚರಣೆ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಇದನ್ನು ರಾಷ್ಟ್ರೀಯ ಕಾರ್ಯಕಾರಿ ಮಂಡಳಿ ತೀರ್ಮಾನಿಸಿದೆ ಎಂದು ಬ್ರಿಗೇಡ್‌ನ ರಾಷ್ಟ್ರೀಯ ಅಧ್ಯಕ್ಷ ಮನೋಜ ಆಖರೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಸಂಭಾಜಿ ಬ್ರಿಗೇಡ್ ಸಂಘಟನೆಯು ಶಾಹು ಮಹಾರಾಜ್, ಛತ್ರಪತಿ ಶಿವಾಜಿ ಮಹಾರಾಜ, ಮಹಾತ್ಮ ಜ್ಯೋತಿಬಾ ಫುಲೆ, ಮಹಾತ್ಮ ಬಸವೇಶ್ವರ,ಡಾ.ಬಿ.ಆರ್.ಅಂಬೇಡ್ಕರ್, ಅಣ್ಣಾಭಾವು ಸಾಠೆ, ಮಹಾತ್ಮ ಚಕ್ರಧರ ಸ್ವಾಮಿ, ಸಂತ ತುಕಾರಾಮ, ಸಂತ ನಾಮದೇವ ಮಹಾರಾಜ್ ಇವರ ವಿಚಾರಧಾರೆಗಳನ್ನಿಟ್ಟುಕೊಂಡು ಮಹಾರಾಷ್ಟ್ರ ಸೇರಿದಂತೆ ಕರ್ನಾಟಕ, ಆಂಧ್ರಪ್ರದೇಶ,ಮಧ್ಯಪ್ರದೇಶ,ಹರಿಯಾಣ ಹಾಗೂ ಇತರೆ ರಾಜ್ಯಗಳಲ್ಲಿ ರೈತರು, ಯುವಜನರು, ಮಹಿಳೆಯರಿಗಾಗಿ ಬ್ರಿಗೇಡ್ ಕಾರ್ಯತತ್ಪರವಾಗಿದೆ. ಶಿಕ್ಷಣ, ಆರೋಗ್ಯ, ಆರ್ಥಿಕ, ರಾಜಕೀಯ ಮತ್ತು ಧಾರ್ಮಿಕವಾಗಿ ಈ ಪಂಚ ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದೆ. ಈ ವರ್ಷ ಆಚರಿಸುವ ಕಾರ್ಯಕ್ರಮದ ಮುಖೇನ ಕರ್ನಾಟಕ ರಾಜ್ಯದಲ್ಲಿ ಮರಾಠಾ ಸಮಾಜವನ್ನು ಮಹಾರಾಷ್ಟ್ರ ರಾಜ್ಯದ ಓಬಿಸಿ ಮಾದರಿಯಲ್ಲಿ ಇಲ್ಲಿಯೂ ಸಹ 2ಎ ಪ್ರವರ್ಗಕ್ಕೆ ಸೇರ್ಪಡೆ ಮಾಡಬೇಕು. ಈಗಾಗಲೇ ಬೆಂಗಳೂರಿನ ಶಿವಾಜಿ ನಗರ ಮೆಟ್ರೋ ಸ್ಟೇಷನ್ ಹೆಸರು ಬದಲಿಸಲು ಹೊರಟಿರುವ ರಾಜ್ಯ ಸರ್ಕಾರವು ಅದನ್ನು ಕೈಬಿಟ್ಟು ಛತ್ರಪತಿ ಶಿವಾಜಿ ಮಹಾರಾಜ ಹೆಸರನ್ನೇ ಮುಂದುವರೆಸಬೇಕು. ದಾವಣಗೆರೆ ಜಿಲ್ಲೆಯ ಹುದಗಿರಿಯಲ್ಲಿರುವ ಛತ್ರಪತಿ ಶಿವಾಜಿ ಮಹಾರಾಜರ ತಂದೆ ಶಹಾಜಿ ರಾಜೆ ಮಹಾರಾಜರ ಸಮಾಧಿಯನ್ನು ಸ್ಮಾರಕವನ್ನಾಗಿ ಪರಿವರ್ತಿಸಬೇಕು. ಜೊತೆಗೆ ತಾಯಿ ಜೀಜಾಬಾಯಿ, ಶಿವಾಜಿ ಹಾಗೂ ಶಹಾಜಿ ರಾಜೆ ಅವರ ಹೆಸರಿನಲ್ಲಿ ಮ್ಯೂಜಿಯಂ ಸ್ಥಾಪಿಸಬೇಕು.

ಈ ವರ್ಷ ರಾಜ್ಯದಲ್ಲಿ ಸಂಪೂರ್ಣ ಬೆಳೆ ನಾಶವಾಗಿದ್ದು ಪ್ರತೀ ಹೆಕ್ಟೆರ್‌ಗೆ ತಲಾ ರೂ. 50 ಸಾವಿರ ಪರಿಹಾರ ನೀಡಬೇಕು. ಈ ಪ್ರಮುಖ ಬೇಡಿಕೆಗಳನ್ನು ಸರ್ಕಾರ ಈಡೇರಿಸಬೇಕೆಂದು ಅಂದಿನ ಕಾರ್ಯಕ್ರಮದಲ್ಲಿ ನಿರ್ಣಯ ಕೈಗೊಳ್ಳಲಾಗುವುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬ್ರಿಗೇಡ್ ಜಿಲ್ಲಾಧ್ಯಕ್ಷ ಸತೀಶ ವಾಸರೆ ಮಾತನಾಡಿದರು. ಗಜಾನಂದ ಭೋಯರ್, ಸಂಕೇತ ಪಾಟೀಲ, ಜೆಜೆರಾವ ಪಾಟೀಲ, ಸತೀಷ ಪಾಟೀಲ ಮಹಾಗಾಂವಕರ್, ಸಂಜೀವಕುಮಾರ ಪಾಟೀಲ, ದತ್ತಾ ಪಾಟೀಲ, ರಾಮ ರಾವಣಗಾವೆ, ಗೋವಿಂದ ಪಾಟೀಲ, ರತಿಕಾಂತ ಬಿರಾದಾರ, ದತ್ತಾತ್ರೇಯ ಪಾಟೀಲ, ಸಂತೋಷ ಪಾಟೀಲ, ಸಂತೋಷ ಬಿರಾದಾರ, ಅಂಕುಶ ಪಾಟೀಲ, ದತ್ತಾ ಚೌಪಡೆ, ಪ್ರಶಾಂತ ಬಿರಾದಾರ, ಜ್ಞಾನೇಶ್ವರ ಸಗರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸೆ. 15 ರಂದು ಸರ್.ಎಂ.ವಿಶ್ವೇಶ್ವರಯ್ಯ ಜನ್ಮಶತಮಾನೋತ್ಸವ ಪ್ರಯುಕ್ತ ಇಂಜಿನಿಯರ್ಸ್ ಡೇ ಪಾಲ್ಗೊಳ್ಳಲು ಅಧ್ಯಕ್ಷ ವೀರಶೆಟ್ಟಿ ಮಣಗೆ ಕರೆ




ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 12 : ಈ ತಿಂಗಳ 15 ರಂದು ಸೋಮವಾರ ನಗರದ ಡಾ.ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಮಧ್ಯಾಹ್ನ 12-45ಕ್ಕೆ ಭಾರತರತ್ನ ಸರ್.ಎಂ.ವಿಶ್ವೇಶ್ವರಯ್ಯನವರ 165ನೇ ಜನ್ಮಶತಮಾನೋತ್ಸವ ನಿಮಿತ್ಯ ಇಂಜಿನಿಯರ್ಸ್ ಡೇ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ಅಸೋಸಿಯೇಶನ್ ಆಫ್ ಕನ್ಸಲ್ಟಿಂಗ್ ಸಿವಿಲ್ ಇಂಜಿನಿಯರ್ಸ್ (ಇಂಡಿಯಾ) ಬೀದರ ಘಟಕದ ಅಧ್ಯಕ್ಷರಾದ ವೀರಶೆಟ್ಟಿ ಮಣಗೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು ಈ ದಿನಾಚರಣೆ ನಿಮಿತ್ಯ ಬೆ. 9-30 ಕ್ಕೆ ನಗರದ ಬಸವೇಶ್ವರ ವೃತ್ತದಿಂದ ಸರ್. ಎಂ.ವಿಶ್ವೇಶ್ವರಯ್ಯನವರ ಭಾವಚಿತ್ರದ ಮೆರವಣಿಗೆ ಜರುಗಲಿದೆ.

ಮೆರವಣಿಗೆಯನ್ನು ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರರಾದ ಶಿವಶಂಕರ ಕಾಮಶೆಟ್ಟಿ ಉದ್ಘಾಟಿಸುವರು. ಈ ಮೆರವಣಿಗೆಯು ಬಸವೇಶ್ವರ ವೃತ್ತದಿಂದ ಭಗತಸಿಂಗ್ ವೃತ್ತ, ಮಹಾವೀರ ವೃತ್ತ, ಅಂಬೇಡ್ಕರ್ ವೃತ್ತ, ಶಿವಾಜಿ ವೃತ್ತ, ಹರಳಯ್ಯ ವೃತ್ತ, ಮೋಹನ್ ಮಾರ್ಕೆಟ್, ರೋಟರಿ ವೃತ್ತದ ಮಾರ್ಗವಾಗಿ ಸರಿಯಾಗಿ ಬೆ. 11-30ಕ್ಕೆ ಡಾ. ಚನ್ನಬಸವಪಟ್ಟದ್ದೇವರ ರಂಗಮಂದಿರ ತಲುಪಲಿದೆ. ನಂತರ ಮಧ್ಯಾಹ್ನ 12-45 ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದ್ದು, ಕಾರ್ಯಕ್ರಮದಲ್ಲಿ ಕರ್ನಾಟಕ ನೀರಾವರಿ ನಿಗಮದ ನಿ. ವ್ಯವಸ್ಥಾಪಕ ನಿರ್ದೇಶಕ ಮಲ್ಲಿಕಾರ್ಜುನ ಗುಂಗೆ ಮುಖ್ಯ ಅತಿಥಿಗಳಾಗಿ ಮಾತನಾಡುವರು. ಗೌರವ ಅತಿಥಿಗಳಾಗಿ ಮಹಾರಾಷ್ಟ್ರ ರಾಜ್ಯದ ಜಾಲನಾ ಜಿಲ್ಲೆಯ ಎಸ್‌ಆರ್‌ಜೆ ಪೀಟಿ ಸ್ಟೀಲ್ ಕಂಪನಿಯ ಪ್ರಾದೇಶಿಕ ವ್ಯವಸ್ಥಾಪಕ ವಲ್ಲಭ ಪಾತುರಕರ್ ಪಾಲ್ಗೊಳ್ಳುವರು.

ಈ ಕಾರ್ಯಕ್ರಮವು ಸಂಪೂರ್ಣ ರಾಜಕೀಯ ರಹಿತವಾಗಿರಲಿದ್ದು, ಯಾವುದೇ ಜನಪ್ರತಿನಿಧಿಗಳಾಗಲೀ, ರಾಜಕೀಯ ವ್ಯಕ್ತಿಗಳಾಗಲೀ ಕಾರ್ಯಕ್ರಮಕ್ಕೆ ಆಹ್ವಾನಿಸಿಲ್ಲ. ಈ ಸಂದರ್ಭದಲ್ಲಿ ಕೃಷ್ಣ ಭಾಗ್ಯ ಜಲ ನಿಗಮದ ನಿ. ಸಹಾಯಕ ಅಭಿಯಂತರರಾದ ವಿಲಾಸಕುಮಾರ ಮಾಶೆಟ್ಟಿ ಹಾಗೂ ಖಾಸಗಿ ಇಂಜಿನಿಯರ್‌ರಾದ ಸುಧಾಕರ ಗರ್ಜೆ ಅವರನ್ನು ಸನ್ಮಾನಿಸಲಾಗುತ್ತಿದೆ. ಇದೇ ವೇಳೆ ಡಿಪ್ಲೋಮಾ ಸಿವಿಲ್ ಹಾಗೂ ಸಿವಿಲ್ ಇಂಜಿನಿಯರ್ ಅಧ್ಯಯನ ಮಾಡುತ್ತ ಹೆಚ್ಚು ಅಂಕ ಪಡೆದುಕೊಂಡ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಗುತ್ತಿದೆ ಎಂದು ಮಣಗೆ ತಿಳಿಸಿದರು.

2011 ರಿಂದ ಈ ಸಂಸ್ಥೆ ಪ್ರಾರಂಭವಾಗಿದ್ದು ಅಂದಿನಿಂದ ಈ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ. ಅಸೋಸಿಯೇಶನ್ ಆಫ್ ಸಿವಿಲ್ ಇಂಜಿನಿಯರ್ಸ್ ಅಸೋಸಿಯೇಶನ್ ಕೂಡಾ ಈ ಕಾರ್ಯಕ್ರಮಕ್ಕೆ ಸಹಕಾರ ನೀಡುತ್ತಿದೆ ಎಂದರು.

ಅಸೋಸಿಯೇಶನ್ ಕಾರ್ಯದರ್ಶಿ ಅಶೋಕ ಉಪ್ಪೆ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ಅಸೋಸಿಯೇಶನ್ ಖಜಾಂಚಿ ಓಂಕಾರ ಪಾಟೀಲ, ಆಡಳಿತ ಮಂಡಳಿ ಸದಸ್ಯ ಶಿವಕುಮಾರ ಪಾಟೀಲ, ಅಮೀತಕುಮಾರ ನಾಗೂರೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಸವೇಶ್ವರ ಎಂಟರ್‌ಪ್ರೈಸಸ್ ಗಾಂಧಿಗಂಜ್ ಸಂಸ್ಥೆಯ ವಿರುದ್ಧ ಮಾಡಿರುವ ಆರೋಪ ನಿರಾಧಾರ: ಬಾಬು ಪಾಸ್ವಾನ್



ಮಲ್ಲಮ್ಮ ನುಡಿ ವಾರ್ತೆ ಬೀದರ. ಸೆ. 12 : ಮೆ॥ ಬಸವೇಶ್ವರ ಎಂಟರ್‌ಪ್ರೈಸಸ್ ಗಾಂಧಿಗಂಜ್ ಸಂಸ್ಥೆಯ ವಿರುದ್ಧ ಮಾಡಿರುವ ಆರೋಪ ನಿರಾಧಾರ ಎಂದು ದಲಿತ ಸಂಘರ್ಷ ಸಮಿತಿಯ ಜಿಲ್ಲಾ ಸಂಚಾಲಕ ಬಾಬುರಾವ ಪಾಸ್ವಾನ್ ಪ್ರತಿಪಾದಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ಸಂಸ್ಥೆಯು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಕಳೆದ 20 ವರ್ಷಗಳಿಂದ ಉತ್ತಮ ಗುಣಮಟ್ಟದ ಆಹಾರಧಾನ್ಯ ಮತ್ತು ಇತರೆ ಸಾಮಗ್ರಿಗಳನ್ನು ನಿರಂತರವಾಗಿ ಸರಬರಾಜು ಮಾಡುತ್ತಿದೆ. ಈ ಮೂಲಕ ಸಾವಿರಾರು ವಿದ್ಯಾರ್ಥಿಗಳು ಸಮರ್ಪಕ ಪಠ್ಯಚಟುವಟಿಕೆಗಳನ್ನು ನಡೆಸುವಲ್ಲಿ ಸಹಾಯವಾಗುತ್ತಿದೆ ಎಂದರು.

2021-22ನೇ ಸಾಲಿನ ಆಹಾರಧಾನ್ಯ ಮತ್ತು ಇತರೆ ಸಾಮಗ್ರಿಗಳ ಸರಬರಾಜಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ತಾಲ್ಲೂಕು ಮಟ್ಟದಲ್ಲಿ ಟೆಂಡರ್ ಪ್ರಕ್ರಿಯೆ ನಡೆಸಿ ಎಲ್.-1 ಆಯ್ಕೆಗೆ ಮೆ॥ ಬಸವೇಶ್ವರ ಎಂಟರ್‌ಪ್ರೈಸಸ್ ಗಾಂಧಿಗಾಜ್ ಸಂಸ್ಥೆಗೆ ಟೆಂಡರ್ ಆದೇಶ ನೀಡಿತ್ತು. ಸಂಸ್ಥೆ ನಿಯಮಾನುಸಾರವಾಗಿ ದರಪಟ್ಟಿ ಪ್ರಕಾರ ತಿಂಗಳು ಪ್ರತಿ ತಿಂಗಳು ಸರಬರಾಜು ಮಾಡುತ್ತಾ ಬಿಲ್ಲು ಸಲ್ಲಿಸುತ್ತಿತ್ತು.

ಆದರೆ, 2022 ಸೆಪ್ಟೆಂಬರ್ ತಿಂಗಳ ಆಹಾರಧಾನ್ಯ ಬಿಲ್ಲಿನಲ್ಲಿ ದರ ವ್ಯತ್ಯಾಸವಾಯಿತು ಎಂಬ ಕಾರಣಕ್ಕೆ ?13,81,383/- ಸರ್ಕಾರಕ್ಕೆ ಜಮಾ ಮಾಡುವಂತೆ ಸೂಚನೆ ನೀಡಲಾಯಿತು. ಪರೀಕ್ಷೆ ನಡೆಸಿದಾಗ, ಸಂಸ್ಥೆಗೆ ಒಟ್ಟು ಬಿಲ್ ?30,14,570/- ನಲ್ಲಿ ?16,30,523/- ದಿನಾಂಕ 13-02-2024 ರಂದು ಪಾವತಿಸಲಾಗಿದೆ ಎಂದು ದೃಢಪಟ್ಟಿತ್ತು. ದಿನಾಂಕ 04.09.2025 ರಂದು ಸಮಾಜ ಕಲ್ಯಾಣ ಇಲಾಖೆ ಬೀದರ್ ಕಚೇರಿಯಿಂದ ಬಸವೇಶ್ವರ ಎಂಟರ್‌ಪ್ರೈಸಸ್ ಅವರಿಗೆ ಆಹಾರ ಪದಾರ್ಥಗಳ ಸರಬರಾಜಿಗೆ ಸಂಬಂಧಪಟ್ಟಂತೆ ಕಾರ್ಯಾದೇಶ ನೀಡಲಾಗಿದೆ. ಆದರೆ ತಾಂತ್ರಿಕ ಕಾರಣಗಳನ್ನು ಉಲ್ಲೇಖಿಸಿ ದಿನಾಂಕ 06.09.2025 ರಂದು ತಾತ್ಕಾಲಿಕ ತಡೆಆಜ್ಞೆ ಜಾರಿಗೊಳಿಸಲಾಗಿದ್ದು, ಈ ಆದೇಶದ ವಿರುದ್ಧವಾಗಿ ಸದರಿ ಸಂಸ್ಥೆಯವರು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಕಲಬುರ್ಗಿ ಪೀಠದಲ್ಲಿ ಫ.ಕ.ನಂ.202597/2025 ಅರ್ಜಿ ಸಲ್ಲಿಸಿದ್ದಾರೆ.

ಮಾನ್ಯ ನ್ಯಾಯಾಲಯವು ದಿನಾಂಕ 08.09.2025 ರಂದು ಸಮಾಜ ಕಲ್ಯಾಣ ಇಲಾಖೆ ಕಚೇ-ರಿಯ ದಿನಾಂಕ: 06.09.2025ರ ಆದೇಶದ ಮೇಲೆ ತಡೆ ನೀಡಿದೆ ಹಾಗೂ ಕಾರ್ಯಾದೇಶದಂತೆ ಆಹಾರ ಸರಬರಾಜು ಮುಂದುವರಿಸಬಹುದು ಎಂಬಂತೆ ತೀರ್ಪು ನೀಡಲಾಗಿದೆ. ಅಲ್ಲದೆ, ಮಾನ್ಯ ನ್ಯಾಯಾಲಯದ ಆದೇಶದ ಪ್ರತಿಯನ್ನು ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಹಾಗೂ ಸಂಬಂಧಿತ ಇಲಾಖೆಗೆ ಸಲ್ಲಿಸಿರುತ್ತಾರೆ. ಆದರೆ ಈವರೆಗೆ ಯಾವುದೇ ಇಂಡೆಂಟ್‌ಗಳ ಜಾರಿಯಾಗಿಲ್ಲದ ಕಾರಣ, ಶಾಲಾ ಮಕ್ಕಳಿಗೆ ಆಹಾರ ಸರಬರಾಜು ನಿಂತ ಸ್ಥಿತಿಯಲ್ಲಿದೆ, ಇದು ಮಕ್ಕಳ ಹಿತಕ್ಕೆ ವಿರುದ್ಧವಾಗಿದೆ. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಇಂಡೆಂಟ್‌ಗಳನ್ನು ಬಿಡುಗಡೆ ಮಾಡಲು ಸೂಚನೆ ನೀಡಬೇಕಾಗಿದೆ. ನಿಯಮಾನುಸಾರವೇ ಬಸವೇಶ್ವರ ಎಂಟರ್‌ಪ್ರೈಸಸ್ ಅವರಿಗೆ ಆಹಾರ ಪದಾರ್ಥಗಳ ಸರಬರಾಜಿಗೆ ಸರಬರಾಜು ಆದೇಶ ನೀಡಿದ ಮೇಲೆ ತಾಂತ್ರಿಕ ದೋಷದ ನೆಪವೊಡ್ಡುವುದು ಸರಿಯಾದ ಕ್ರಮವಲ್ಲ. ಈ ಬಗ್ಗೆ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ ಕಲಬುರಗಿ ಪೀಠ ಆದೇಶಿಸಿದರೂ ವಿಳಂಬ ಮಾಡುತ್ತಿರುವುದು ನ್ಯಾಯಾಂಗದ ಸ್ಪಷ್ಟ ಉಲ್ಲಂಘನೆಯಾಗಿದೆ. ಈ ಬಗ್ಗೆ ಸಂಬಂಧಪಟ್ಟವರ ಮೇಲೆ ಶಿಸ್ತಿನ ಕ್ರಮ ಜರುಗಿಸಿ, ಶೀಘ್ರದಲ್ಲಿ ಸಮಾಜ ಕಲ್ಯಾಣ ಇಲಾಖೆ ಬೀದರ್ ಕಚೇರಿಯಿಂದ ಬಸವೇಶ್ವರ ಎಂಟರ್‌ಪ್ರೈಸಸ್ ಅವರಿಗೆ ಆಹಾರ ಪದಾರ್ಥಗಳ ಸರಬರಾಜು ಮಾಡಲು ಅವಕಾಶ ಕಲ್ಪಿಸಬೇಕೆಂದು ತಿಳಿಸಿದ ಅವರು ಪ್ರಸ್ತುತ ಇರುವ ಕಲಬುರಗಿಯ ಏಜೆನ್ಸಿಯನ್ನು ರದ್ದು ಮಾಡಿ ಉತ್ತಮ ಹಿಂದಿನಿಂದಲೂ ಉತ್ತಮ ಗುಣಮಟ್ಟದ ಆಹಾರ ಪದಾರ್ಥಗಳನ್ನು ಸರಬರಾಜು ಮಾಡುತ್ತಿರುವ ಮೇಲಿನ ಬಸವೇಶ್ವರ ಎಂಟರ್‌ಪ್ರೈಸೆಸ್‌ಗೆ ಅವಕಾಶ ನೀಡುವ ಮೂಲಕ ಜಿಲ್ಲೆಯ ಸಂಘ-ಸಂಸ್ಥೆಗಳಿಗೆ ಪ್ರಾತಿನಿಧ್ಯ ಕಲ್ಪಿಸಬೇಕೆಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾ ಸಂಘಟನಾ ಸಂಚಾಲಕ ಶಿವರಾಜ ಲಾಡಕರ್, ರಾಜಕುಮಾರ ಶೇರಿಕಾರ, ಜೀವನ ಬುಡ್ತಾ, ಜಗನ್ನಾಥ ಪಾಲಂಕರ್, ಕಂಟೆಪ್ಪ ಬಡಿಗೇರ್, ನಗರ ಘಟಕದ ಅಧ್ಯಕ್ಷ ನಾಗೇಶ ಭಾವಿಕಟ್ಟಿ, ರಮೇಶ ಬಂಡೆ, ಓಂಕಾರ ಜಡಗೆ, ಹಾಗೂ ಇತರರು ಉಪಸ್ಥಿತರಿದ್ದರು.

# ಮಹಿಳಾ ಶಿಕ್ಷಣಕ್ಕೆ ಆದ್ಯತೆ ನೀಡಿ:ಅಂಕುಶ ಢೋಲೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಸೆ.12: ಇಂದಿನ ಪೈಪೋಟಿ ಯುಗದಲ್ಲಿ ಸ್ತ್ರೀಯರು ಸ್ವಾವಲಂಬಿ ಜೀವನ ಸಾಗಿಸಬೇಕಾದರೆ ಪಾಲಕರು ಮಹಿಳಾ ಶಿಕ್ಷಣಕ್ಕೆ ಪ್ರಥಮಾದ್ಯತೆ ನೀಡಬೇಕು ಎಂದು ಎಸ್‌ವ್ಹಿ ಸಂಸ್ಥೆಯ ಆಡಳಿತಾಧಿಕಾರಿ ಅಂಕುಶ ಢೋಲೆ ಹೇಳಿದರು.

ಇಲ್ಲಿನ ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜಿನಲ್ಲಿ ಹಮ್ಮಿಕೊಂಡ ಪ್ರತಿಭಾ ಪುರಸ್ಕಾರ ಮತ್ತು 2025-26ನೇ ಸಾಲಿನ ಪಿಯು ಪ್ರಥಮ ವರ್ಷದ ಮಕ್ಕಳ ಸ್ವಾಗತ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಎಸ್.ವ್ಹಿ.ಸಂಸ್ಥೆಯ ಅಧ್ಯಕ್ಷರಾದ ಈಶ್ವರ ಖಂಡ್ರೆ ಅವರ ಮಾರ್ಗದರ್ಶನದಲ್ಲಿ ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜಿನಲ್ಲಿ ಗ್ರಾಮೀಣ ಭಾಗದ ರೈತಾಪಿ ಕುಟುಂಬದ ವಿದ್ಯಾರ್ಥಿನಿಯರಿಗೆ ಅತ್ಯಂತ ಕಡಿಮೆ ಶುಲ್ಕದಲ್ಲಿ ಸಂಸ್ಕಾರಭರಿತ ಗುಣಮಟ್ಟದ ಶಿಕ್ಷಣ ನೀಡಲಾಗುತ್ತಿದೆ ಎಂದರು.

ನಿ.ಪ್ರಾಚಾರ್ಯ ಅಶೋಕ ರಾಜೋಳೆ ಮಾತನಾಡಿ, ದೇಶದ ಪ್ರಗತಿಯಲ್ಲಿ ಮಹಿಳೆಯರ ಪಾತ್ರ ಶ್ರೇಷ್ಠವಾಗಿದೆ. ಮಕ್ಕಳು ದುಶ್ಚಟ-ದುರ್ಗುಣಗಳಿಂದ ಅಂತರ ಕಾಪಾಡಿ ಆದರ್ಶ ಜೀವನ ರೂಪಿಸಿಕೊಳ್ಳಬೇಕು ಎಂದು ಹೇಳಿದರು.

ಸರ್ಕಾರಿ ಪಪೂ ಕಾಲೇಜು ಪ್ರಾಚಾರ್ಯ ಸುಖದೇವ ಬಿರಾದಾರ ಮಾತನಾಡಿ, ಪಿಯು ಶಿಕ್ಷಣ ವಿದ್ಯಾರ್ಥಿ ಜೀವನದ ಪ್ರಮುಖ ಘಟ್ಟವಾಗಿದೆ ಎಂದರು.

ಸಿ.ಬಿ. ಪದವಿ ಕಾಲೇಜಿನ ಪ್ರಾಚಾರ್ಯ ಡಾ.ಸಂತೋಷ ತೀರ್ಥೆ ಮಾತನಾಡಿ, ಮಕ್ಕಳು ಉನ್ನತ ಗುರಿಯೊಂದಿಗೆ ಉನ್ನತ ಶಿಕ್ಷಣ ಪಡೆದು ಹೆತ್ತವರಿಗೆ ಕೀರ್ತಿ ತರಬೇಕು ಎಂದು ಹೇಳಿದರು.

ಪ್ರಾಚಾರ್ಯ ಭೀಮರಾವ ಗಿರಿ ಪ್ರಾಸ್ತಾವಿಕ ಮಾತನಾಡಿ, ಸಂಸ್ಥೆ ಅಧ್ಯಕ್ಷರೂ ಆದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಕಾರ್ಯದರ್ಶಿ ಸಂಸದ ಸಾಗರ ಖಂಡ್ರೆ ಅವರ ಶೈಕ್ಷಣಿಕ ಕಾಳಜಿಯಿಂದ ಪ್ರತಿ ವರ್ಷ ನಮ್ಮ ಕಾಲೇಜಿನ ಪಿಯು ಫಲಿತಾಂಶ ಕ-ಕ ಭಾಗದಲ್ಲಿಯೇ ಅತ್ಯುತ್ತಮವಾಗಿರುತ್ತದೆ ಎಂದು ತಿಳಿಸಿದರು.

ಪ್ರತಿಭಾ ಪುರಸ್ಕಾರ:ಕಳೆದ ಸಾಲಿನಲ್ಲಿ ಗರಿಷ್ಠ ಅಂಕ ಪಡೆದ ಪಿಯು ದ್ವಿತೀಯ ಮಕ್ಕಳಿಗೆ ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನ ನೀಡಿ ಗೌರವಿಸಲಾಯಿತು.

ಐಟಿಐ ಕಾಲೇಜು ಪ್ರಿನ್ಸಿಪಾಲ್ ಸಂಗಪ್ಪ ಹುಲಸುರೆ, ಲಕ್ಷ್ಮಿ ??ಬಾಯಿ ಖಂಡ್ರೆ ಪಬ್ಲಿಕ್ ಸ್ಕೂಲ್ ಪ್ರಾಚಾರ್ಯ ಸಂತೋಷ ಮಿರಜಕರ್ ಸೇರಿದಂತೆ ಕಾಲೇಜು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು. ಕು.ಸ್ವಾತಿ ಗಣಪತಿ ಸ್ವಾಗತಿಸಿದರು. ಪ್ರೊ.ಲಾವಣ್ಯ ಶಿವಸ್ವಾಮಿ ನಿರೂಪಿಸಿದರು. ಕು.ಪೂಜಾ ಕರಬಸಯ್ಯ ವಂದಿಸಿದರು.

'ಹೆಣ್ಮಕ್ಕಳ ಸರ್ವಾಂಗೀಣ ವಿಕಾಸಕ್ಕಾಗಿ ಡಾ.ಚನ್ನಬಸವ ಪಟ್ಟದ್ದೇವರು ಮತ್ತು ಮಾಜಿ ಮಂತ್ರಿ ಡಾ.ಭೀಮಣ್ಣ ಖಂಡ್ರೆಯವರು ಭಾಲ್ಕಿಯಲ್ಲಿ ಅಕ್ಕಮಹಾದೇವಿ ಕನ್ಯೆ ಪದವಿ ಪೂರ್ವ ಕಾಲೇಜು ಪ್ರಾರಂಭಿಸಿರುವುದರಿಂದ ಇಂದು ಮಹಿಳೆಯರು ಶಿಕ್ಷಣ ಪಡೆದು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ಉನ್ನತ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವುದು ಹೆಮ್ಮೆಯ ಸಂಗತಿ.

**'-ಅಂಕುಶ ಢೋಲೆ**
**ಆಡಳಿತಾಧಿಕಾರಿ ಎಸ್.ವ್ಹಿ.ಸಂಸ್ಥೆ ಭಾಲ್ಕಿ.**

# ಸೆ. 20ರಂದು ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆಯ 11ನೇ ಸಂಸ್ಥಾಪನಾ ದಿನ ಹಾಗೂ ಕಲ್ಯಾಣ ಕರ್ನಾಟಕ ಉತ್ಸವ: ಸ್ವಾಮಿದಾಸ್ ಕೆಂಪೆನೋರ್




ಬೀದರ. ಸೆ. 12 : ಈ ತಿಂಗಳ 20 ರಂದು ಮಧ್ಯಾಹ್ನ 1 ಗಂ-ಟೆಗೆ ನಗರದ ಡಾ. ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆಯ 11ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಮತ್ತು ಕಲ್ಯಾಣ ಕರ್ನಾಟಕ ಉತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಕಲ್ಯಾಣ ಕರ್ನಾಟಕ ನಿರ್ಮಾಣ ಸೇನೆಯ ಸಂಸ್ಥಾಪಕ ಅಧ್ಯಕ್ಷ ಸ್ವಾಮಿದಾಸ್ ಕೆಂಪೆನೋರ್ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಕರೆದ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು ಈ ನಿಮಿತ್ಯ 11 ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನಿಯರಿಗೆ ಸನ್ಮಾನ ಕಾರ್ಯಕ್ರಮ ಜರುಗುವುದು. ಹಾಗೂ ಕಲ್ಯಾಣ ನಾಡಿನಲ್ಲಿ ಸೇನೆ ಬಲಪಡಿಸಲು ಕಾರ್ಯಕರ್ತರ ಬೃಹತ್ ಸಮಾವೇಶ ಆಯೋಜಿಸಲಾಗಿದೆ ಎಂದರು. ಬೆ. 11 ಗಂಟೆಗೆ ನಗರದ ಶಿವಾಜಿ ವೃತ್ತದಿಂದ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಭವ್ಯ ಮೆರವಣಿಗೆ ಹಮ್ಮಿಕೊಂಡಿದ್ದು, ಮೆರವಣಿಗೆಯು ನಗರದ ಪ್ರಮುಖ ವೃತ್ತಗಳಾದ ಅಂಬೇಡ್ಕರ್ ವೃತ್ತ, ಮಹಾವೀರ ಸರ್ಕಲ್, ಬಸವೇಶ್ವರ ವೃತ್ತ, ಹರಳಯ್ಯ ವೃತ್ತ, ರೋಟರಿ ವೃತ್ತದ ಮಾರ್ಗವಾಗಿ ಡಾ. ಚನ್ನಬಸವ ಪಟ್ಟದ್ದೇವರ ರಂಗಮಂದಿರ ತಲುಪುವುದು ಎಂದರು. ಮೆರವಣಿಗೆಯಲ್ಲಿ ಕ.ಕ. ಹೋರಾಟಗಾರರಾದ ಸರ್ದಾರ ವಲ್ಲಭಾಯಿ ಪಟೇಲ್, ಸ್ವಾಮಿ ರಮಾನಂದ ತೀರ್ಥ, ದಿ.ಚಂದ್ರಶೇಖರ ಪಾಟೀಲ, ದಿ.ವೈಜಿನಾಥ ಪಾಟೀಲ, ಮಲ್ಲಪ್ಪ ಕಲ್ಲೂರ, ವಿಶ್ವನಾಥರೆಡ್ಡಿ ಮುದ್ನಾಳ, ಎಸ್.ಪಿ.ಅವಧನಿ ಅವರ ಭಾವಚಿತ್ರದ ಮೆರವಣಿಗೆ ಜರುಗಲಿದೆ ಎಂದರು. ನಂತರ ವೇದಿಕೆ ಕಾರ್ಯಕ್ರಮ ಜರುಗುವುದು. ಔದತಪುರದ ಪೂಜ್ಯ ಮಚೇಂದ್ರನಾಥ ಮಹಾರಾಜರು ಸಾನಿಧ್ಯ ವಹಿಸಲಿರುವ ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಉದ್ಘಾಟಿಸುವರು. ಸ್ವಾಮಿದಾಸ್ ಕೆಂಪೆನೋರ್ ಅಧ್ಯಕ್ಷತೆ ವಹಿಸಲಿದ್ದು, ಪೌರಾಡಳಿತ ಸಚಿವ ರಹಿಂಖಾನ್, ಮಾಜಿ ಸಚಿವ ಬಂಡೆಪ್ಪ ಖಾಶೆಂಪೂರ, ಎಸ್.ಪಿ.ಪ್ರದೀಪ ಗುಂಟಿ, ಮಾಜಿ ಎಂಎಲ್‌ಸಿ ವಿಜಯಸಿಂಗ್, ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ, ಬುಡಾ ಅಧ್ಯಕ್ಷ ಬಸವರಾಜ ಜಾಬಶೆಟ್ಟಿ, ಬಿಜೆಪಿ ಮುಖಂಡ ಈಶ್ವರಸಿಂಗ್ ಠಾಕೂರ್, ಬಾಬು ವಾಲಿ, ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷ ಅಮೃತರಾವ ಚಿಮಕೋಡೆ, ಜೆಡಿಎಸ್ ಮುಖಂಡ ದೇವೇಂದ್ರ ಸೋನಿ, ನಗರಸಭೆ ಅಧ್ಯಕ್ಷ ಎಂ.ಡಿ.ಗೌಸ್, ಸದಸ್ಯ ರಿಯಾಜ್, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ ಬಿರಾದಾರ, ವಕೀಲ ಗೌತಮ ವಾಗರಾಜ್, ಅಶೋಕ ಮಾನೂರೆ, ವಿಶೇಷ ಆಹ್ವಾನಿತರಾಗಿ ಕಲಬುರಗಿಯ ಎಂ.ಎಸ್.ನರಿಬೋಳ, ಎಐಬಿಎಸ್‌ಪಿ ಪ್ರಮುಖರಾದ ಕೆ.ಟಿ.ವಾಸು, ಸಾಯಿಬಣ್ಣ ಜಮಾದಾರ್ ಕಲಬುರಗಿ, ಪ್ರಕಾಶ ಹಳ್ಳಿಖೇಡ, ವಿಶ್ವನಾಥ ದೀನೆ, ಪ್ರಶಾಂತ ದೊಡ್ಡಿ, ರಮೇಶ ಕಟ್ಟಿತೂಗಾಂವ, ಭಾಸ್ಕರ್ ಹಳ್ಳಿಖೇಡ, ಪ್ರಕಾಶ ಗಾದಗಿ, ಸುದರ್ಶನ ಭಂಡೆ, ಸುಧಾಕರ ಕೊಳ್ಳೂರ, ತುಕಾರಾಮ, ಬಂಟಿ ದರ್ಬಾರೆ, ಸಂಗಪ್ಪ ಪುರುಷೋತ್ತಮ, ಸಂಜು ಉಜನಿ ಸೇರಿದಂತೆ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು.

ಈ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ 11 ಜನ ಸಾಧಕರಾದ ಸರ್ಕಾರಿ ಆಸ್ಪತ್ರೆಯ ಸಿಬ್ಬಂದಿ ಸ್ವರೂಪ, ಶವಾಗಾರದ ಬಿಲಾಲ್, ಧಾರ್ಮಿಕ ಕ್ಷೇತ್ರದ ಅಮೋಸ್, ಆದೀಶ ವಾಲಿ ಸೇರಿದಂತೆ ಇನ್ನಿತರರನ್ನು ಸನ್ಮಾನಿಸಲಾಗುತ್ತಿದೆ ಎಂದು ಕೆಂಪೆನೋರ್ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ಜಿಲ್ಲಾಧ್ಯಕ್ಷ ಡಾ. ಜೇಮ್ಸ್, ಜಿಲ್ಲಾ ಸಂಯೋಜಕ ಶಿವರಾಜ ನೆಲವಾಳಕರ್, ಉಪಾಧ್ಯಕ್ಷ ಸುಂದರ ಬಬಚೇಡಿ, ಶಿರಾಜೋದ್ದಿನ್ ಪಟೇಲ್, ವಿಲ್ಸನ್ ಕುಡತೆನೋರ್, ಶ್ರೀನಾಥ ದರ್ಗಾ ಚಿದ್ರಿ, ತುಕಾರಾಮ ರಾಗಾಪುರೆ ಹಾಜರಿದ್ದರು.

# ಸರಕಾರಿ ಪ್ರಾಢ ಶಾಲೆ ಜಂಬಗಿ ಎಸ್ ಡಿ ಎಂ ಸಿ ರಚನೆ



ಔರಾದ:ಸೆ.12:ತಾಲ್ಲೂಕಿನ ಜಂಬಗಿ ಗ್ರಾಮದ ಸರಕಾರಿ ಪ್ರೌಢ ಶಾಲೆಯ ಎಸ್ ಡಿ ಎಂ ಸಿ ಅಧ್ಯಕ್ಷರಾಗಿ ಅಭಂಗರಾವ್ ತಾಡಮಲ್ಲೆ ಅವರನ್ನು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಸಂಪನ್ಮೂಲ ವ್ಯಕ್ತಿ ರವೀಂದ್ರ ಡಿಗ್ಗಿ ಮಾತನಾಡಿ, ಶಾಲೆಗಳಿಗೆ ಎಸ್‌ಡಿಎಂಸಿ ಸದಸ್ಯರು ಆಧಾರ ಶಿಲೆಯಾಗಿ ಕಾರ್ಯ ಮಾಡುತ್ತಿದ್ದಾರೆ. ಶಾಲೆಯ ಉನ್ನತೀಕರಣದಲ್ಲಿ ಇವರ ಪಾತ್ರ ಪ್ರಮುಖವಾದದ್ದಾಗಿದೆ ಎಂದರು.

ಮುಖ್ಯಗುರು ಉಮಾ ಪಾಟೀಲ್ ಮಾತನಾಡಿ, ಶಾಲೆಯಲ್ಲಿ ಶಿಕ್ಷಕರು ಮತ್ತು ಎಸ್ ಡಿ ಎಂ ಅಧ್ಯಕ್ಷ ಮತ್ತು ಸದಸ್ಯರು ಸೇರಿಕೊಂಡು ಒಮ್ಮತದಿಂದ ಕಾರ್ಯ ಮಾಡಿದರೆ ಶಾಲೆಯ ಉನ್ನತಿಕರಣದ ಜೊತೆಗೆ ಮಕ್ಕಳ ಶೈಕ್ಷಣಿಕ ಪ್ರಗತಿ ಆಗುತ್ತದೆ ಎಂದರು. ಅಭಂಗರಾವ್ ತಾಡಮಲ್ಲೆ ಅವಿರೋಧ ಆಯ್ಕೆ ಎಸ್ ಡಿ ಎಂ ಸಿ ಅಧ್ಯಕ್ಷ ರು ಮಾತನಾಡಿ, ಶಾಲೆಯ ಸಮಗ್ರ ಅಭಿವೃದ್ಧಿಗಾಗಿ ಮತ್ತು ಮಕ್ಕಳ ಶಿಕ್ಷಣದ ಗುಣಮಟ್ಟ ಕಾಪಾಡಲು ನನ್ನ ಕೈಲಾದಷ್ಟು ಶ್ರಮಿಸುವೆ. ಎಸ್ ಡಿ ಎಂ ಸದಸ್ಯರು ಮತ್ತು ಶಾಲೆಯ

ಶಿಕ್ಷಕರ ಮನಗೆದ್ದು ಮಕ್ಕಳ ಶಿಕ್ಷಣದ ಅಭಿವೃದ್ಧಿ ಗೆ ದುಡಿಯುತ್ತೇನೆ ಎಂದರು. ಬಾಲಾಜಿ ಪಾಟೀಲ್, ದತ್ತಾತ್ರಿ ಗಾಯಕವಾಡ, ಶಿವಾಜಿ ಪಾಟೀಲ್, ಮೊಬಿನ್, ಕೌಶಬಾಯಿ, ವಿಠ್ಠಲ್ ರಾವ್ ಬುಧರೆ, ಇತರರಿದ್ದರು..

# ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆಯ ಚುನಾವಣೆ : ಬಿಜೆಪಿ ಬೆಂಬಲಿತ ಅಭ್ಯರ್ಥಿ ಕಣಕ್ಕೆ ಚುನಾವಣೆ ನಿರ್ವಹಣ ಸಮಿತಿ ರಚನೆ

ಬೀದರ. ಸೆ. 12 : ಬೀದರ ತಾಲೂಕಿನ ಜನವಾಡ ಇಮಾಮಪೂರ ಗ್ರಾಮದ ಜಿ.ಎನ್.ನಗರ ಹತ್ತಿರುವ ಇರುವ ನಾರಂಜಾ ಸಹಕಾರ ಸಕ್ಕರೆ ಕಾರ್ಖಾನೆ ನಿ. ಇದರ ಆಡಳಿತ ಮಂಡಳಿಗೆ ನಿರ್ದೇಶಕರ ಚುನಾವಣೆಯನ್ನು ಸೆ.27 ರಂದು ನಿಗದಿ ಪಡಿಸಲಾಗಿದೆ. ಈ ಚುನಾವಣೆಯಲ್ಲಿ ಭಾರತೀಯ ಜನತಾ ಪಾರ್ಟಿಯ ಬೆಂಬಲಿತ ಅಭ್ಯರ್ಥಿಯನ್ನು ಚುನಾವಣೆ ಕಣಕ್ಕೆ ಇಳಿಸಲಾಗುವುದು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಅವರು ಹೇಳಿದ್ದಾರೆ.




ಈ ಚುನಾವಣೆಗೆ ಬಿಜೆಪಿ ಪಕ್ಷದಿಂದ ಚುನಾವಣಾ ನಿರ್ವಹಣಾ ಸಮಿತಿಯನ್ನು ರಚಿಸಲಾಗಿದೆ ಈ ಸಮಿತಿಯ ಸಂಚಾಲಕನಾಗಿ ಗುರುನಾಥ ಜ್ಯಾಂತಿಕರ , ಸದಸ್ಯರುಗಳಾಗಿ ಶಿವಾನಂದ ಮಂತಾಳಕರ ಹುಮನಾಬಾದ, ಈಶ್ವರ ಸಿಂಗ್ ಠಾಕೂರ್ ಬೀದರ, ವಸಂತ ಬಿರಾದಾರ ವಕೀಲ ಔರಾದ, ರಾಜರೆಡ್ಡಿ ಶಹಾಬಾದಿ ಬೀದರ ದಕ್ಷಿಣ, ಅಶೋಕ ಪಾಟೀಲ ಮೆಹಕರ್ ಭಾಲ್ಕಿ. ಅಶೋಕ ವಕಾರೆ ಬೆಲೂರು ಬಸವಕಲ್ಯಾಣ ನಿಯೋಕ್ತಿಗೊಡಿದ್ದಾ-ರೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಹಿರಿಯ ನಾಗರಿಕರಿಗೆ ಉಚಿತ ದಂತ ತಪಾಸಣೆ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಬೀದರ್:- ತಾಲೂಕಿನ ಮರಕುಂದಾ ಗ್ರಾಮದ ಚಾಲುಕ್ಯ ಶಿಕ್ಷಣ ಸಂಸ್ಥೆಯ ಪ್ರಾಥಮಿಕ ಶಾಲೆಯಲ್ಲಿ ಸಮಾಜ ಕಾರ್ಯಕರ್ತ ಮತ್ತು ಪರಿಸರವಾದಿ ಶೈಲೇಂದ್ರ ಕಾವಡಿ ಇವರ ನೇತೃತ್ವದಲ್ಲಿ ಹಿರಿಯ ನಾಗರಿಕರಿಗೆ ಹಾಗೂ ಮಕ್ಕಳಿಗೆ ಶನಿವಾರ ಸೆಪ್ಟೆಂಬರ್ 13ರಂದು ಬೆಳಗ್ಗೆ 11 ಗಂಟೆಗೆ ಎಸ್.ಬಿ.ಪಾಟೀಲ್ ದಂತ ಮಹಾವಿದ್ಯಾಲಯ ಬೀದರ್



ವತಿಯಿಂದ ಉಚಿತ ಹಲ್ಲಿನ ತಪಾಸಣೆ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಈ ಶಿಬಿರದ ಸದುಪಯೋಗ ಗ್ರಾಮಸ್ಥರು ಪಡೆದುಕೊಳಬೇಕು ಎಂದು ಮಂಡಲ್ ಪಂಚಾಯತ್ ಮಾಜಿ ಸದಸ್ಯರು, ಪಿಎಲ್ ಡಿ ಬ್ಯಾಂಕ್ ಬೀದರ್ ಮಾಜಿ ನಿರ್ದೇಶಕರು, ಹಾಗೂ ಪರಿಸರವಾದಿ ಶೈಲೇಂದ್ರ ಕಾವಡಿ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಧಾರ್ಮಿಕ ಪ್ರಜ್ಞೆ ಇರುವಲ್ಲಿ ದೈವ ಕೃಪೆ ನಿಶ್ಚಿತ – ಹಾರಕೂಡ ಶ್ರೀ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಸೆ 12 ಎಲ್ಲಿ ಸದ್ವಿಚಾರ, ಸಹಯೋಗ, ಶಾಂತಿ ಮತ್ತು ಧಾರ್ಮಿಕ ಪ್ರಜ್ಞೆ ಇರುತ್ತದೆಯೋ ಅಲ್ಲಿ ಸದಾಕಾಲ ದೇವರ ಕೃಪೆ ಇರುವುದು ನಿಶ್ಚಿತ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು. ತಾಲೂಕಿನ ಖಾನಾಪುರ ಬಿ. ಗ್ರಾಮದ ಲಕ್ಷ್ಮೀದೇವಿ ಮಂದಿರದಲ್ಲಿ ಗ್ರಾಮಸ್ಥರಿಂದ ಆಯೋಜಿಸಿದ ಗುರುವಂದನೆ ಹಾಗೂ 874ನೇ ತುಲಾಭಾರ ಸಮಾರಂಭದ ಪಾವನ ಸನ್ನಿಧಾನವಹಿಸಿ ಶ್ರೀವಾಣಿ ಕರುಣಿಸಿದ ಪೂಜ್ಯರು, ಸಂಘಟಿತ ಮನೋಭಾವನೆಯಿಂದ ಸಮಾಜದಲ್ಲಿ ಮಹತ್ವದ ಕಾರ್ಯಸಿದ್ಧಿ ಲಭಿಸುತ್ತದೆ. ಸಮಾನ ಮನಸ್ಕರ ಸಂಘಟನೆಯಲ್ಲಿ ಅದ್ಭುತ ಶಕ್ತಿ ಇರುವುದರಿಂದ ಕೈಗೊಂಡ ಕಾರ್ಯಗಳು ಸುಲಭ ಸಾಧ್ಯವಾಗುತ್ತವೆ.

ಸಂಘಟನೆ ಎಂದರೆ ಕೇವಲ ಜನಸಂದಣಿ ಅಲ್ಲ, ಅದೊಂದು ವ್ಯವಸಾಯಾತ್ಮಕವಾದ ಸಂಸ್ಥೆಯಾಗಿದ್ದು ಐಕ್ಯತೆಯಿಂದ ಧ್ಯೇಯ ಸಾಧನೆ ಮಾಡುವುದೇ ಪ್ರಧಾನ ಅಂಶವಾಗಿರುತ್ತದೆ.

ವಿಶೇಷವಾಗಿ ಧರ್ಮಕಾರ್ಯಗಳಲ್ಲಿ ಸಂಘಟನೆಯ ಬಲ ಮಹತ್ವದ ಪಾತ್ರ ನಿಭಾಯಿಸುತ್ತದೆ ಎಂದು ನುಡಿದರು.

ಖಾನಾಪುರ ಬಿ. ಗ್ರಾಮದ ಭಕ್ತರೆಲ್ಲರೂ ಒಂದಾಗಿ ಚೆಂದಾಗಿ ಗುರುನಿಷ್ಠೆಯಿಂದ ಆಯೋಜಿಸಿದ ಈ ಧಾರ್ಮಿಕ ಸಮಾರಂಭ ನಮಗೆ ಖುಷಿ ನೀಡಿದ್ದು, ಸರ್ವರ ಬಾಳಲ್ಲಿ ಹಾರಕೂಡಧೀಶ ಶುಭವನ್ನುಂಟು ಮಾಡಲಿ ಎಂದು ಹಾರೈಸಿದರು.

ಸಾವಿತ್ರಿ ಶರಣು ಸಲಗರ, ಮುಖಂಡರಾದ ಶಿವಕುಮಾರ ಶಟಗಾರ, ಸುಧಾರಾಣಿ ಪಾಟೀಲ ಮಾತನಾಡಿದರು. ಸಂಜು ಸೂಗರೆ, ಅಮರ ಬಡದಾಳೆ, ಮಹಾರಾಜಪ್ಪಾ ಮೂಳೆ, ವೀರಣ್ಣ ಬಿರಾದಾರ, ಮೊಹ್ಮದ್ ಶರಣನಗರ, ಶರಣಬಸಪ್ಪ ದಳಪತಿ, ಶಿವರಾಜ ಕಲ್ಲಾ, ಶಾಲಿವಾನ ಪಾಟೀಲ, ಬಾಬುರಾವ ಜಟ್ ಮುಂತಾದವರು ಭಾಗವಹಿಸಿದ್ದರು. ಚಂದ್ರಕಾಂತ ಬಿರಾದಾರ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಎಲ್ಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು. ಸಂತೋಷ ಬಿರಾದರ ವಂದಿಸಿದರು.

# ಕ.ಕ ಉತ್ಸವ ಹಾಗೂ ವಿಶ್ವ ಕರ್ಮ ಜಯಂತಿ ಪೂರ್ವಭಾವಿ ಸಭೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಕಲ್ಯಾಣ ಕರ್ನಾಟಕ ಉತ್ಸವ ಮತ್ತು ವಿಶ್ವ ಕರ್ಮ ದಿನಾಚರಣೆಯ ನಿಮಿತ್ಯ ತಹಸೀಲ್ದಾರ್ ಕಚೇರಿಯಲ್ಲಿ ಗುರುವಾರ ತಹಸೀಲ್ದಾರ್ ಅಮಿತಕುಮಾರ ಕುಲಕರ್ಣಿ ಅವರ ಅಧ್ಯಕ್ಷೆಯಲ್ಲಿ ಪೂರ್ವಭಾವಿ ಸಭೆ ನಡೆಯಿತು.

ಕಲ್ಯಾಣ ಕರ್ನಾಟಕ ಭಾಗಕ್ಕೆ ಸೆಪ್ಟೆಂಬರ 17, ಸಂಪೂರ್ಣವಾಗಿ ಸ್ವಾತಂತ್ರ್ಯ ಸಿಕ್ಕ ಅಮೃತ ಕ್ಷಣ, ಹಾಗಾಗಿ ನಾವೆಲ್ಲರೂ ಈ ದಿನವನ್ನು ಸಂಭ್ರಮ ಸಡಗರದಿಂದ ಆಚರಣೆ ಮಾಡಿ ಈ ದಿನದ ಮಹತ್ವ ಯುವ ಜನಾಂಗಕ್ಕೆ ತಿಳಿಸಬೇಕಾಗಿದೆ.

ಅಂದು ಬೆಳಗ್ಗೆ 8:30ಕ್ಕೆ ವಿಶ್ವ ಕರ್ಮ ಜಯಂತಿ ನಿಮಿತ್ಯ ಭಾವ ಚಿತ್ರ ಪೂಜೆ ನಡೆಯುವುದು,

8.45ಕ್ಕೆ ರಾಷ್ಟ್ರಧ್ವಜಾರೋಹಣ ನೆರವೇರಿಸಲಾಗುತ್ತದೆ. ಉತ್ಸವದ ನಿಮಿತ್ತ ಪ್ರೌಢಶಾಲೆ ಮಕ್ಕಳಿಗೆ ನಿಬಂಧ ಮತ್ತು ಭಾಷಣ ಸ್ಪರ್ಧೆ ಹಮ್ಮಿಕೊಳ್ಳಲಾಗಿದ್ದು, ಕ್ಷೇತ್ರ ಶಿಕ್ಷಣಾಧಿ ಕಾರಿಗಳ ಆದೇಶದ ಮೇರೆಗೆ ಆಯಾ ಶಾಲೆಯಲ್ಲಿ ಸ್ಪರ್ಧೆಗಳು ನಡೆಸತಕ್ಕದು. ಸ್ಪರ್ಧೆಯಲ್ಲಿ ವಿಜೇತರಾದ ಇಬ್ಬರಿಗೆ ಬಹುಮಾನ ನೀಡಿ ಸತ್ಕರಿಸಲಾಗುತ್ತದೆ.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಸುಶೀಲಾಬಾಯಿ ಮಹೇಶ, ಕ. ಸಾ. ಪ ಅಧ್ಯಕ್ಷ ಪ್ರಶಾಂತ ಮಠಪತಿ, ಹಿರಿಯ ಸಾಮಾಜಿಕ ಹೋರಾಟಗಾರ ವೈಜಿನಾಥ ವಡ್ಡೆ, ಉತ್ತಮ ಮಾನೆ, ರೈತ ಸಂಘದ ತಾಲೂಕಾಧ್ಯಕ್ಷ ಪ್ರವೀಣ ಕುಲಕರ್ಣಿ, ವಲಯ ಸಂಪನ್ಮೂಲ ವ್ಯಕ್ತಿ ನಾಗೇಶ ಸಂಗಮೆ, ಜನಾರ್ಧನ ಸಾವರಗೇಕರ್, ಯಶವಂತ ಬಿರಾದಾರ, ಎಸ್.ಎನ್.ಶಿವಣಕರ್, ನಿವೃತ್ತ ಪ್ರಾಚಾರ್ಯರ ಡಾ.ಎಸ್. ಎಸ ಮೈನಾಳೆ, ಬಾವುರಾವ ಹೇಡೆ, ಮನೋಜ ಹಿರೇಮಠ, ರಾಜಶೇಖರ ಅಜ್ಜಾ, ಸುಭಾಷ ಮಿರ್ಚೆ, ಸಿಬ್ಬಂದಿ ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಇಂದು ನಿರ್ಣಾ ಗ್ರಾಮದಲ್ಲಿ ಉಚಿತ ಆರೋಗ್ಯ ತಪಾಸಣೆ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ನಿರ್ಣಾ ಗ್ರಾಮದಲ್ಲಿ ಇಂದು ಗುರು ನಾನಕ ಆಸ್ಪತ್ರೆ ಬೀದರ್ ಮತ್ತು ಕರ್ನಾಟಕ ಸರ್ಕಾರ ಸಹಕಾರ ಇಲಾಖೆ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಹಾಗೂ ಯಶಸ್ವಿನಿ ಸಹಕಾರ ಸದಸ್ಯರ ಆರೋಗ್ಯ ರಕ್ಷಣಾ ಟ್ರಸ್ಟ್ ಇವರ ಸಂಯುಕ್ತಾಶ್ರಯದಲ್ಲಿ ಉಚಿತ ಆರೋಗ್ಯ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಗುರುನಾನಕ ಆಸ್ಪತ್ರೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ




ಎಸ್. ವಿ. ಕಾಮೇಶ್ವರ ತಿಳಿಸಿದ್ದಾರೆ. ಇಂದು ಬೆಳಿಗ್ಗೆ 10ರಿಂದ 4ರ ವರೆಗೆ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಆವರಣದಲ್ಲಿ ನಡೆಯಲಿದೆ. ನಿರ್ಣಾ ಗ್ರಾಮದ ಸುತ್ತ ಮುತ್ತಲಿನ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವೇ. ಗದಗಯ್ಯಾ ಕಾವಡಿಮಠ ಪುಣ್ಯಸ್ಮರಣೋತ್ಸವ ಕಾರ್ಯಕ್ರಮಕ್ಕೆ ಚಾಲನೆ

# 16ರಂದು ಪರಿಸರೋತ್ಸವ ಸಾಧಕರಿಗೆ ಪ್ರಶಸ್ತಿ ಪ್ರದಾನ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:- ಪಟ್ಟಣದ ಗದಗಿ ಮಠದದಲ್ಲಿ ಲಿಂಗೈಕ್ಯ ಆದರ್ಶ ಶಿಕ್ಷಕರು ವೇದವಮೂರ್ತಿ ಗದಗಯ್ಯಾ ಕಾವಡಿಮಠ ಇವರ 13ನೇ ಪುಣ್ಯಸ್ಮರಣೋತ್ಸವ ಅಂಗವಾಗಿ ಪಟ್ಟಣದ ಗದಗಿ ಮಠದಲ್ಲಿ ಮಾತೋಶ್ರೀ ಸರಸ್ವತಿ ಕಾವಡಿಮಠ ಇವರ ದಿವ್ಯ ಸಾನಿಧ್ಯದಲ್ಲಿ ಗದ್ದುಗೆಗೆ ವಿಶೇಷ ರುದ್ರಾಭಿಷೇಕ ಪೂಜೆ ಆಕಾಶವಾಣಿ ಮತ್ತು ದೂರದರ್ಶನ ಕಲಾವಿದರು ಮತ್ತು ಖ್ಯಾತ ಸಂಗೀತಗಾರರಾದ ಮಲ್ಲಯ್ಯ ಚಿಕ್ಕಮಠ್ ಇವರಿಂದ ವಿಶೇಷ ರುದ್ರಾಭಿಷೇಕ ಕಾರ್ಯಕ್ರಮ ಸಡಗರ ಸಂಭ್ರಮದ ಮಧ್ಯೆ ಜರುಗಿತ್ತು. ಮಲ್ಲಯ್ಯ ಚಿಕ್ಕಮಠ ಮಾತನಾಡಿ, ಲಿಂಗೈಕ್ಯ ಗದಗಯ್ಯಾ ಕಾವಡಿಮಠ ಅವರ ಪುಣ್ಯಸ್ಮರಣೋತ್ಸವ ಪ್ರತಿ ವರ್ಷ ಪರಿಸರೋತ್ಸವ ಕಾರ್ಯಕ್ರಮ ಹಮ್ಮಿಕೊಂಡು ಪರಿಸರ ಸಂರಕ್ಷಣೆ ಜನಜಾಗೃತಿಗೆ ಸಹಾಯವಾಗುತ್ತಿದೆ ಎಂದರು. ಪರಿಸರೋತ್ಸವ ಕಾರ್ಯಕ್ರಮಕ್ಕೆ ಮಲ್ಲಯ್ಯ ಚಿಕ್ಕಮಠ ಸಸಿ ವಿತರಿಸಿ ಚಾಲನೆ ನೀಡಿ ಮಾತನಾಡಿದರು. ಕಳೆದ 12 ವರ್ಷಗಳಿಂದ ಪುಣ್ಯಸ್ಮರಣೋತ್ಸವ ವೈವಿಧ್ಯಮಯವಾಗಿ ಆಚರಿಸಿ ಸಮಾಜ ಮುಖಿ ಕಾರ್ಯಕ್ರಮ ಹಾಕಿಕೊಂಡು ಪುಣ್ಯಸ್ಮರಣೋತ್ಸವ ಸಮಾಜಕ್ಕೆ ಮಾದರಿಯಾಗಿದೆ ಎಂದರು. ಪರಿಸರವಾದಿ ಶೈಲೇಂದ್ರ ಕಾವಡಿ ಪ್ರಾಸ್ತವಿಕ ಮಾತನಾಡಿ, ಪ್ರತಿ



ವರ್ಷದಂತೆ ಈ ವರ್ಷವೂ ಕೂಡ ಲಿಂಗೈಕ್ಯ ಗದಗಯ್ಯಾ ಕಾವಡಿಮಠ ಅವರ ಪುಣ್ಯಸ್ಮರಣೋತ್ಸವ ಅಂಗವಾಗಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಪರಿಸರೋತ್ಸವ ಕಾರ್ಯಕ್ರಮ ಹಮ್ಮಿಕೊಂಡು ಸಮಾಜದಲ್ಲಿ ಪರಿಸರ ಸಂರಕ್ಷಣೆ ಶ್ರಮಿಸುತ್ತಿರುವ ಸಾಧಕರಿಗೆ ಸೇರಿದಂತೆ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರಿಗೆ ಪರಿಸರೋತ್ಸವ ಪ್ರಶಸ್ತಿ ನೀಡಿ ಸನ್ಮಾನಿಸಲಾಗುತ್ತದೆ ಎಂದರು. ಈ ಕಾರ್ಯಕ್ರಮವನ್ನು ಸೆಪ್ಟೆಂಬರ್ 16ರಂದು ಬೀದರ್ ತಾಲೂಕಿನ ಮರಕುಂದಾ ಗ್ರಾಮದ ಕರಿಬಸವೇಶ್ವರ ದೇಶಿಕ ಮಠದಲ್ಲಿ ಹಮ್ಮಿಕೊಳ್ಳಲಾಗಿದೆ. ಈ ಪರಿಸರೋತ್ಸವ ಕಾರ್ಯಕ್ರಮವನ್ನು ಬೀದರ್ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಎಸ್.ಬಿ ಬಿರಾದಾರ್ ಉದ್ಘಾಟಿಸುವರು. ಶಾಸಕ ಶೈಲೇಂದ್ರ ಬೆಲ್ದಾಳೆ ಅಧ್ಯಕ್ಷತೆ ವಹಿಸುವವರು. ಖೇಳಗ್ಗಿ ಶಿವಲಿಂಗೇಶ್ವರ ಮಹಾಸ್ವಾಮಿಗಳು ಮತ್ತು ಹೊನ್ನಲಿಂಗೇಶ್ವರ ಸ್ವಾಮಿಗಳು ಹಾಗೂ ಮರಕುಂದಾ ಶರಣ ಬಸವ ದೇವರು ಇವರ ದಿವ್ಯ ಸಾನಿಧ್ಯದಲ್ಲಿ ಪರಿಸರೋತ್ಸವ ಕಾರ್ಯಕ್ರಮ ಜರುಗುವುದು. ಈ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಸಾಹಿತಿಗಳು, ಕಲಾವಿದರು, ಪರಿಸರ ಪ್ರೇಮಿಗಳು, ಪಾಲ್ಗೊಳ್ಳಲಿದ್ದಾರೆ ಎಂದು ಶೈಲೇಂದ್ರ ಕಾವಡಿ ತಿಳಿಸಿದರು. ಇದೇ 13ರಂದು ಹಿರಿಯ ನಾಗರಿಕರಿಗೆ ಮತ್ತು ಮಕ್ಕಳಿಗೆ ದಂತ ತಪಾಸಣೆ ಶಿಬಿರ ಜರುಗಲಿದೆ. ಪರಿಸರೋತ್ಸವ ಅಂಗವಾಗಿ ಹಾಗೂ ಶೈಲೇಂದ್ರ ಕಾವಡಿ ಅವರ ಕೋಟಿ ವೃಕ್ಷ ಆಂದೋಲನ ಅಂಗವಾಗಿ ವಿವಿಧ ಜಾತಿಗಳ ಸಸಿಗಳು ನೆಡುವ ಹಾಗೂ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.




ಬಸವಕಲ್ಯಾಣ :- ಬೀದರ ಜಿಲ್ಲಾ ಮಟ್ಟದ ಅತ್ಯುತ್ತಮ ಶಿಕ್ಷಕ ಪ್ರಶಸ್ತಿ ಭಾಜನರಾದ ಪ್ರಯುಕ್ತ ಶರಣಪ್ಪಾ ವಾಡೇಕರ್ ಮುಖ್ಯ ಗುರುಗಳು ಸ.ಹಿ.ಪ್ರಾ.ಶಾಲೆ ತ್ರಿಪೂರಾಂತ ರವರನ್ನು ಸಿ.ಆರ್.ಪಿ ಗಳಾದ ಗಿರಿಧರ ಧಾನುರೆ, ನಾಸೇರ ಪಟೇಲ್ ರವರು ಸನ್ಮಾನಿಸಿದರು, ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕರಾದ ನಾಗನಾಥ ರೆಡ್ಡಿ, ರಾಜೇಶ್ವರಿ, ಪುಷ್ಪಾವತಿ, ಜಗದೇವಿ, ಪುಷ್ಪಲತಾ, ಶಕುಂತಲಾ ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಗುಡಿಗೇರಿಯಲ್ಲಿ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದ ಟ್ರಸ್ಟ್ ಕಮಿಟಿ ರಚನೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ತಾಲೂಕು ಗುಡಗೇರಿ ಗ್ರಾಮದಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನ ಅಭಿವೃದ್ಧಿ ಟ್ರಸ್ಟ್ ರಚನೆ ಮತ್ತು ಸಬ್ ರಿಜಿಸ್ಟರನಲ್ಲಿ ನೋಂದಣಿ ಮಾಡಲಾಯಿತುಮಾಡಲಾಯಿತು. ಗುಡಿಗೇರಿ ಗ್ರಾಮದ ಎಲ್ಲಾ ರೆಡ್ಡಿ ಸಮಾಜದ ಮುಖಂಡರು ಸೇರಿ ಕಾರ್ಯ ಕಾರಿಣಿ ಸದಸ್ಯರಾದ ಆಯ್ಕೆ ಮಾಡಿದರು.

ಇದೇ ಸಮಯದಲ್ಲಿ ನಮ್ಮ ಪಕ್ಕದ ಊರು ಆದ ಕವಲೂರ ಗ್ರಾಮದ ಪ್ರದೀಪ ಗೌಡ ಮಾಲಿಪಾಟೀಲ್ ಅವರು ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನ ಕಟ್ಟಲು ತಮ್ಮ ಸ್ವಂತ ಭೂಮಿಯನ್ನು ಟ್ರಸ್ಟ್ ಕಮಿಟಿಗೆ ದಾನವಾಗಿ ನಿಡಲು ಒಪ್ಪಿಗೆ ಸೂಚಿಸಿದರು.

ಇದೇ ಸಮಯದಲ್ಲಿ ಪ್ರದೀಪ್ ಗೌಡ ಅವರನ್ನು ಗ್ರಾಮದ ರೆಡ್ಡಿ ಸಮಾಜದ ಮುಖಂಡರು ಅಭಿನಂದಿಸಿದರು. ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದ ಅಭಿವೃದ್ಧಿ ಟ್ರಸ್ಟ್ ಅಧ್ಯಕ್ಷರಾಗಿ ಚನ್ನಪ್ಪ ಗೂಟಗನೂರ, ಉಪಾಧ್ಯಕ್ಷರಾಗಿ ರವಿಕುಮಾರ್ ಅಂಬಳಿ, ವೀರನಗೌಡ ಶರಬಗೌಡ್ರು, ಪ್ರಧಾನ ಕಾರ್ಯದರ್ಶಿಯಾಗಿ ವೆಂಕಣ್ಣ ಆಡೂರು, ಸಹಕಾರ್ಯ ದರ್ಶಿಯಾಗಿ ಪಂಪಾಪತಿ ಕೊಡಾಲ, ಖಜಾಂಚಿಯಾಗಿ ಶರಣಪ್ಪ ತೆ- ೂಟದ, ಸದಸ್ಯರಾದ ವೆಂಕಣ್ಣ ವರಕನಹಳ್ಳಿ, ಶರಣಪ್ಪ ಗೌಡ್ರು ಕೆಳಗಿನ ಗೌಡ್ರು, ಹನುಮನ ಗೌಡ ಆಡೂರ, ಶಿವನಗೌಡ ತೆಗ್ಗಿನಮನಿ, ಸುರೇಶ್ ಶರಬನ ಗೌಡ್ರು, ಶಿವನಗೌಡ ಬನ್ನಿಕೊಪ್ಪ, ಹನುಮರೆಡ್ಡಿ ತೋಟದ, ಲಕ್ಷ್ಮಣ್ ಕನಕರೆಡ್ಡಿ, ಶರಣಪ್ಪ ಗುಟುಕನೂರ, ಈ ಎಲ್ಲಾ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು ಎಂದು ಪ್ರಧಾನ ಕಾರ್ಯದರ್ಶಿ ವೆಂಕಣ್ಣ ಆಡೂರ ಇವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕನ್ನಡ ಜಾಗೃತಿ ಸಮಿತಿಗೆ ಬಸವರಾಜ ಶಿಣ್ಣೂರ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ : ಕರ್ನಾಟಕ ರಾಜ್ಯದಲ್ಲಿ ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ರಾಜ್ಯ ಸರ್ಕಾರ, ಕನ್ನಡ ಜಾಗೃತಿ ಸಮಿತಿ ಸದಸ್ಯರನ್ನಾಗಿ ಬಸವರಾಜ ಶಿಣ್ಣೂರ ಅವರನ್ನು ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ, ಸರಕಾರದ ಅಧೀನ ಕಾರ್ಯದರ್ಶಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕೆ.ಆರ್.ರಮೇಶ್ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಆಯಾ ವಿಧಾನಸಭಾ ಮತಕ್ಷೇತ್ರಗಳಿಗೆ ಕನ್ನಡ ಅಭಿವೃದ್ಧಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಕನ್ನಡ ಜಾಗೃತಿ ಸಮಿತಿಗೆ ಅಧಿಕಾರೇತರ ಸದಸ್ಯರನ್ನಾಗಿ ಸಾಹಿತಿ - ಪತ್ರಕರ್ತ ಬಸವರಾಜ ಶಿಣ್ಣೂರ ಅವರನ್ನು ನಾಮನಿರ್ದೇಶನ ಮಾಡಿ ಆದೇಶಿಸಲಾಗಿದೆ.

ನನ್ನನ್ನು ಕನ್ನಡ ಜಾಗೃತಿ ಸಮಿತಿಗೆ ನೇಮಕ ಮಾಡಲು ಕಾರಣಿಭೂತರಾದ, ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವ ಶರಣ ಬಸಪ್ಪಗೌಡ ದರ್ಶನಾಪುರ ಹಿರಿಯ ಸಾಹಿತಿ ಡಾ.ಸಿದ್ದರಾಮ ಹೊನಕಲ್, ಪ್ರಗತಿಪರ ಚಿಂತಕರಾದ ಸಿದ್ದಲಿಂಗಣ್ಣ ಆನೆಗುಂದಿ, ಹಿರಿಯ ಸಾಹಿತಿ ಶಿವಣ್ಣ ಇಜೇರಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷರಾದ ಡಾ: ರವೀಂದ್ರನಾಥ್ ಹೊಸಮನಿ, ಕೆಂಭಾವಿ ವಲಯ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಮಡಿವಾಳಪ್ಪ ಪಾಟೀಲ್ ಹೆಗ್ಗಣದೊಡ್ಡಿ, ಭೀಮರಾಯನಗುಡಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶರಣಬಸವ ಪೊಲೀಸ್ ಬಿರಾದಾರ ಮಾತೃಛಾಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ತಿಪ್ಪಣ್ಣ ಖ್ಯಾತನಾಳ, ಅಭಿನಂದಿಸಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಉಚಿತ ಆರೋಗ್ಯ ತಪಾಸಣೆ ಸೆ.14ರಂದು

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ: ಇತ್ತೀಚೆಗಿನ ವರ್ಷಗಳಲ್ಲಿ ವಯಸ್ಸಿನ ಅಂತರವಿಲ್ಲದೆ ಹೃದಯಾಘಾತ ಪ್ರಕರಣಗಳು ಹೆಚ್ಚುತ್ತಿರುವ ಕಾರಣ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಘಟಕವು ನಗರದ ಕೆ.ಎಸ್. ಆಸ್ಪತ್ರೆ ಸಹಯೋಗದಲ್ಲಿ ಸೆ. 14ರಂದು ಬೆಳಿಗ್ಗೆ 9 ಗಂಟೆಯಿಂದ ಪ್ರಶಾಂತ್ ಬಡಾವಣೆಯಲ್ಲಿರುವ ಶ್ರೀ ವಿಠ್ಠಲಕೃಷ್ಣ ದೇವಸ್ಥಾನದ ಸಮುದಾಯಭವನದಲ್ಲಿ ಉಚಿತವಾಗಿ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಂಡಿದೆ.

ಆರಂಭಿಕ ಹಂತದಲ್ಲಿ ಮಹಾಸಭಾದ ಸದಸ್ಯತ್ವ ಹೊಂದಿದ ಸದಸ್ಯರಿಗೆ ಮಾತ್ರ ಆದ್ಯತೆ ಮೇರೆಗೆ ತಪಾಸಣೆ ನಡೆಯಲಿದೆ. ಮಧುಮೇಹ, ರಕ್ತದೊತ್ತಡ, ಹೃದಯ ಸಂಬಂಧಿ ಕಾಯಿಲೆಗಳ ಪತ್ತೆಗೆ ಇಸಿಜಿ ಸೇರಿದಂತೆ ಹಲವು ಪರೀಕ್ಷೆ ಹಾಗೂ ವೈದ್ಯರೊಂದಿಗೆ ಸಮಾಲೋಚನೆ ಸೌಲಭ್ಯ ಇರಲಿದೆ.

ಆರೋಗ್ಯ ಶಿಬಿರ ಮತ್ತು ಸದಸ್ಯತ್ವ ನೋಂದಣಿಗಾಗಿ ಸಂಘದ ರಾಜ್ಯ ಕೇಂದ್ರ ಕಾರ್ಯಕಾರಿಣಿ ಸಮಿತಿ ಸದಸ್ಯ ಎಚ್.ಬಿ. ದೇಶಪಾಂಡೆ 7348983604 ಅಥವಾ ಜಿಲ್ಲಾ ಚುನಾಯಿತ ಪ್ರತಿನಿಧಿ ಗುರುರಾಜ ಎನ್. ಜೋಶಿ 9986680835 ಅವರನ್ನು ಸಂಪರ್ಕಿಸಬೇಕು ಎಂದು ಪ್ರಕಟಣೆ ಕೋರಿದೆ.

# ಗ್ರಾಮೀಣ ಮಕ್ಕಳಿಗೆ ತಂತ್ರಜ್ಞಾನದ ಹೊಸ ದಾರಿ – ಶಿವಕುಮಾರ ಫುಲಾರೆ.



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲ್ಲೂಕಿನ ಭಾತಂಬ್ರಾ ಗ್ರಾಮದ ಸರ್ಕಾರಿ ಮಾದರಿಯ ಉರ್ದು ಪ್ರಾಥಮಿಕ ಶಾಲೆಯಲ್ಲಿ ಪುಷ್ಠಿ ಕಾರ್ಯಕ್ರಮ ಯೋಜನೆ ಅಡಿಯಲ್ಲಿ ದೊರೆತ ಅತ್ಯುತ್ತಮ ಎಸ್ ಡಿ ಎಮ್ ಸಿ ಪ್ರಶಸ್ತಿಯ ಅನುದಾನವನ್ನು ಮಕ್ಕಳ ಶಿಕ್ಷಣಕ್ಕೆ ಸದ್ವಿನಿಯೋಗಮಾಡಲಾಗಿದ್ದು, ಗ್ರಾಮೀಣ ಭಾಗದ ಮಕ್ಕಳಿಗೆ ತಂತ್ರಜ್ಞಾನದ ಜಗತ್ತಿನಲ್ಲಿ ಹೆಜ್ಜೆ ಇಡುವ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ, ಮಕ್ಕಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ಕೊಡುವ ನಿಟ್ಟಿನಲ್ಲಿ ಸ್ಮಾರ್ಟ್ ಕ್ಲಾಸ್ ಕೋಣೆಯನ್ನು ಮಾಡಲಾಗಿದೆ. ಈ ಸ್ಮಾರ್ಟ್ ಕ್ಲಾಸ್ ಕೋಣೆಯನ್ನು ಕ್ಷೇತ್ರ ಶಿಕ್ಷಣ ಅಧಿಕಾರಿಗಳ ಕಾರ್ಯಲಯದ ಪತ್ರಾಂಕಿತ ವ್ಯವಸ್ಥಾಪಕರಾದ ಶಿವಕುಮಾರ ಫುಲಾರೆ ಉದ್ಘಾಟಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ನೌಕರರ ಸಂಘದ ಅಧ್ಯಕ್ಷರಾದ ಚಂದ್ರಶೇಖರ ಬನ್ನಾಳೆ ಮಾತನಾಡಿ ಇದು ಮಕ್ಕಳ ಭವಿಷ್ಯ ರೂಪಿಸುವ ನೂತನ ದಾರಿಯಾಗಿದೆ. ಸ್ಮಾರ್ಟ್ ಕೋಣೆ ಮಕ್ಕಳಿಗೆ ಆಧುನಿಕ ತಂತ್ರಜ್ಞಾನ ಜ್ಞಾನವನ್ನು ಒದಗಿಸಿ ಅವರ ಕಲಿಕೆಯ ಗುಣಮಟ್ಟವನ್ನು ಹೆಚ್ಚಿಸಲು ದಾರಿದೀಪವಾಗಲಿದೆ ಮತ್ತು "ಸ್ಮಾರ್ಟ್ ಕೋಣೆ" ಗ್ರಾಮೀಣ ಮಕ್ಕಳಿಗೆ ಕೇವಲ ತಂತ್ರಜ್ಞಾನ ಪರಿಚಯವಲ್ಲ, ಅವರ ಕನಸುಗಳಿಗೆ ಬಲ ತುಂಬುವ ನವೀನ ಪ್ರಯತ್ನವಾಗಿದೆ. ಎಂದು ಹೇಳಿದರು. ಈ ಸಂದರ್ಭದಲ್ಲಿ ರಾಜಪ್ಪಾ ಪಾಟೀಲ ಅವರು ಮಾತನಾಡಿದರು, ಗ್ರಾಮ ಪಂಚಾಯತ ಅಧ್ಯಕ್ಷರಾದ ಮಹಾಂತೇಶ ಪಾಟೀಲ, ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ರವಿಚಂದ್ರ ಮೈನಾಳೆ, ಎಸ್ ಡಿ ಎಮ್ ಸಿ ಅಧ್ಯಕ್ಷರಾದ ಫಯಾಜ್, ಸಿ ಆರ್ ಪಿ ಸಂತೋಷಿ ಕುಮಾರಿ ವಾಡೆ, ಶಾಲೆಯ ಮುಖ್ಯಗುರುಗಳು ದಾವೂದ ಜಮಾದಾರ, ರಾಜಕುಮಾರ ಪಾಲಪುರೆ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು. ಶಾಲೆಯ ಶಿಕ್ಷಕರ ವೃಂದ, ಎಸ್‌ಡಿಎಂಸಿ ಸದಸ್ಯರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಸಂತಸ ವ್ಯಕ್ತಪಡಿಸಿದರು.

ಜಾಹೀರಾತಿಗಾಗಿ ಇಂದೆ ಸಂಪರ್ಕಿಸಿ:9449732000

## ಬೆಳೆಹಾನಿ-ನೊಂದ ಎಲ್ಲ ರೈತರಿಗೆ ಪರಿಹಾರ ಸಿಗಲಿ



ಮಲ್ಲಮ್ಮ ನುಡಿ ವಾರ್ತೆ ಔರಾದ:ಸೆ.12:ಭಾರೀಮಳೆಯಿಂದಾಗಿ ಔರಾದ(ಬಿ) ಹಾಗೂ ಕಮಲನಗರ ತಾಲ್ಲೂಕುಗಳಲ್ಲಿಸಾಕಷ್ಟುಹಾನಿಯಾಗಿದ್ದು, ಪ್ರತಿ ಗ್ರಾಮ ಮತ್ತು ಹೊಲಗಳಿಗೆ ಭೇಟಿ ನೀಡಿ ಸಮೀಕ್ಷೆಯನ್ನು ಅಚ್ಚುಕಟ್ಟಾಗಿ ನಡೆಸುವ ಮೂಲಕ ಬೆಳೆನಷ್ಟದಿಂದ ನೊಂದಿರುವ ಎಲ್ಲ ರೈತರಿಗೆ ಪರಿಹಾರ ಕಲ್ಪಿಸಲು ಪ್ರಮಾಣಿಕವಾಗಿ ಪ್ರಯತ್ನಿಸಬೇಕೆಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಔರಾದ(ಬಿ) ತಾಲ್ಲೂಕು ಪಂಚಾಯತ ಕಛೇರಿ ಸಭಾಂಗಣದಲ್ಲಿ ಸೆ.12ರಂದು ನಡೆದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆ ಪ್ರಮಾಣ ಮತ್ತು ಬೆಳೆಹಾನಿಯ ಬಗ್ಗೆ ಸಹಾಯಕ ಕೃಷಿ ನಿರ್ದೇಶಕರಾದ ಧೂಳಪ್ಪ ವಿವರಣೆ ನೀಡಿದರು. ಸಮೀಕ್ಷೆ ಕುರಿತ ಮಾಹಿತಿಗೆ ಆಕ್ಷೇಪ ವ್ಯಕ್ತಪಡಿಸಿದ ಶಾಸಕರು, ಜುಲೈ ಮತ್ತು ಆಗಸ್ಟ್ ನಲ್ಲಿ ಸುರಿದ ಬಾರೀ ಮಳೆಯಿಂದಾಗಿ ಕ್ಷೇತ್ರದಲ್ಲಿನ ಅಂದಾಜು ಒಂದು ಲಕ್ಷ ಹೆಕ್ಟೇರ್ ಕೃಷಿ ಭೂಮಿಯ ಪೈಕಿ ಸುಮಾರು 60 ಸಾವಿರ ಹೆಕ್ಟೇರ್ ಗಿಂತ ಹೆಚ್ಚು ಬೆಳೆ ಹಾನಿಯಾಗಿದೆ. ಆದರೆ 30 ಸಾವಿರ ಹೆಕ್ಟೇರ್ ಮಾತ್ರ ಸಮೀಕ್ಷೆ ಮಾಡಿರುವುದು ಸರಿಯಲ್ಲವೆಂದು ಬೇಸರ ಹೊರಹಾಕಿದರು.

ನದಿ ಪ್ರದೇಶ,ಹಳ್ಳ-ಕೊಳ್ಳಗಳು ಮತ್ತು ತಗ್ಗು ಪ್ರದೇಶದಲ್ಲಿನ ಎಲ್ಲ ಬೆಳೆಗಳು ಸಂಪೂರ್ಣ ಮುಳುಗಡೆಯಾಗಿವೆ. ಕೆರೆ ಕಟ್ಟೆಗಳು ಒಡೆದು ಮಣ್ಣಿನ ಸಹಿತ ಬೆಳೆಗಳು ಕೊಚ್ಚಿಕೊಂಡು ಹೋಗಿವೆ. ಬಿತ್ತನೆಯಾದ ಸೋಯಾ, ತೊಗರಿ,ಹತ್ತಿನಷ್ಟವಾಗಿದ್ದು,ಕಟಾವಿಗೆ ಬಂದಿದ್ದ ಉದ್ದು,ಹೆಸರು ಸಂಪೂರ್ಣ ಹಾಳಾಗಿದೆ. ಸಮೀಕ್ಷೆಗೆ ನಿಯೋಜಿಸಿದ ಹಲವು ಸಿಬ್ಬಂದಿ ಗ್ರಾಮಗಳಿಗೆ ಭೇಟಿ ನೀಡದೇ ಕಛೇರಿಯಲ್ಲಿ ಕುಳಿತು ವರದಿ ಸಲ್ಲಿಸುತ್ತಿದ್ದಾರೆ. ಹೀಗಾದರೆ ರೈತರ ಗತಿಯೇನಾಗಬಹುದು ಎಂದು ಆಕ್ರೋಶ ವ್ಯಕ್ತಪಡಿಸಿದರು. ಉಪ ಜೀವನಕ್ಕೆ ಆಧಾರವಾಗಿದ್ದ ಬೆಳೆ ಕಳೆದುಕೊಂಡು ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಅಧಿಕಾರಿಗಳು ರೈತರ ನೆರವಿಗೆ ನಿಲ್ಲಬೇಕು. ಕೃಷಿ, ಕಂದಾಯ,ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಜಂಟಿ ಸಮೀಕ್ಷೆಯನ್ನು ವ್ಯವಸ್ಥಿತವಾಗಿ ಮಾಡಿ ಸರ್ಕಾರಕ್ಕೆ ನಿಖರವಾದ ವರದಿ ಸಲ್ಲಿಸಿ ರೈತರಿಗೆ ಅನುಕೂಲವಾಗುಂತೆ ನೋಡಿಕೊಳ್ಳಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿದರೆ ನಾನು ಸುಮ್ಮನಿರುವುದಿಲ್ಲ ಎಂದು ಎಚ್ಚರಿಸಿದರು. ಬೆಳೆವಿಮೆ ನೀಡುವ ಕಂಪನಿಗಳಿಂದ ರೈತರಿಗೆ ಸಾಕಷ್ಟು ಅನ್ಯಾಯವಾಗುತ್ತಿದೆ. ಔರಾದ(ಬಿ) ಕ್ಷೇತ್ರದಲ್ಲಿ ಅತೀ ಹೆಚ್ಚು ರೈತರು ಯೋಜನೆಯಡಿ ನೋಂದಣಿಯಾಗಿದ್ದಾರೆ. ಕಂಪನಿಯವರು ತಮ್ಮಷ್ಟಕ್ಕೆ ತಾವೇ ಸಮೀಕ್ಷೆ ಮಾಡದೇ ಗ್ರಾಮ ಲೆಕ್ಕಾಧಿಕಾರಿಗಳು, ಗ್ರಾಮ ಸೇವಕರು ಮತ್ತು ಪಿಡಿಓಗಳನ್ನು ಕರೆದೊಯ್ಯಬೇಕು. ಎಲ್ಲ ರೈತರಿಗೆ ತಂತ್ರಾಂಶದ ಜ್ಞಾನ ಇರುವುದಿಲ್ಲ. ಹಾಗಾಗಿ ರೈತರಿಗೆ ಆಫ್‌ಲೈನ್ ಮೂಲಕ ಮಾಹಿತಿ ಸಲ್ಲಿಸಲು ಅವಕಾಶ ಕಲ್ಪಿಸಿ ರೈತರಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

ಸರ್ಕಾರಿ ಶಾಲೆಗಳಲ್ಲಿನ ಶಿಕ್ಷಕರ ಸಮಸ್ಯೆಯನ್ನು ಶೀಘ್ರ ಪರಿಹರಿಸಬೇಕು. ಕೆಲವು ಪ್ರಾಥಮಿಕ ಶಾಲೆಗಳಲ್ಲಿ ಮಕ್ಕಳಿಗೆ ಸರಿಯಾಗಿ ಓದಲು ಬರೆಯಲು ಬರುತ್ತಿಲ್ಲ. ಹೀಗಾದರೆ ಫಲಿತಾಂಶ ಸುಧಾರಣೆ ಹೇಗೆ ಸಾಧ್ಯ ? ಕ್ಷೇತ್ರ ಶಿಕ್ಷಣಾಧಿಕಾರಿಗಳು ವಿಶೇಷ ಮುತುವರ್ಜಿ ವಹಿಸಿ ಶಿಕ್ಷಣದ ಗುಣಮಟ್ಟ ಸುಧಾರಿಸಬೇಕು. ಸರ್ಕಾರಿ ಶಾಲೆಗಳ ನಿವೇಶನ ಸಮಸ್ಯೆ ಇತ್ಯರ್ಥಪಡಿಸಬೇಕು ಎಂದು ಸೂಚಿಸಿದರು. ಸಿಡಿಪಿಓ ವಿರುದ್ಧ ಕೆಂಡ: ಅಂಗನವಾಡಿ ಕೇಂದ್ರಗಳಲ್ಲಿ ಸಾಕಷ್ಟು ಅವ್ಯವಹಾರಗಳು ಆಗುತ್ತಿವೆ. ಅಂಗನವಾಡಿ ಕೇಂದ್ರಗಳಿಗೆ ಪೂರೈಕೆಯಾಗುವ ಆಹಾರ ಸಾಮಗ್ರಿಗಳು ಸಂಪೂರ್ಣ ಕಳಪೆಯಿಂದ ಕೂಡಿವೆ. ಬೆಲ್ಲ ಮತ್ತು ಪೌಡರ್ ಸೇವಿಸಲು ಯೋಗ್ಯವಾಗಿರುವುದಿಲ್ಲ. ಅದರೂ ಸಿಡಿಪಿಓ ಸುಮ್ಮನೆ ಇದ್ದಾರೆಂದು ಶಾಸಕರು ಕೋಪಗೊಂಡರು. ಆಹಾರ ಸಮಸ್ಯೆ ಸರಿಪಡಿಸಬೇಕು. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕರ ನೇಮಕಾತಿಯಲ್ಲಿ ಇಲಾಖೆ ಸಿಬ್ಬಂದಿ ಹಣ ವಸೂಲಿಗೆ ಇಳಿದಿರುವುದು ಗಮನಕ್ಕೆ ಬಂದಿದೆ. ಅಧಿಕಾರಿಗಳು ಇಂಥವುಗಳನ್ನು ಗಂಭೀರವಾಗಿ ಪರಿಗಣಿಸಿ ಭ್ರಷ್ಟ ಸಿಬ್ಬಂದಿಯನ್ನು ಮನೆಗೆ ಕಳುಹಿಸಬೇಕೆಂದು ಸೂಚಿಸಿದರು. ಶಾಸಕರು ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು, ಆರೋಗ್ಯ,ತೋಟಗಾರಿಕೆ,ಪಂಚಾಯತ ರಾಜ್,ಲೋಕೋಪಯೋಗಿ ಇಲಾಖೆ, ಸಣ್ಣ ನೀರಾವರಿ, ಜೆಸ್ಕಾಂ, ಅರಣ್ಯ, ರೇಷ್ಮೆ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಸೇರಿದಂತೆ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದರು. ತಾಲ್ಲೂಕು ಪಂಚಾಯತ ಆಡಳಿತಾಧಿಕಾರಿ ಸೂರ್ಯಕಾಂತ ಬಿರಾದಾರ, ತಹಸೀಲ್ದಾರರಾದ ಮಹೇಶ ಪಾಟೀಲ, ರಮೇಶ ಪೆದ್ದೆ, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಕಿರಣ ಪಾಟೀಲ, ಹಣಮಂತರಾವ ಕೌಟಗೆ, ಪೊಲೀಸ್ ವೃತ್ತ ನಿರೀಕ್ಷಕ ರಘುವೀರಸಿಂಗ್ ಠಾಕೂರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಹಿಳೆಯರು, ಗರ್ಭಿಣಿ ಮಹಿಳೆಯರು ಪೌಷ್ಟಿಕ ಆಹಾರ ಸೇವನೆಗೆ ವಿಶೇಷ ಗಮನ ನೀಡಿ: ಜಿಲ್ಲಾಧಿಕಾರಿ ಹರ್ಷಲ್ ಭೋಯರ್




ಮಲ್ಲಮ್ಮನುಡಿವಾರ್ತೆಯಾದಗಿರಿ: ಸೆ:12: ಮಹಿಳೆಯರು,ಗರ್ಭಿಣಿ ಮಹಿಳೆಯರು ತಮ್ಮ ಆರೋಗ್ಯ ಹಾಗೂ ಹುಟ್ಟುವ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಪೌಷ್ಟಿಕ ಆಹಾರ ಸೇವನೆಗೆ ವಿಶೇಷ ಗಮನ ನೀಡುವಂತೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಕರೆ ನೀಡಿದರು.

ನಗರದ ಆಡಿಟೋರಿಯಂ ಸಭಾಂಗಣದಲ್ಲಿ ಇಂದು ಪೋಷನ್ ಮಾಸಾಚರಣೆ,ಮಿಷನ್ ಶಕ್ತಿ ಯೋಜನೆಯ ಸಂಕಲ್ಪ ವಿಶೇಷ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹುಟ್ಟುವ ಮಗುವಿನ ಭವಿಷ್ಯ ತಾಯಿಯ ಪೌಷ್ಟಿಕ ಆಹಾರ ಸೇವನೆ ಮೇಲೆ ಅವಲಂಬನೆಯಾಗಿದೆ. ಅಪೌಷ್ಟಕತೆ, ರಕ್ತಹೀನತೆ,ವಿವಿಧ ಕಾಯಿಲೆಗಳ ನಿವಾರಣೆಗೆ ಹಾಗೂ ಹುಟ್ಟುವ ಮಕ್ಕಳು ಕೂಡ ಬುದ್ಧಿಮಾಂದ್ಯ,ಇತರೆ ದೈಹಿಕ ಸಂಬಂಧಿತ ಕಾಯಿಲೆಗಳಿಂದ ಬಳಲುವದರಿಂದ ಆದ್ಯತೆ ಮೇಲೆ ಪೌಷ್ಟಿಕ ಆಹಾರ ಸೇವಿಸಬೇಕು ಎಂದು ಸಲಹೆ ನೀಡಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವು ಯೋಜನೆಗಳ ಮೂಲಕ ಮಹಿಳೆಯರ ಮತ್ತು ಮಕ್ಕಳ ಅಪೌಷ್ಟಿಕತೆ ನಿವಾರಣೆಗೆ ಗಮನ ನೀಡುತ್ತಿವೆ. ಅಪೌಷ್ಟಿಕ ಮಕ್ಕಳ ಆರೋಗ್ಯ ವೃದ್ಧಿಗೂ ವಿಶೇಷ ಗಮನ ನೀಡಬೇಕು. ಬಾಲ್ಯವಿವಾಹ ತಡೆಯಬೇಕು. ಪೌಷ್ಟಿಕ ಆಹಾರಗಳಾದ ಸಿರಿಧಾನ್ಯ,ಜೋಳ,ನವಣೆ,ರಾಗಿಗಳಿಗೆ ಉತ್ತೇಜನ ನೀಡಬೇಕು, ಕುಟುಂಬದಲ್ಲಿ ಕೊನೆಯಲ್ಲಿ ಮಹಿಳೆ ಊಟ ಮಾಡುವ ಪದ್ಧತಿಯಿಂದ ಹೊರಬರಬೇಕು. ಜಂಕ್ ಫುಡ್, ಎಣ್ಣೆ ಪದಾರ್ಥ ಸೇವಿಸಬಾರದು. ಮಕ್ಕಳಿಗೆ ಪೌಷ್ಟಿಕ ಆಹಾರ ದೊರಕಿಸಲು ಅವರು ತಿಳಿಸಿ, ಪೋಷನ್ ಅಭಿಯಾನದಲ್ಲಿ ಪುರುಷರು ಭಾಗವಹಿಸಲು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀ ಮರಿಯಪ್ಪ ಅವರು ಅಂಗನವಾಡಿ ಕಾರ್ಯಕರ್ತೆಯರು,ಸಹಾಯಕಿಯರು,ಆಶಾ, ಆರೋಗ್ಯ ಕಾರ್ಯಕರ್ತರು ಮಕ್ಕಳ ಆರೋಗ್ಯಕ್ಕೆ ವಿಶೇಷ ಗಮನ ನೀಡಬೇಕು. ಪಾಲಕರಲ್ಲಿ ಸೂಕ್ತ ಜಾಗೃತಿ ಮೂಡಿಬೇಕು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಮಹೇಶ್ ಬಿರಾದಾರ್ ಅವರು ,ಬಾಲ್ಯವಿವಾಹ,ಅವಧಿಪೂರ್ವ ಹೆರಿಗೆ,ಶಿಶು ಮರಣಕ್ಕೆ ಕಾರಣವಾಗುತ್ತವೆ. ಅಪೌಷ್ಟಿಕತೆಯಿಂದ ಹುಟ್ಟುವ ಮಕ್ಕಳ ಭವಿಷ್ಯದಲ್ಲೂ ಅಪಾಯವಾಗುತ್ತದೆ. ಕಾರಣ ಸಮತೋಲಿತ ಆಹಾರ ಸೇವಿಸಲು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ತೋಟಗಾರಿಕೆ ವಿಶ್ವವಿದ್ಯಾನಿಲಯದ

ಡಾ.ಶಶಿಕಲಾ ರೂಳಿ,

ಸ್ತ್ರೀರೋಗತಜ್ಞೆಡಾ.ರಾಜೇಶ್ವರಿ ಗುತ್ತೇದಾರ, ಪ್ರಾಸ್ತಾವಿಕವಾಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ತಿಪ್ಪಣ್ಣ ಶಿರಸಗಿ ಮಾತನಾಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಸುಲೈಮಾನ್ ನದಾಫ, ಜಿಲ್ಲಾ ಆಯುಷ್ ಅಧಿಕಾರಿ ವಂದನಾ ಗಾಳಿ ಉಪಸ್ಥಿತರಿದ್ದರು. ಕವಿತಾ ಬಡಿಗೇರ್ ಪ್ರಾರ್ಥಿಸಿದರು.

## ಶಿವಾಜಿನಗರ ಮೇಟ್ರೋ ಸ್ಟೇಷನ್ ಹೆಸರು ಬದಲಾವಣೆ ಬೇಡ: ಭಗವಂತ ಖೂಬಾ

ಬೀದರ:ಸೆ.12:ವೀರಪರಾಕ್ರಮಿ, ಆದರ್ಶ ಆಡಳಿತಗಾರ, ಹಿಂದೂ ಹೃದಯ ಸಾಮ್ರಾಟ, ಕೋಟ್ಯಾಂತರ ಜನರ ಮನಸ್ಸಿನಲ್ಲಿ ಮಹಾನ ಚಕ್ರವರ್ತಿಯಾಗಿ ನೆಲೆಸಿರುವ ಛತ್ರಪತಿ ಶಿವಾಜಿ ಮಹಾರಾಜರ ಹೆಸರಿರುವ ಬೆಂಗಳೂರಿನ ಶಿವಾಜಿನಗರ ಮೆಟ್ರೋ ಸ್ಟೇಷನ್ ಹೆಸರು ಬದಲಾವಣೆಗೆ ಮುಂದಾಗಿ, ಅಲ್ಪಸಂಖ್ಯಾತರನ್ನು ಒಗ್ಗೂಡಿಸಿ, ಓಲೈಕೆ ರಾಜಕಾರಣ ಮಾಡುತ್ತಿರುವದಕ್ಕೆ ಹಿಂದೂ ಸಮಾಜ ಅವಕಾಶ ಕೊಡುವುದಿಲ್ಲಾ, ಆದ್ದರಿಂದ ಹೆಸರು ಬದಲಾವಣೆಗೆ ಸಿದ್ದರಾಮಯ್ಯನವರು ಯಾವೂದೆ ಕಾರಣಕ್ಕೂ ಮುಂದಾಗಬಾರದು ಎಂದು ರಾಜ್ಯ ಸರ್ಕಾರಕ್ಕೆ ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಆಗ್ರಹಿಸಿದ್ದಾರೆ. ಈ ಕಾಂಗ್ರೇಸ್ ಸರ್ಕಾರದ ಬಳಿ ಅಭಿವೃದ್ಧಿಗೆ ದುಡ್ಡಿಲ್ಲಾ, ಮೋಸದ ಗ್ಯಾರಂಟಿ ಹೆಸರಲ್ಲಿ ಗೆದ್ದು, ಜನರಿಗೆ ಗ್ಯಾರಂಟಿ ಯೋಜನೆಗಳು ಸರಿಯಾಗಿ ತಲುಪಿಸುತ್ತಿಲ್ಲಾ, ಜನರು ದಂಗೆ ಎಳ್ಳುವ ಮುನ್ನ ನಾವೆ ಹಿಂದೂ ಮುಸ್ಲಿಂರ ಮಧ್ಯೆ ಕೋಮುಗಲಭೆ ಸೃಷ್ಟಿಸಿ, ಜನರ ಮನಸ್ಸು ಬೆರೆಡೆ ಸೆಳೆದು, ತಮ್ಮ ಸರ್ಕಾರದ ವಿಫಲತೆಗಳು, ದುರಾಡಳಿತ ಮುಚ್ಚಿಕೊಳ್ಳಲು ಸಿದ್ದರಾಮಯ್ಯನವರು ಶಿವಾಜಿನಗರ ಮೆಟ್ರೋ ಸ್ಟೇಷನ್ ಹೆಸರು ಬದಲಾಯಿಸುವ ಹೊಸ ನಾಟಕ ಪ್ರಾರಂಭಿಸಿದ್ದಾರೆ ಎಂದು ಖೂಬಾ ಆರೋಪಿಸಿದ್ದಾರೆ. ಛತ್ರಪತಿ ಶಿವಾಜಿ ಮಹಾರಾಜರು ಸನಾತನ ಧರ್ಮದ ರಕ್ಷಣೆಯಲ್ಲಿ, ಮುಸ್ಲಿಂ ರಾಜರುಗಳ ಬಲವಂತದ ಮತಾಂತರದ ವಿರುದ್ಧವಾಗಿ, ದೇವಸ್ಥಾನಗಳ ರಕ್ಷಣೆಗಾಗಿ ಹೋರಾಡಿದ ಮಹಾನ ಪುರಷರು, ಇವರು ಮರಾಠಿಗರಿಗಷ್ಟೆ ಸೀಮಿತವಾಗದೆ ಸಮಸ್ತ ಹಿಂದೂಗಳ ಪಾಲಿಗೆ ಹೃದಯ ಸಾಮ್ರಾಟ ಆಗಿದ್ದಾರೆ ಇಂತಹ ಮಹಾನ ರಾಜರ ಹೆಸರು ಬದಲಾಯಿಸಿ, ರಾಜ್ಯದಲ್ಲಿರುವ ಹಿಂದೂಗಳಿಗೆ ಅವಮಾನಿಸುವ ಕೆಲಸವಾಗಬಾರದು, ಕೇವಲ ಅಲ್ಪಸಂಖ್ಯಾತರ ಓಲೈಕೆಗೆ ಮುಂದಾಗಿ ಹಿಂದೂಗಳ ಆಸ್ಮಿತೆಗೆ ಅವಮಾನಿಸುವುದು ಸರಿಯಲ್ಲಾ, ನಿಮ್ಮ ಹಿಂದೂ ವಿರೋಧಿ ಮಾನಸಿಕತೆ ಬದಲಾಯಿಸಿಕೊಳ್ಳಿ ಎಂದು ಸಲಹೆ ನೀಡಿದ್ದಾರೆ. ಕಾಂಗ್ರೇಸ್‌ನವರಿಗೆ 135 ಸ್ಥಾನಗಳು ಬಂದರು ಸಹ ಸರಿಯಾಗಿ ಆಡಳಿತ ನಡೆಸಲು ಬರುತ್ತಿಲ್ಲಾ, ಆದ್ದರಿಂದ ಕಾಂಗ್ರೇಸ್ ನಾಯಕರುಗಳು ರಾಜ್ಯದಲ್ಲಿರುವ ಹಿಂದೂಗಳ ಮೇಲೆ ಮಿತಿಮೀರಿ ದ್ವೇಷ ಸಾಧಿಸಿ, ಆತಂಕವಾದಿಗಳನ್ನು ಬ್ರದರ್ ಎನ್ನುವುದು, ಮುಂದಿನ ಜನ್ಮದಲ್ಲಿ ಮುಸ್ಲಿಂ ಆಗಿ ಹುಟ್ಟುತ್ತೇನೆ ಎನ್ನುವುದು, ಹಿಂದೂಗಳ ಹಬ್ಬಗಳ ಆಚರಣೆಗಳಲ್ಲಿ ಗಲಭೆ ಸೃಷ್ಟಿಸಿ, ಹಿಂದೂಗಳ ಮೇಲೆ ಕೇಸ್ ಹಾಕುವುದು ಮಾಡುತ್ತಿದ್ದಾರೆ, ಒಟ್ಟಿನಲ್ಲಿ ಸಿದ್ದರಾಮಯ್ಯನವರು ಕರ್ನಾಟಕವನ್ನು ಇಸ್ಲಾಮಿಕರಣ ಮಾಡಲು ಹೊರಟಿದ್ದಾರೆ, ಎಂದು ಆರೋಪಿಸಿದ್ದಾರೆ.

ಸಿದ್ದರಾಮಯ್ಯನವರಿಗೂ ಮುಸ್ಲಿಂರಾಗಿ ಬದುಕುವುದು ತುಂಬಾ ಆಸೆಯಿದೆ ಈ ಆಸೆ ಸ್ವತಃ ಅವರೆ ಹಲವಾರು ವೇದಿಕೆಗಳಲ್ಲಿ ವ್ಯಕ್ತಪಡಿಸಿದ್ದಾರೆ, ಮುಸ್ಲಿಂ ದೊರೆಗಳ ವಿರುದ್ದ ಹೋರಾಡಿದ್ದ ಶಿವಾಜಿ ಮಹಾರಾಜರನ್ನು ಕಂಡರೆ ಸಿದ್ದರಾಮಯ್ಯನವರಿಗೆ ಕೋಪ ಎಂದು ಕಾಣಿಸುತ್ತದೆ, ಆದ್ದರಿಂದ ಶಿವಾಜಿ ಮಹಾರಾಜರ ಮೇಲಿನ ಸೇಡು ತಿರಿಸಿಕೊಳ್ಳಲು ಅವರ ಹೆಸರು ಬದಲಾಯಿಸಲು ಮುಂದಾಗಿರಬಹುದು ಎಂದು ವ್ಯಂಗ ಮಾಡಿದ್ದಾರೆ. ಶಿವಾಜಿನಗರ ಹೆಸರು ಬದಲಾಯಿಸಿ ಸೆಂಟ್ ಮೇರಿ ಎಂದು ಮರುನಾಮಕರಣ ಮಾಡಿ ಕಾಂಗ್ರೇಸ್ ಅಧಿನಾಯಕಿ ಸೋನಿಯಾ ಗಾಂಧಿಯವರನ್ನು ಓಲೈಸಲು ಮುಂದಾಗಿರುವುದು ಸರಿಯಲ್ಲಾ, ಬೇಕಾದರೆ ಅವರ ಕಾಂಗ್ರೇಸ್ ಕಚೇರಿಗೆ ಸೆಂಟ್ ಮೇರಿ ಎಂದು ಹೆಸರಿಡಲಿ ಯಾರಿಗೂ ಅಭ್ಯಂತರವಿಲ್ಲಾ.

# ಪುನೀತ್ ಕೆರೆಹಳ್ಳಿ ಅವರನ್ನು ವಿನಾಕಾರಣ ಬಂಧಿಸಿದ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ಪ್ರತಿಭಟನೆ




ಕಲಬುರಗಿ: ರಾಷ್ಟ್ರರಕ್ಷಣಾ ಪಡೆಯ ಸಂಸ್ಥಾಪಕ ಅಧ್ಯಕ್ಷ ಪುನೀತ್ ಕೆರೆಹಳ್ಳಿ ಅವರನ್ನು ವಿನಾಕಾರಣ ಬಂಧಿಸಿದ ಭ್ರಷ್ಟ ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಷ್ಟ್ರ ರಕ್ಷಣಾ ಪಡೆ" ಕಲ್ಬುರ್ಗಿ ಜಿಲ್ಲಾ ಘಟಕ ವತಿಯಿಂದ ನಗರದ ಸರ್ದಾರ್ ವಲ್ಲಬಾಯ್ ಪಟೇಲ್ ವೃತ್ತದಲ್ಲಿ ಪ್ರತಿಭಟನೆ ಮಾಡಿ ಸರ್ಕಾರಕ್ಕೆ ಎಚ್ಚರ ನೀಡಲಾಯಿತು. ಪುನೀತ್ ಕೆರೆಹಳ್ಳಿ ಅವರ ಮೇಲೆ ಒಂದು ಕೇಸ್ ಅಲ್ಲ ಇಂಥ ನೂರು ಕೇಸ್ ಹಾಕುದ್ರು ಕೂಡ ಅಂಜುವುದಿಲ್ಲ ಎಂದು ಜಿಲ್ಲಾಧ್ಯಕ್ಷ ಮಡಿವಾಳಪ್ಪ ಎಚ್ಚರಿಕೆ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷರಾದ, ಮಡಿವಾಳಪ್ಪ ಅಮರಾವತಿ, ಜಿಲ್ಲಾ ಗೌರವಾಧ್ಯಕ್ಷರಾದ ರಮೇಶ್ ಬೀದರ್ಕರ್ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾದ ನಾರಾಯಣ ಜಾಗಿರ್ದಾರ್, ಜಿಲ್ಲಾ ಕಾರ್ಯದರ್ಶಿಯಾದ ವಿಟ್ಟಲ್ ಕುಲಕರ್ಣಿ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾದ ಮಲ್ಲಿಕಾರ್ಜುನ್ ಬಿರಾದಾರ್, ರಾಷ್ಟ್ರ ರಕ್ಷಣಾ ಪಡೆ ಜಿಲ್ಲಾ ಮುಖಂಡರಾದ ನಿಂಗರಾಜ್ ಡಾಂಗೆ ಹಿಂದೂ ಹೋರಾಟಗಾರರಾದ ರಾಕೇಶ್ ಜಮಾದಾರ್, ಈಶ್ವರ್ ಹಿಪ್ಪರಗಿ, ರಾಷ್ಟ್ರ ರಕ್ಷಣಾ ಪಡೆ ಕಾರ್ಯಕರ್ತರಾದ ಗಜಾನನ್ ರಾಮಂದಿರ, ದೀಪಕ್ ರಾಥೋಡ್, ನಿಂಗರಾಜ್ ಹೊನಕಿರಣಗಿ, ಶಿವಾಜಿ ಜೇವರ್ಗಿ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.



ಕಲಬುರಗಿ: ಕಲಬುರಗಿ ನಗರದ ವಿವಿಧ ಕೊಳಚೆ ಪ್ರದೇಶಗಳ ಸಮಸ್ಯೆಗಳ ಬೇಡಿಕೆಗಳ ಈಡೇರಿಸುವಂತೆ ಸ್ಲಂ ಜನರ ಸಂಘಟನೆ- ಕರ್ನಾಟಕ ಕಲಬುರ್ಗಿ ಜಿಲ್ಲಾ ಸಮಿತಿ ವತಿಯಿಂದ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ವಿಭಾಗಿಯ ಕಚೇರಿ ಎದುರುಗಡೆ ಪ್ರತಿಭಟನೆ ನಡೆಸಿ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪದಾಧಿಕಾರಿಗಳಾದ ಬಾಬುರಾವ್ ದಂಡಿನಕರ್, ಅಲ್ಲಮಪ್ರಭು ನಿಂಬರ್ಗಾ, ಬ್ರಹ್ಮಾನಂದ ಮಿಂಚಾ, ಗಣೇಶ್ ಕಾಂಬಳೆ, ಯಮನಪ್ಪ ಪ್ರಸಾದ್, ಅನಿಲ್ ಚಕ್ರ, ಯೇಸು ರಾಜ್, ಶಿವಕುಮಾರ್ ಚಿಂಚೋಳಿ, ಕರಣಕುಮಾರ್ ಬಂದರವಾಡ, ವಿಕಾಸ್ ಸವಾರಿಕರ್, ಪ್ರಕಾಶ್ ಮಾಳ್ಗೆ, ಮಲ್ಲಿಕಾರ್ಜುನ್ ಕಾಂಬಳೆ, ಅಬ್ದುಲ್ ರಶೀದ್, ಶ್ರೀಮತಿ ಬಸ್ಸಮ್ಮ ಭೀಮಪುರೆ, ಶ್ರೀಮತಿ ಮಮ್ತಾಜ್ ಬೇಗಂ, ಶ್ರೀಮತಿ ನಾಗಮ್ಮ ರಾಜೀವ್ ಗಾಂಧಿ ನಗರ್, ಸಾಯಪ್ಪ ಸನ್ ಮಂಡಲು ಸೇರಿದಂತೆ ಪದಾಧಿಕಾರಿಗಳು ಹಾಗೂ ವಿವಿಧ ಕೊಳಚೆ ಪ್ರದೇಶದ ಜನರು ಭಾಗವಹಿಸಿದ್ದರು.

# ನಮ್ಮ ನಡೆ ಫಲಿತಾಂಶದ ಕಡೆ" ಆರ್. ಜೆ ಕಾಲೇಜಿನಲ್ಲಿ ವಿಷಯಾಧಾರಿತ ಪುನಃಶ್ಚೇತನ ಕಾರ್ಯಾಗಾರ



ಕಲಬುರಗಿ: ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಕಲಬುರಗಿ, ಕರ್ನಾಟಕ ರಾಜ್ಯ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ (ರಿ) ಶಾಖೆ ಕಲಬುರಗಿ, ಉಪನ್ಯಾಸಕರ ಸಂಘ (ರಿ) ಶಾಖೆ ಕಲಬುರಗಿ ಹಾಗೂ ರಮಾಬಾಯಿ ಜಹಾಗೀರದಾರ ಸ್ವತಂತ್ರ ಪದವಿ ಪೂರ್ವ ಕಾಲೇಜು (ಆರ್.ಜೆ) ಕಲಬುರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ವಿಷಯಾಧಾರಿತ ಪುನಃಶ್ಚೇತನ ಕಾರ್ಯಾಗಾರ ಆಯೋಜಿಸಲಾಗಿತ್ತು.

ಜೀವಶಾಸ್ತ್ರ ಮತ್ತು ವಾಣಿಜ್ಯಶಾಸ್ತ್ರ ವಿಷಯಗಳ ಫಲಿತಾಂಶ ಸುಧಾರಣೆಗಾಗಿ ನಡೆಸಿದ ಕಾರ್ಯಾಗಾರಕ್ಕೆ ಉದ್ಘಾಟಕರಾಗಿ ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಉಪನಿರ್ದೇಶಕರಾದ ಸುರೇಶ ಅಕ್ಕಣ್ಣ ಅವರು ಕಲಬುರಗಿ ಜಿಲ್ಲೆಯಲ್ಲಿ ದ್ವಿತೀಯ ಪಿ.ಯು ಫಲಿತಾಂಶಕ್ಕಾಗಿ ಉಪನ್ಯಾಸಕರಾದವರು ಕಾಲೇಜಿನ ಮಕ್ಕಳನ್ನು ನಮ್ಮ ಮಕ್ಕಳಂತೆ ಕಾಳಜಿ ವಹಿಸಬೇಕು. ಕಳೆದ ಸಾಲಿನಲ್ಲಿ 31ನೇ ಸ್ಥಾನದಲ್ಲಿ ಇದ್ದ ಕಲಬುರಗಿ ಜಿಲ್ಲೆ 13ನೇ ಸ್ಥಾನಕ್ಕೆ ತರುವಂತೆ ಪ್ರಯತ್ನಿಸಿ. 10ನೇ ತರಗತಿಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳು ದ್ವಿತೀಯ ಪಿ.ಯು.ಸಿ ಯಲ್ಲಿ ಕೂಡ ತೇರ್ಗಡೆಯಾಗುವಂತೆ ಮಾಡುವುದು ಎಂದು ಹೇಳಿದರು.

ಪ್ರಾಚಾರ್ಯ ಸಂಘದ ಅಧ್ಯಕ್ಷರಾದ ಬಸವರಾಜ ಬಿರಾಜದಾರ ಅವರು ಮಾತಾಡುತ್ತಾ ವಿದ್ಯಾರ್ಥಿಗಳ ಉತ್ತಮ ಫಲಿತಾಂಶಕ್ಕೆ ಉಪನ್ಯಾಸಕರುಗಳು ಮಾರ್ಗದರ್ಶನ ಮಾಡಬೇಕು. ಈ ನಮ್ಮ ಕಾರ್ಯಕ್ರಮಕ್ಕೆ ಡಾ. ಭುರ್ಲಿ ಪ್ರಹ್ಲಾದರವರು ಪುನಃಶ್ಚೇತನ ಕಾರ್ಯಾಗಾರಕ್ಕೆ ಅನುಕೂಲ ಮಾಡಿಕೊಟ್ಟರು ಎಂದು ಪ್ರಶಂಶಿಸಿದರು.

ಕಾರ್ಯಕ್ರಮದ ಅಧ್ಯಕ್ಷ ಸ್ಥಾನ ವಹಿಸಿದ ಆರ್.ಜೆ. ಕಾಲೇಜಿನ ಪ್ರಾಂಶುಪಾಲರಾದ ಡಾ. ಭುರ್ಲಿ ಪ್ರಹ್ಲಾದ ರವರು ಖಾಸಗಿ, ಸರಕಾರಿ, ಅನಿದಾನಿತ ಎನ್ನದೇ ಎಲ್ಲರೂ ಒಂದಾಗಿ ಕಲಬುರಗಿ ಜಿಲ್ಲೆಯ ಫಲಿತಾಂಶ ಹೆಚ್ಚಳವಾಗುವಂತೆ ಮಾಡುವುದು ನಮ್ಮೆಲ್ಲರ ಗುರಿಯಾಗಬೇಕು. ವಿದ್ಯಾರ್ಥಿಗಳು 21 ಅಂಕ ಗಳಿಸುವುದು ದೊಡ್ಡ ವಿಷಯವೇನಲ್ಲ, ಸತತ ಓದು, ಬರಹ ಮತ್ತು ಪುನರಾವರ್ತನೆಯಲ್ಲಿ ತೊಡಗಿದರೆ ವಿದ್ಯಾರ್ಥಿಗಳು ಯಶಸ್ವಿಯಾಗಲು ಸಾಧ್ಯ ಎಂದು ಹೇಳಿದರು.

ಸ್ವಾಗತವನ್ನು ಸ.ಪ.ಪೂ (ಎಮ್.ಪಿ.ಹೆಚ್.ಎಸ್) ಕಾಲೇಜಿನ ಉಪನ್ಯಾಸಕರಾದ

ಸುಭಾಷ ರವರು ಕೋರಿದರು. ಮುಖ್ಯ ಅತಿಥಿಗಳಾಗಿ ಶ್ರೀಶೈಲಪ್ಪ ಬೋನಾಳ,ಜೆ.ಮಲ್ಲಪ್ಪ,ಚಂದ್ರಶೇಖರ ದೊಡ್ಡಮನಿ ಮತ್ತು ಬಿ.ಸಿ. ಚವ್ಹಾಣ ಉಪಸ್ಥಿತರಿದ್ದರು. ಸಂಘಟಕರಾಗಿ ಶ್ರೀನಿವಾಸ ಐ.ಜಿ., ವೆಂಕಟರಾಜು, ಶ್ರೀ ಭೀಮಯ್ಯ, ನಚಿಕೇತ,

ಸೂರಾಚಂದಗಾಂಧಿ ಮುಂತಾದವರು ಇದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಉಪಪ್ರಾಚಾರ್ಯ ಕೇದಾರ ದೀಕ್ಷಿತ್ ನಡೆಸಿಕೊಟ್ಟರು. ಮಳೇಂದ್ರ ಹಿರೇಮಠ, ಪ್ರಕಾಶ ಚವ್ಹಾಣ, ಪ್ರಕಾಶ ಕಾಂತೀಕರ, ಶಾಂತೇಶ ಹುಂಡೇಕಾರ, ದಿವ್ಯಾ ಪಟವಾರಿ, ವೈಶಾಲಿ ದೇಶಪಾಂಡೆ, ಹೃಷಿಕೇಶ ಜಹಗೀರದಾರ, ನವೀನ ಪಾಟೀಲ, ಇತರ ಉಪನ್ಯಾಸಕರು ಮತ್ತು ಸಿಬ್ಬಂದಿ ಬಳಗ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

## ಥಾಂಬೆ ಅವರ ನೇತೃತ್ವದಲ್ಲಿ ಜಿಲ್ಲಾ ಕೃಷಿ ಮಹಾ ನಿರ್ದೇಶಕ ಅಹಮದ್ ಪಟೇಲ ಅವರಿಗೆ ಮನವಿ



ಕಲಬುರಗಿ:ಸೆ.12: ಯುರಿಯಾ ಹಾಗೂ ಕಿಸಾನ ಜ್ಯೋತಿ ಹೆಸರಿನ ನಕಲಿ ಗೊಬ್ಬರ ಮಾರಾಟ ಹಾಗೂ ಹೆಚ್ಚುವರಿ ಹಣ ವಸೂಲಿ ಮಾಡುತ್ತಿರುವ ಶ್ರೀ ರೇವಣಸಿದ್ದೇಶ್ವರ ಆಗೋ ಏಜೆನ್ಸಿ ಸ್ಟೇಷನ ಘಾಣಗಾಪುರ ಇವರ ವಿರುದ್ದ ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರಾದ ನಾಗೇಂದ್ರಪ್ಪ ತಾಂಬೆ ಅವರ ನೇತೃತ್ವದಲ್ಲಿ ಜಿಲ್ಲಾ ಕೃಷಿ ಮಹಾ ನಿರ್ದೇಶಕ ಅಹಮದ್ ಪಟೇಲ ಅವರಿಗೆ ಮನವಿ ಸಲ್ಲಿಸಿದರು.

ಶ್ರೀ ರೇವಣಸಿದ್ದೇಶ್ವರ ಆಕ್ರೋ ಏಜೆನ್ಸಿ ಸ್ಟೇಷ ಘಾಣಗಾಪುರ ಇವರು ಬಹಳ ವರ್ಷಗಳಿಂದ ರೈತರಿಗೆ ಯುರಿಯಾ ಹಾಗೂ ಕಿಸಾನ ಜ್ಯೋತಿ ಹೆಸರಿನ ನಕ ಗೊಬ್ಬರ ತಯಾರಿಸಿ, ಅದನ್ನು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದಾರೆ. ನಕಲಿ ಗೊಬ್ಬರ ಬಳಕೆಇಂದ ರೈತ ಬೆಳೆ ಹಾನಿಯಾಗುತ್ತಿದ್ದು, ಇದರಿಂದ ರೈತರಿಗೆ ತುಂಬಾ ನಷ್ಟವಾಗುತ್ತಿದೆ. ಕೇವಲ ಕೃಷಿಯನ್ನೆ ಅವಲಂಬಿಸಿ ರೈತರು ಈ ರೀತಿಯ ನಷ್ಟದಿಂದ ತೊಂದರೆಯಾಗಿ ಬೇರೆ ಬೇರೆ ನಗರಗಳಿಗೆ ಗುಳೆ ಹೋಗುತ್ತಿದ್ದಾರೆ. ಈ ರೀತಿಯ ಅನ್ಯಾಯ ಮತ್ತು ಅಕ್ರಮ ಧಂದೆಯನ್ನು ತಕ್ಷಣ ನಿಲ್ಲಿಸಬೇಕು. ರೇವಣಸಿದ್ದೇಶ್ವರ ಆಗೋ ಏಜೆನ್ಸಿ' ಈ ಹೆಸರಿನ ಅಂಗಡಿಯನ್ನು ಕೂಡಲೆ ಮುಚ್ಚಿಸಿ, ಅಂಗಡಿ ಮಾಲಿಕ ಮೇಲೆ

ಸೂಕ್ತ ಕ್ರಮ ಜರುಗಿಸಬೇಕು ಇಲ್ಲವಾದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದಿಂದ ಜೆ.ಡಿ ಕಛೇರಿ ಎದುರು ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

# ಕಡುಬಡವರಿಗೆ ಸೂರು ಒದಗಿಸುವ ಕೆಲಸವಾಗಲಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಸೆ.12:ಸ್ವಂತ ಮನೆ ಹೊಂದುವ ಕಡುಬಡವರ ಪಾಲಿನ ಆಶಾ ಕಿರಣವಾಗಿ ಆಶ್ರಯ ಸಮಿತಿ ಕೆಲಸ ಮಾಡಲಿ ಎಂದು ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಸೂಚಿಸಿದರು.

ಇಲ್ಲಿಯನಗರಸಭೆಯಸಭಾಂಗಣದಲ್ಲಿ ನಗರ ಆಶ್ರಮ ಸಮಿತಿ ಸಭೆ ನಡೆಸಿ ಮಾತನಾಡಿದ ಅವರು, ಕಡುಬಡವರಿಗೆ ಸ್ವಂತ ಸೂರು ನೀಡುವ ಉದ್ದೇಶದಿಂದ ಭೂಮಿ ಖರೀದಿ ಮಾಡಿ ಕೇಂದ್ರ ಹಾಗೂ ರಾಜ್ಯಸರ್ಕಾರಗಳ ಸಬ್ಸಿಡಿ ಹಣದಲ್ಲಿ ನಿವೇಶನ ಕೊಡುವ ಯೋಜನೆಯ ಯಶಸ್ಸಿಗೆ ಎಲ್ಲರೂ ಪಕ್ಷಬೇಧ ಮರೆತು ಶ್ರಮಿಸೋಣ. ಈಗಿರುವ ಆಶ್ರಯ ನಿವೇಶನಗಳ ಹಂಚಿಕೆಗೆ ಎಲ್ಲರೂ ಪ್ರಾಮಾಣಿಕ ಪ್ರಯತ್ನ ಮಾಡೋಣ. ಯಾರದೇ ಒತ್ತಡಕ್ಕೆ ಮಣಿಯದೇ ಅರ್ಹರಿಗೆ ನಿವೇಶನ ಕೊಡುವ ನಿಟ್ಟಿನಲ್ಲಿ ವಿಶೇಷವಾಗಿ ಅಧಿಕಾರಿಗಳು ಆಸಕ್ತಿ ವಹಿಸಿ ಕೆಲಸ ಮಾಡಬೇಕು ಎಂದು ತಿಳಿಸಿದರು.

2025-26ನೇ ಸಾಲಿನ 2.0 ಪಿಎಂಎವೈ(ಯು) ಅರ್ಜಿಗಳ ವಿಲೇವಾರಿ ಕುರಿತು ಸುದೀರ್ಘವಾಗಿ ಚರ್ಚಿಸಿದ ಶಾಸಕರು, ನಗರ ವಾಸಿಗಳಾದ ಮಂಗಳಮುಖಿಯರಿಗೆ ನಿವೇಶನ ಮತ್ತು ವಸತಿ ವ್ಯವಸ್ಥೆ ಕಲ್ಪಿಸಿಕೊಡಬೇಕು. ಈಗಾಗಲೇ ಪಿಎಂಎವೈ ಯೋಜನೆಯಡಿ ಒಟ್ಟು 3050 ಅರ್ಜಿಗಳು ಸಲ್ಲಿಕೆಯಾಗಿದ್ದು ಇವುಗಳನ್ನು ಕೂಲಂಕುಶವಾಗಿ ಪರಿಶೀಲಿಸಿ ಮುಂದಿನ ಕ್ರಮ ವಹಿಸಲು ಸೂಚಿಸಿದ ಶಾಸಕರು ಕೂಡಲೇ ವ್ಯಾಲಿಡೇಶನ್ ಮಾಡಲು ತಿಳಿಸಿದರು.

ವಿಶೇಷವಾಗಿ ಲಿಂಗತ್ವ ಅಲ್ಪಸಂಖ್ಯಾತರಿಗೆ 9 ಜನರಿಗೆ ಸರ್ವೆ ನಂ.151\1 ರಲ್ಲಿ ನಿವೇಶನ ನೀಡಬೇಕು. ಈ ಕುರಿತು ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಯಿತು. ನಗರಸಭೆ ಆಶ್ರಯ ಬಡಾವಣೆಗಳ ಸರ್ವೆ.ನಂ.151 ರಲ್ಲಿಯ 42 ನಿವೇಶನಗಳನ್ನು ಕಾನೂನು ಸಲಹೆ ಪಡೆದು ಕಚೇ-ರಿಯ ಹಂತದಲ್ಲಿ ಪರಿಶೀಲಿಸಬೇಕು ಎಂದು ಅಧಿಕಾರಿಗಳಿಗೆ ಶಾಸಕರು ಸೂಚನೆ ನೀಡಿದರು.

ಇದೇ ಸರ್ವೆ ನಂಬರ್‌ನಲ್ಲಿ ಹೈಟೆನ್ಶನ್ ವೈಯರ್ ಹೋಗಿದ್ದು ಇದರ ಕೆಳಗಡೆ ಮನೆಗಳಿವೆ ಜೆಸ್ಕಾಂ ಅಧಿಕಾರಿಗಳೊಂದಿಗೆ ಚರ್ಚಿಸಿ ವೈರ್ ಸ್ಥಳಾಂತರಿಸಬೇಕು ಮತ್ತು ರಸ್ತೆ ನಿರ್ಮಾಣ ಬಗ್ಗೆಯೂ ತ್ವರಿತ ಕ್ರಮ ಕೈಗೊಳ್ಳಿ ಎಂದ ತಿಳಿಸಿದರು. ಸಭೆಯಲ್ಲಿ ಸದಸ್ಯರು ಆಶ್ರಯ ಸಮಿತಿಗೆ ಪ್ರತ್ಯೇಕ ಕಚೇರಿಯ ವ್ಯವಸ್ಥೆ ಮಾಡವಂತೆ ಮನವಿ ಮಾಡಿದರು. ಕೂಡಲೇ ಕಚೇರಿ ಮಾಡಿ ಎಂದು ಅಧಿಕಾರಿಗಳಿಗೆ ಶಾಸಕರು ಸೂಚನೆ ನೀಡಿದರು.

ಸುಮಾರು ವರ್ಷಗಳಿಂದ ಆಶ್ರಯ ಸಮಿತಿಗೆ ಸೇರಿದ ಸರ್ವೆ ನಂ.88\6 ಮತ್ತು 90\2 ರಲ್ಲಿ ಅತಿಕ್ರಮಣವಾಗಿರುವುದು ಸದಸ್ಯರು ಗಮನಕ್ಕೆ ತಂದರು. ಕೂಡಲೇ ಅತಿಕ್ರಮಣ ಮಾಡಿದ 70 ಜನರಿಗೆ ನೋಟಿಸ್ ನೀಡಲು ಶಾಸಕರು ಕಟ್ಟುನಿಟ್ಟಿನ ಸೂಚನೆ ನೀಡಿದರು. ಸಭೆಯಲ್ಲಿ ನಗರಸಭೆ ಪೌರಯುಕ್ತರಾದ ಉಮೇಶ ಚೌಹಾಣ್ ಹಾಗೂ ಆಶ್ರಯ ಸಮಿತಿ ಸದಸ್ಯರಾದ ಪ್ರಭಾಕರ್ ಜಿ., ಆರತಿ ಅಮರೇಶ್ ಜಾಕ, ಶಿವಕುಮಾರ್ ಕರದಳ್ಳಿ, ಇಮುನವೆಲ್ ಕ್ರಿಸ್ಟೋಫರ್ ಬೆಳ್ಳಿ ಮತ್ತು ಅಧಿಕಾರಿಗಳು ಇದ್ದರು.

## ಸೆ.29 ರಂದು ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.12-ಾರ್ಮಿಕರ ಭವಿಷ್ಯ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಅಂಶದಡಿ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮವನ್ನು ಸೆ.29 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ಬಳ್ಳಾರಿ ನಗರದ ಬೆಂಗಳೂರು ರಸ್ತೆಯ ಓಂ ಫ್ಯಾಷನ್ ಕೊಟ್ಟೂರು ಸ್ವಾಮಿ ಮಠದಲ್ಲಿ ಆಯೋಜಿಸಲಾಗಿದೆ ಎಂದು ಪ್ರಾದೇಶಿಕ ಭವಿಷ್ಯ ನಿಧಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ ಪ್ರವೀಣ್ ಅವರು ತಿಳಿಸಿದ್ದಾರೆ.

ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರರ ಕುಂದು ಕೊರತೆ ಪರಿಹಾರ, ಮಾಹಿತಿ ವಿನಿಮಯ ಮಾಡಿಕೊಳ್ಳಬಹುದು. ಉದ್ಯೋಗದಾತರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರು ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು ಹಾಗೂ ಸುಧಾರಣೆ ಕ್ರಮಗಳ ಕುರಿತು ಮಾಹಿತಿ ಒದಗಿಸುವ ಕಾರ್ಯಕ್ರಮವಾಗಿದೆ.

ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಸೆ.29 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪುರ ಅವರ ಕಾಳಜಿಯಿಂದ ಹೊಸ ಬದುಕಿಗೆ ಕಾಲಿಟ್ಟ ಮಾನಸಿಕ ಅಸ್ವಸ್ಥೆ

# ಕೂದಲು ಕತ್ತರಿಸಿ, ಸ್ನಾನ ಮಾಡಿಸಿ ಒಳ್ಳೆಯ ಬಟ್ಟೆಯನ್ನು ತೊಡಿಸಿ ಹೊಸ ಬದುಕಿಗೆ ಕಾಲಿಡುವಂತೆ ಮಾಡಿದ ಭಾರತಾಂಬೆ ಶಿಕ್ಷಣ ಸಂಸ್ಥೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಸೆಪ್ಟೆಂಬರ್, 12-ಯಾದಗಿರಿ ನಗರದಲ್ಲಿ ಮಳೆ ಚಳಿ ಎನ್ನದೇ ಅರೆ ಹುಚ್ಚರಂತೆ ಅಲೆಯುತ್ತಿದ್ದ ನಿರ್ಗತಿಕ ಮಾನಸಿಕ ಅಸ್ವಸ್ಥೆ ಮಹಿಳೆಯು ನಗರಸಭೆ ಅಧ್ಯಕ್ಷೆ ಕು.ಲಲಿತಾ ಅನಪುರ ಅವರ ಕಾಳಜಿಯಿಂದ ಹೊಸ ಬದುಕಿಗೆ ಕಾಲಿಟ್ಟಿದ್ದಾಳೆ.

ನಿರ್ಗತಿಕ ಮಹಿಳೆಯು ನಗರದಲ್ಲಿ ಬೀದಿ ಬದಿಯಲ್ಲಿ ಅಲೆಯುತ್ತಿರುವುದು ನಗರಸಭೆ ಅಧ್ಯಕ್ಷೆ ಅವರ ಗಮನಕ್ಕೆ ಸಾರ್ವಜನಿಕರು ತಂದಿದ್ದಾರೆ. ತಕ್ಷಣವೇ ಸ್ಪಂದಿಸಿದ ಅವರು ನಗರಸಭೆ ಪೌರಾಯುಕ್ತ ಉಮೇಶ ಚವ್ಹಾಣ್, ಸಮುದಾಯ ಸಂಘಟನಾಧಿಕಾರಿ ಭೀಮಣ್ಣ ಕೆ ವೈದ್ಯ ಮತ್ತು ಸಿಆರ್‌ಪಿ ಗಳ ತಂಡವನ್ನು ಕರೆದು ಅಸ್ವಸ್ಥ ಮಹಿಳೆ ಇರುವ ಸ್ಥಳಕ್ಕೆ ಧಾವಿಸಿದ್ದಾರೆ.

ನಂತರ ಆ ಮಹಿಳೆಯನ್ನು ಹಾರೈಕೆ ಕೇಂದ್ರಕ್ಕೆ ಸೇರಿಸಿ ಸೂಕ್ತ ವ್ಯವಸ್ಥೆ ಕಲ್ಪಿಸಿ ಎಂದು ಸೂಚಿಸಿದರು.

ಮಹಿಳೆಯನ್ನು ಅಧ್ಯಕ್ಷೆ ಅವರ ಆದೇಶದ ಮೇರೆಗೆ ನಗರದಲ್ಲಿನ ವಸತಿ ರಹಿತರ ಆಶ್ರಯ ಕೇಂದ್ರದ ಅಧೀನಕ್ಕೆ ಒಪ್ಪಿಸಿದರು.

ದಯನೀಯ ಸ್ಥಿತಿಯಲ್ಲಿ ಖಿನ್ನತೆಗೆ ಒಳಗಾದಂತೆ ಇರುವ ಮಹಿಳೆಯ ಮಾಸಿದ ಹರಕಲು ಬಟ್ಟೆ, ಗಂಟು ಕಟ್ಟಿದ ತಲೆ ಕೂದಲು ನೋಡಿದರೆ ಆಕೆಯನ್ನು ಮುಟ್ಟದ ಸ್ಥಿತಿಯಲ್ಲಿ ಇದ್ದರು.

ವಸತಿರಹಿತರ ಆಶ್ರಯ ಕೇಂದ್ರವನ್ನು ನಿರ್ವಹಣೆ ಮಾಡುತ್ತಿರುವ ಭಾರತಾಂತೆ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಕಾರ್ಯದರ್ಶಿ ಭೀಮಾಶಂಕರ ದೊಡ್ಡಮನಿ ಮತ್ತು ವ್ಯವಸ್ಥಾಪಕ ಬೀರಲಿಂಗಪ್ಪ ಕಿಲ್ಲನಕೇರಾ ಮತ್ತು ಕೇರ್ ಟೇಕರ್ ದೇವಮ್ಮ ಹಾಗೂ ಸಿಬ್ಬಂದಿ ವರ್ಗದವರು ಆಕೆಯ ತಲೆ ಕೂದಲು ಕತ್ತರಿಸಿ, ಸ್ನಾನ ಮಾಡಿಸಿ ಒಳ್ಳೆಯ ಬಟ್ಟೆಯನ್ನು ತೊಡಿಸಿದ್ದಾರೆ. ಸಾಮಾನ್ಯ ಜನರಂತೆ ಹೊಸ ಬದುಕಿಗೆ ಕಾಲಿಡುವಂತೆ ಮಾಡಿದ್ದಾರೆ.

ಮುಗ್ದ ಮನಸಿನ ಮಹಿಳೆ ಆರೈಕೆರಯಿಲ್ಲದೆ ಬೀದಿ ಬೀದಿಗಳಲ್ಲಿ ಅಲೆಯುತ್ತಿದ್ದಳು.

ಈಕೆಯು ಮಾನಸಿಕ ಅಸ್ವಸ್ಥತೆ ಮಾತ್ರವಲ್ಲದೆ ದೈಹಿಕವಾಗಿ ನಾನಾ ಕಾಯಿಲೆಗಳಿಂದಲೂ ಪರದಾಡಿ ಯಾವುದೇ ಅನ್ಯ ಮಾರ್ಗವಿಲ್ಲದೆ ಅಸಹಾಯಕರಾಗಿ ಅನಿವಾರ್ಯವೆಂಬಂತೆ ಹಿಂಸೆಯನ್ನು ಅನುಭವಿಸುತ್ತಲೇ ದಿನ ಕಳೆಯುತ್ತಿದ್ದಳು ಇಂದು ಆ ಸಂಕಷ್ಟದಿಂದ ಮುಕ್ತಿ ಹೊಂದಿದ್ದಾಳೆ.

# ರಾಷ್ಟ್ರದ ಅಭಿವೃದ್ಧಿಯಲ್ಲಿ ಮಹಿಳಾ ಸಬಲೀಕರಣ ಮುಖ್ಯ:ಬಸಲಿಂಗಮ್ಮ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಸೆ.12:ರಾಷ್ಟ್ರದ ಅಭಿವೃದ್ಧೀಯಲ್ಲಿ ಮಹಿಳಾ ಸಬಲೀಕರಣ ಅತಿ ಮುಖ್ಯವಾಗಿದ್ದೂ ಈ ದಿಸೆಯಲ್ಲಿ ಸರಕಾರ ಸಾಕಷ್ಟು ಯೋಜನೆಗಳನ್ನು ಹಾಗೂ ಅವಕಾಶಗಳನ್ನು ಮಹಿಳೆಯರಿಗೆ ಕಲ್ಪಿಸಿಕೊಟ್ಟಿದೆ. ಅದರ ಸದುಪಯೋಗದೊಂದಿಗೆ ನಮ್ಮ ಮಹತ್ವ ಹೆಚ್ಚಿಸಿಕೊಳ್ಳಬೇಕು ಎಂದು ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಜೆಂಡರ್ ಸ್ಪೆಷಲಿಸ್ಟ್ ಬಸಲಿಂಗಮ್ಮ ಅಭಿಪ್ರಾಯಪಟ್ಟರು.

ಪಟ್ಟಣದ ವಿದ್ಯಾವರ್ಧಕ ಡಿ.ಎಲ್. ಇಡಿ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಮಿಷನ್ ಶಕ್ತಿ ಯೋಜನೆ, ಜಿಲ್ಲಾ ಮಹಿಳಾ ಘಟಕದಡಿ ಡಿ.ಎಲ್.ಇಡಿ ಕಾಲೇಜಿನ ಪ್ರಶಿಕ್ಷಣಾರ್ಥಿಗಳಿಗೆ ಲಿಂಗತಾರತಮ್ಯ, ಲಿಂಗ ಸಮಾನತೆ, ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆ ಭದ್ರತೆ ಮತ್ತು ಮಹಿಳಾ ಸಬಲೀಕರಣ ಜೀವನ ಕೌಶಲ್ಯಗಳ ಕುರಿತು ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಮಾತನಾಡಿದರು. ಮಕ್ಕಳ ಸಹಾಯವಾಣಿ 1098, ಮಹಿಳಾ ಸಹಾಯವಾಣಿ 181, ಪೊಲೀಸ್ ಸಹಾಯವಾಣಿ 112 ಹೊಂದಿವೆ. ಇವುಗಳು ಮಹಿಳೆಯರ ಸಮಸ್ಯೆಗಳಿಗೆ ಕೂಡಲೇ ಸ್ಪಂದನೆ ಮಾಡಲಿವೆ ಎಂದು ತಿಳಿಸಿದರು.

ಡಾನ್ ಬಾಸ್ಕೋ ಸಂಸ್ಥೆಯ ಜಿಲ್ಲಾ ಪೋಷಕತ್ವ ಯೋಜನೆ ಸಂಯೋಜಕ ನಾಗಪ್ಪ ಗಮಗ ಮಕ್ಕಳ ಹಕ್ಕುಗಳು, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ ಮತ್ತು ಪೋಷಕತ್ವ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಸೈದಾಪುರ ಸಮೂದಾಯ ಆರೋಗ್ಯ ಕೇಂದ್ರದ ಆರ್.ಕೆ.ಎಸ್.ಕೆ ಸಮಾಲೋಚಕ ಶಿವಶಂಕರೆಡ್ಡಿ ಹದಿಹರೆಯದ ಯುವತಿಯರ ಆರೋಗ್ಯಕ್ಕೆ ಸಂಬಂಧಿಸಿದಂತೆ ಋತುಚಕ್ರ ನೈರ್ಮಲ್ಯ ಮತ್ತು ಸ್ವಚ್ಛತೆ ಕುರಿತು ತಿಳಿಸಿದರು.

ಪ್ರಾಂಶುಪಾಲ ಕರಬಸಯ್ಯ ದಂಡಿಗಿಮಠ ಅಧ್ಯಕ್ಷತೆ ವಹಿಸಿದ್ದರು. ಮುಖ್ಯಗುರು ಲಿಂಗಾರೆಡ್ಡಿ ನಾಯಕ, ಹಂಪಣ್ಣ ಸಜ್ಜನ ಶೆಟ್ಟಿ, ಜಿ.ಎಂ. ಗುರುಪ್ರಸಾದ, ಉಪನ್ಯಾಸಕರಾದ ಸಾಬಯ್ಯ ರಾಯಪ್ಪನೋರ, ಶ್ವೇತಾ ರಾಘವೇಂದ್ರ ಪೂರಿ, ಆನಂದ ಪಾಟೀಲ, ನಾಗಪ್ಪ, ಶಿವಶಂಕರೆಡ್ಡಿ, ಅಂಗನವಾಡಿ ಕಾರ್ಯಕರ್ತರಾದ ಕೃಷ್ಣವೇಣಿ, ಭಾಗ್ಯ, ಭಾಗ್ಯಶ್ರೀ, ಪ್ರಶಿಕ್ಷಣಾರ್ಥಿಗಳು ಸೇರಿದಂತೆ ಇತರರಿದ್ದರು. ದೇವಿಂದ್ರಮ್ಮ, ಲಕ್ಷ್ಮೀ ಪ್ರಾರ್ಥಾನಾಗೀತೆ ಹಾಡಿದರು. ಆನಂದ ಪಾಟೀಲ ಕೊಂಡಾಪುರ. ನಿರೂಪಿಸಿದರು.

# ಎಲ್ಲ ಮನೆಗಳ ಜಿಯೋ ಟ್ಯಾಗಿಂಗ್ ಕಾರ್ಯ ಶೀಘ್ರ ಪೂರ್ಣಗೊಳಿಸಿ:ಜಿಲ್ಲಾಧಿಕಾರಿ ಹರ್ಷಲ್ ಭೋಯರ್

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ :ಸೆ:11:ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಆಗಸ್ಟ್ 23 ರಿಂದ ಆರಂಭಿಸಿದ್ದು, ವಿದ್ಯುತ್ ಮೀಟರ್ ರೀಡರುಗಳು ಎಲ್ಲ ಮನೆಗಳನ್ನು ಜಿಯೋಟ್ಯಾಗಿಂಗ್ ಮಾಡುವ ಕಾರ್ಯ ಪ್ರಾರಂಭಿಸಿದ್ದು, ಜಿಲ್ಲೆಯಲ್ಲಿ ಆದಷ್ಟು ಬೇಗ ಯಶಸ್ವಿಯಾಗಿ ಈ ಕಾರ್ಯ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಹರ್ಷಲ್ ಭೋಯರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಹಿಂದುಳಿದ ವರ್ಗಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೈಗೊಳ್ಳುವ ಕುರಿತು ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಸಭೆ ನಡೆಸಿದ ಅವರು,ಎಲ್ಲಾ ವಾಸದ ಮನೆಗಳಿಗೆ ವಿದ್ಯುತ್ ಸಂಪರ್ಕ ವಿರುವ ಬಗ್ಗೆ ಖಾತ್ರಿಪಡಿಸಿಕೊಂಡು,ವಾಸದ ಮನೆಗಳ ಆರ್. ಆರ್. ಮೀಟರ್ ಆಧಾರದ ಮೇಲೆ ಮನೆಗಳನ್ನು ಗುರುತಿಸಿ ಅಲ್ಲಿರುವ ಜನರ ಸಮೀಕ್ಷೆ ಮಾಡಿ, ಯಾವುದೇ ಮನೆಗಳು ಸಮೀಕ್ಷಾ ವ್ಯಾಪ್ತಿಯಿಂದ ತಪ್ಪಿ ಹೋಗದಂತೆ ನಿಗಾವಹಿಸಬೇಕು. ಮೀಟರ್ ನಂಬರ ಇಲ್ಲದ ಅಲೆಮಾರಿ,ಅರೆ ಅಲೆಮಾರಿ ವಾಸಸ್ಥಳ ಮತ್ತು ಕೊಳಚೆ ಪ್ರದೇಶಗಳ, ಅರಣ್ಯ ಪ್ರದೇಶಗಳ ಪ್ರತಿ ಕುಟುಂಬದ ನಂಬರ್ ಆಪಷನ್‌ ನಲ್ಲಿ ಗಊಖಆ ಸೃಜಿಸಬೇಕು. ಸಂಬಂಧಿಸಿದ ಅಧಿಕಾರಿಗಳು ಈ ಕಾರ್ಯ ಅಚ್ಚುಕಟ್ಟಾಗಿ ನಿರ್ವಹಿಸಲು ಅವರು ಸೂಚಿಸಿದರು.

ಅದರಂತೆ ಎನ್. ಎಸ್. ಎಸ್ ವಿದ್ಯಾರ್ಥಿಗಳು,ಆಶಾ ಕಾರ್ಯಕತೆ-ೆಯರ ಮೂಲಕ ಮನೆ ಮನೆಗೆ ಭೇಟಿ ನೀಡಿ ಸಮೀಕ್ಷೆ ಕುರಿತು ಸೂಕ್ತ ಅರಿವು ಮೂಡಿಸಬೇಕು. ಸಂಬಂಧಿಸಿದ ನೋಡಲ್ ಅಧಿಕಾರಿಗಳು ಈ ಕುರಿತು ಮೇಲುಸ್ತುವಾರಿ ನೋಡಿಕೊಳ್ಳಲು ಹಾಗೂ ಗ್ರಾಮೀಣ ಹಾಗೂ ನಗರ ಸ್ಥಳಗಳಲ್ಲಿ ಕಸ ವಿಲೇವಾರಿ ವಾಹನದ ಮೂಲಕ

ಆಡಿಯೋ ಕ್ಲಿಪ್ ಮೂಲಕ ಜಾಗೃತಿ ಮೂಡಿಸಬೇಕು. ಗ್ರಾಮೀಣ ಪ್ರದೇಶದ ಜವಾಬ್ದಾರಿಯನ್ನು ಆಯಾ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು,ಪಿಡಿಓ ಗಳು ಹಾಗೂ ನಗರ ಪ್ರದೇಶಗಳಲ್ಲಿ ಪಿ.ಡಿ.ಡಿಯುಡಿಸಿ ಅವರು ಜವಾಬ್ದಾರಿ ವಹಿಸಿಕೊಳ್ಳಲು ಅವರು ಸೂಚಿಸಿದರು.

ತಹಶೀಲ್ದಾರ್ ರು ,ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿಗಳು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು , ಗ್ರಾಮ ಆಡಳಿತಾಧಿಕಾರಿಗಳು ಹಾಗೂ ಪಿ.ಡಿ ಡಿಯುಡಿಸಿ ಹೆಚ್ಚು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಸಮೀಕ್ಷೆದಾರರಿಗೆ/ಗಣತಿದಾರರಿಗೆ,/ಶಿಕ್ಷಕರಿಗೆ ಕ್ಲಸ್ಟರ್ ವೈಸ್ ತರಬೇತಿ ಕುರಿತು ಮೈಕ್ರೋ ಪ್ಲಾನ್ ಸಿದ್ಧಪಡಿಸಿ ವ್ಯವಸ್ಥಿತ ರೀತಿಯಲ್ಲಿ ತರಬೇತಿ ಹಮ್ಮಿಕೊಳ್ಳಬೇಕು. ಮಾಸ್ಟರ್ ಟ್ರೈನರ್ಸ,ಗಣತಿದಾರರು, ಮೇಲ್ವಿಚಾರಕರ ಸಮಗ್ರ ಅಂಕಿಅಂಶಗಳನ್ನು ಸಿದ್ಧವಾಗಿಟ್ಟುಕೊಂಡು,ತಾಲೂಕು ಮಟ್ಟದ ಸಮನ್ವಯ ಸಮಿತಿ ಸದಸ್ಯರು ಕೂಡ ಅವಶ್ಯಕ ಸಿದ್ಧತೆ ಮಾಡಿಕೊಳ್ಳುವಂತೆ ನೋಡಿಕೊಳ್ಳಲು ಅವರು ಸೂಚಿಸಿ, ಈಗ ನಡೆಯುತ್ತಿರುವ

ಜಿಯೋಟ್ಯಾಗ್, ಸರ್ವೆ ಕಾರ್ಯ ಬಗ್ಗೆ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸುವಂತೆ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಗಣತಿದಾರರಿಗೆ ಡಿಡಿಪಿಐ ಮೂಖಾಂತರ ಸೂಕ್ತ ತರಬೇತಿ ಹಮ್ಮಿಕೊಳ್ಳಲು ಅವರು ಸೂಚನೆ ನೀಡಿದರು. ಎರಡನೇಯ ಹಂತದ ಸಮೀಕ್ಷೆಯ ಕಾರ್ಯವನ್ನು ದಸರಾ ರಜೆಯ ಅವಧಿಯಲ್ಲಿ 22 ನೇ ಸೆಪ್ಟೆಂಬರ್ ನಿಂದ 7ನೇ ಅಕ್ಟೋಬರ್ 2025 ರವರೆಗೆ ನಡೆಸಲು ಗುರಿ ಹೊಂದಲಾಗಿದೆ.

ಪ್ರತಿಮನೆಗೂ ಸ್ಟಿಕ್ಕರ್ ಅಂಟಿಸಿ ಸಮೀಕ್ಷಾದಾರರಿಗೆ ಮನೆಯ ಗುರುತಿಸುವಿಕೆ ಸುಲಭವಾಗಲು ಸಾರ್ವಜನಿಕರು ಮತ್ತು ಪ್ರತಿಯೊಂದು ಕುಟುಂಬದ ಸದಸ್ಯರು[ವಿಶೇಷವಾಗಿ ಅಪಾರ್ಟೆಂಟ್ ಮತ್ತು ಕ್ಲಸ್ಟರ್ ವಾಸಸ್ಥಳಗಳಲ್ಲಿ ವಾಸಿಸುವವರು] ಮೀಟರ್ ರೀಡರ್ ಗಳಿಗೆ ವಹಿಸಲಾಗಿರುವ ಮನೆ ಪಟ್ಟಿ ಕೆಲಸವನ್ನು ಸುಗಮವಾಗಿ ಪೂರ್ಣಗೊಳಿಸುವ ದಿಸೆಯಲ್ಲಿ ಸಹಕರಿಸಲು ಮತ್ತು ಅನುಕೂಲ ಮಾಡಿಕೊಡಲು ಅವರು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ಈ ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿ ನಡೆಯಬೇಕು.ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ಸಮೀಕ್ಷೆ ಕಾರ್ಯ ಮಹತ್ವದ್ದಾಗಿರುವದರಿಂದ ಕುಟುಂಬಗಳ ಸಮೀಕ್ಷೆ 2024ಕ್ಕೆ ಅನ್ವಯಿಸುವಂತೆ ಜಿಲ್ಲೆಯಲ್ಲಿ 2.80 ಲಕ್ಷ ಕುಟುಂಬಗಳು ಇರುವುದಾಗಿ ಅಂದಾಜಿಸಲಾಗಿದೆ. ಇಂಧನ ಇಲಾಖೆ ಮೀಟರ್ ರೀಡರ್ ಗಳು ಆರ್. ಆರ್ ನಂಬರ್ ಪ್ರಕಾರ ಜಿ.ಓ ಟ್ಯಾಗಿಂಗ್ ಸ್ಟಿಕರ್ ಅಂಟಿಸುವ ಕಾರ್ಯ ಆರಂಭಿಸಿದ್ದು,ಇದಾದ ನಂತರ ಸಮೀಕ್ಷೆ ಕಾರ್ಯ ವ್ಯವಸ್ಥಿತವಾಗಿ ಕೈಗೊಳ್ಳಲು ಪ್ರತಿ ಕುಟುಂಬಕ್ಕೆ 150 ಕುಟುಂಬಕ್ಕೆ ಒಬ್ಬ ಗಣತಿದಾರರಂತೆ 2000ಕ್ಕೂ ಹೆಚ್ಚು ಗಣತಿದಾರರು ಮತ್ತು ಪ್ರತಿ 20 ಗಣತಿದಾರಿಗೆ ಒಬ್ಬರು ಮೇಲ್ವಿಚಾರಕರನ್ನು ಮತ್ತು ಜಿಲ್ಲೆಗೆ 50 ಮಾಸ್ಟರ್ ಟ್ರೈನರ್ ಗಳನ್ನು ಗುರುತಿಸಿ ನಿಗದಿಪಡಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿ ತರಬೇತಿಗಳಿಗೂ ಸಿದ್ಧತೆ ಮಾಡಿಕೊಳ್ಳಲು ಅವರು ಸೂಚಿಸಿದರು. ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ,ಶಾಲಾ ಶಿಕ್ಷಣ ಇಲಾಖೆ,ಡಯಟ್,ಪದವಿಪೂರ್ವ ಕಾಲೇಜು,ಸಿಆರ್ ಪಿ,ಬಿಆರ್ ಪಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು,ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು,ಜೆಸ್ಕಾಂ,

ಇಂಧನ ಇಲಾಖೆ ಅಧಿಕಾರಿಗಳು ಪರಸ್ಪರ ಸಮನ್ವಯತೆಯೊಂದಿಗೆ ಈ ಕಾರ್ಯ ಯಶಸ್ವಿಗೊಳಿಸಲು ಅವರು ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಒ ಲವೀಶ್ ಒರಡಿಯಾ, ಜೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ರಾಘವೇಂದ್ರ,ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಸದಾಶಿವನಾರಾಯಣ-ಕರ, ವ್ಯವಸ್ಥಾಪಕರಾದ ಸಾಬಯ್ಯ , ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಾಲ್ಯ ವಿವಾಹ ನಿಯಂತ್ರಣಕ್ಕೆ ಎಲ್ಲಾರು ಕೈಜೋಡಿಸಿ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರು

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ:ಸೆ:12: ಬಾಲ್ಯವಿವಾಹದಂತಹ ಗಂಭೀರ ಸಮಸ್ಯೆಗಳ ನಿವಾರಣೆಗೆ ಬಾಲ್ಯವಿವಾಹ ನಿಷೇಧ ಕಾಯ್ದೆ-2006 ರ ಕುರಿತು ಸೂಕ್ತ ಜಾಗೃತಿ ಮೂಡಿಸುವಂತೆ ನಗರ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಹೇಳಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು ಮಕ್ಕಳ ರಕ್ಷಣಾ ನಿರ್ದೇಶನಾಲಯ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೋಲಿಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಸಹಯೋಗದಲ್ಲಿ ಬಾಲ್ಯವಿವಾಹ ನಿಷೇಧ ಕಾಯ್ದೆ 2006, ಪೋಕ್ಸೋ ಕಾಯ್ದೆ -2012 ಹಾಗೂ ಬಾಲ ನ್ಯಾಯ ಕಾಯಿದೆ -2015 ಕುರಿತು ಸಮೂಹ ಮಾಧ್ಯಮ, ಪ್ರಿಂಟಿಂಗ್ ಪ್ರೆಸ್,ಟೆಂಟ್ ಹೌಸ್,ಡಿಜೆ,ಬ್ಯಾಂಡ್, ಕಲ್ಯಾಣ ಮಂಟಪ,ಶಾದಿ ಮಹಲ್ ಮಾಲಿಕರು,ಪೂಜಾರಿ,ಖಾಜಿ, ಮೌಲಾನ,ಅಡುಗೆ ಭಟ್ಟರಿಗೆ ಏರ್ಪಡಿಸಿದ್ದ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬಾಲ್ಯವಿವಾಹದಿಂದ ಹೆಣ್ಣು ಮಗುವಿನ ರಕ್ಷಣೆಯಾಗಬೇಕು.ಹೆಣ್ಣು ಹಾಗೂ ಗಂಡು ಮಗು ನಡುವಿನ ಲಿಂಗತಾರತಮ್ಯ ಹೋಗಬೇಕು.ಗಂಡು ಮಗುವಿನ ಜೊತೆಗೆ ಹೆಣ್ಣು ಮಗುವಿಗೂ ಉನ್ನತ ಶಿಕ್ಷಣದ ಅವಕಾಶ ಕಲ್ಪಿಸಿ ಸಮಾಜದಲ್ಲಿ ಉನ್ನತ ಸ್ಥಾನ ದೊರಕಿಸಲು ಪಾಲಕರು,ಎಲ್ಲರೂ ಶ್ರಮಿಸಬೇಕು.ಬಾಲ ವಿವಾಹದಿಂದಾಗುವ ದುಷ್ಪರಿಣಾಮ ಹಾಗೂ ಬಾಲ್ಯ ವಿವಾಹ ಕಾಯ್ದೆ 2006ರ ಕುರಿತು ಅವಶ್ಯಕ ಜಾಗೃತಿ ಮೂಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶರಾದ ಮರಿಯಪ್ಪ ಅವರು, ಮಕ್ಕಳ ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆಯಾಗಬೇಕು. ಮಕ್ಕಳ ಬಾಲ್ಯ ಅಮೂಲ್ಯವಾಗಿರುವದರಿಂದ ಅವರ ಭಾವನೆ ಹಾಗೂ ಜೀವನಕ್ಕೆ ಗೌರವ ನೀಡಬೇಕು. ಬಾಲ್ಯ ವಿವಾಹ ಸಾಮಾಜಿಕ ಪಿಡುಗುಆಗಿದ್ದು, ಬಾಲ್ಯ ವಿವಾಹ ಕಂಡು ಬಂದ ತಕ್ಷಣ ಮಕ್ಕಳ ಸಹಾಯವಾಣಿ 1098, ಪೋಲಿಸ್ ಇಲಾಖೆ ಸಹಾಯವಾಣಿ 112 ಹಾಗೂ ಮಕ್ಕಳ ರಕ್ಷಣಾ ಘಟಕ(08473253347 ) ಗೆ ದೂರು ಸಲ್ಲಿಸಬೇಕೆಂದು ಕರೆ ನೀಡಿದರು.

ಖಾಯಂ ಜನತಾ ನ್ಯಾಯಾಲಯ: ಒಂದು ಕೋ. ರೂ ಗಳ ಮೌಲ್ಯದ ವ್ಯಾಜ್ಯಗಳು ಹಾಗೂ ನಾಗರಿಕ ಸೌಲಭ್ಯಗಳಾದ ನೀರು ಸರಬರಾಜು,ಅಂಚೆ, ವಿದ್ಯುತ್ ಬ್ಯಾಂಕಿಂಗ್,ಪ್ರಯಾಣಿಕರ ಸಾಗಾಣಿಕೆ,ಇತರೆಗೆ ಸಂಬಂಧಿಸಿದಂತೆ, ಕೋರ್ಟ್ ಫೀ ಇಲ್ಲದೆ ವ್ಯಾಜ್ಯಗಳಿಗೆ ಪರಿಹಾರ ಕಂಡು ಕೊಳ್ಳಬಹುದಾಗಿದ್ದು, ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ್ ಅವರು ಮಾತನಾಡಿ ಬಾಲ್ಯ ವಿವಾಹದಲ್ಲಿ ಜಿಲ್ಲೆ ರಾಜ್ಯದಲ್ಲಿಯೇ ಮೂರನೇ ಸ್ಥಾನದಲ್ಲಿರುವುದು ವಿಪರ್ಯಾಸ. ಹೆಣ್ಣು ಮಕ್ಕಳ ಜೀವನ ನರಕ ಮಾಡುವ ಬಾಲ್ಯ ವಿವಾಹವನ್ನು ತಡೆಯಲು ಎಲ್ಲರೂ ಎಚ್ಚರಗೊಂಡು ನಿಯಂತ್ರಣಕ್ಕೆ ಮುಂದಾಗುವಂತೆ ಕರೆ ನೀಡಿದರು.ನಗರಸಭೆ ಅಧ್ಯಕ್ಷ ಲಲಿತಾ ಅನಪೂರ ಅವರು ಮಾತನಾಡಿ, ಬಾಲ್ಯ ವಿವಾಹ ದಿಂದ ಹೆಣ್ಣು ಮಗುವಿನ ಜೀವನ ಹಾಳಾಗುವ ಜೊತೆಗೆ ರಕ್ತಹೀನತೆ, ವಿವಿಧ ಕಾಯಿಲೆಗಳಿಗೂ ಬಲಿಯಾಗ ಬೇಕಾಗುತ್ತದೆ. ಜಿಲ್ಲೆಯ ಸುರಪುರ ಮತ್ತು ಗುರುಮಠಕಲ್ ನಲ್ಲಿ ಬಾಲ್ಯ ವಿವಾಹ ಗಳು ಹೆಚ್ಚಾಗಿರುವದರಿಂದ ಗ್ರಾಮ ಸಭೆ, ಗ್ರಾಮ ಪಂಚಾಯತ್, ಎಸ್ಡಿಎಂಸಿ ಅಧ್ಯಕ್ಷರು, ಸದಸ್ಯರು, ಜನಪ್ರತಿನಿಧಿಗಳ ಮೂಲಕವು ಬಾಲ್ಯ ವಿವಾಹ ನಿಯಂತ್ರಣ ಜಾಗೃತಿ ಮೂಡಿಸಲು ಸಲಹೆ ನೀಡಿದರು.

ಮಕ್ಕಳ ರಕ್ಷಣಾ ಯೋಜನೆ ಯುನಿಸೆಫ್ ಸಂಯೋಜ-ಕರಾದ ಹರೀಶ್ ಜೋಗಿ ಬಾಲ್ಯ ವಿವಾಹ ನಿಷೇಧ ಕಾಯ್ದೆ -2006, ಬಾಲನ್ಯಾಯ ಕಾಯ್ದೆ, ಪೋಕ್ಸೋ ಕಾಯ್ದೆ ಕುರಿತು ವಿವರವಾದ ಮಾಹಿತಿ ನೀಡಿದರು. ಹೆಚ್ಚುವರಿ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಧರಣೇಶ್ ಮಾತನಾಡಿದರು.

ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವೆಂಕಟೇಶ್ ಚಟ್ನಳ್ಳಿ , ಮಕ್ಕಳ ರಕ್ಷಣಾ ಸಮಿತಿ ಅಧ್ಯಕ್ಷ ದಿನೇಶ್ ಕುಮಾರ್, ಉಪಸ್ಥಿತರಿದ್ದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ತಿಪ್ಪಣ್ಣ ಶಿರಸಗಿ ವಂದಿಸಿದರು.ಶ್ರೀ ರಾಜೇಂದ್ರ ಪ್ರತಿಜ್ಞಾವಿಧಿ ಬೋಧಿಸಿದರು. ದೇವಪ್ಪ ಪ್ರಾರ್ಥಿಸಿದರು. ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ನಿರ್ಮಲಾ ಸುರಪುರ ಅವಶ್ಯಕ ಮಾಹಿತಿ ನೀಡಿದರು.

## ಸೆ.15 ರಂದು ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.12-2025-26 ನೇ ಸಾಲಿನ ವಿಭಾಗ ಮಟ್ಟದ ದಸರಾ ಕ್ರೀಡಾ ಕೂಟವನ್ನು ಸೆ.15 ರಂದು ಬೆಳಿಗ್ಗೆ 11 ಗಂಟೆಗೆ ಬಳ್ಳಾರಿ ನಗರದ ಜಿಲ್ಲಾ ಕ್ರೀಡಾಂಗಣ ಮೈದಾನದಲ್ಲಿ ಆಯೋಜಿಸಲಾಗಿದೆ.

ಕಲಬುರಗಿ ವಿಭಾಗದ ಎಲ್ಲಾ ಜಿಲ್ಲೆಯ ಹಾಕಿ, ಬಾಕ್ಸಿಂಗ್ ಮತ್ತು ಕಬಡ್ಡಿ ಕ್ರೀಡೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಜಿಲ್ಲಾ ಕ್ರೀಡಾಂಗಣದಲ್ಲಿ ನೋಂದಾಯಿಸಿಕೊಂಡು ಗುರುತಿನ ಚೀಟಿಯೊಂದಿಗೆ ಹಾಜರಾಗಬೇಕು.

ಸೂಚನೆ:

ಪ್ರಸ್ತಕ ಸಾಲಿನಿಂದ ದಸರಾ ಕ್ರೀಡಾ ಕೂಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳನ್ನು,ತಾಲ್ಲೂಕು, ಜಿಲ್ಲೆ ಮತ್ತು ವಿಭಾಗ ಮಟ್ಟದವರಿಗೆ ಮೊಬೈಲ್ ಆಪ್, ವೆಬ್ ಪೋರ್ಟ್ಲ್ ನಲ್ಲಿ ನೋಂದಣಿ ಮಾಡಿಕೊಳ್ಳುವ ವ್ಯವಸ್ಥೆ ಕಲ್ಪಿಸಲಾಗಿದೆ. ವಿವಿಧ ಮಟ್ಟದ ದಸರಾ ಕ್ರೀಡಾ ಕೂಟದ ಸ್ಪರ್ಧೆಗಳಲ್ಲಿ ಭಾಗವಹಿಸಲು ಕರ್ನಾಟಕ ರಾಜ್ಯದಲ್ಲಿ ವಾಸಿಸುವ ಕ್ರೀಡಾಪಟುಗಳಿಗೆ ಮಾತ್ರ ಅರ್ಹರಿರುತ್ತಾರೆ.

ಕ್ರೀಡಾ ಕೂಟದಲ್ಲಿ ರಕ್ಷಣಾ ಪಡೆ, ಅರೆ ರಕ್ಷಣಾ ಪಡೆ, ಸೇರಿದ ಕ್ರೀಡಾಪಟುಗಳು ಭಾಗವಹಿಸಲು ಅರ್ಹರರಲ್ಲ. ಜಿಲ್ಲಾ ಮಟ್ಟದಲ್ಲಿ ಭಾಗವಹಿಸುವ ಕ್ರೀಡಾಪಟುಗಳಿಗೆ ಊಟದ ವ್ಯವಸ್ಥೆ ಮತ್ತು ಪ್ರಯಾಣ ಭತ್ಯೆಯನ್ನು ಸರ್ಕಾರಿ ಬಸ್ ದರಗಳನ್ವಯ ಕೆ2 ಮೂಲಕ ಕ್ರೀಡಾಪಟುಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಎಂ.ಜಾಕೀರ್-9036335986, ಮಹ್ಮದ್ ಮಸೂದ್-9886688858 ಮತ್ತು ಕಚೇರಿ ಸಿಬ್ಬಂದಿ ರತಿ-ಕಾಂತ್-8971238689 ಗೆ ಸಂಪರ್ಕಿಸಬಹುದು ಎಂದು ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿ ಪ್ರಕರಣ

## ನಡೆಯದಂತೆ ಸೂಕ್ತ ಕ್ರಮ ಕೈಗೊಳ್ಳಿ- ಡಾ. ಸುರೇಶ ಬಿ. ಇಟ್ನಾಳ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯದಲ್ಲಿ ಇತ್ತೀಚೆಗೆ ಬಾಲಗರ್ಭಿಣಿಪ್ರಕರಣಗಳುವರದಿಯಾಗಿದ್ದು, ಕೊಪ್ಪಳ ಜಿಲ್ಲೆಯಲ್ಲಿ ಯಾವುದೇ ರೀತಿಯ ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿ ಪ್ರಕರಣಗಳು ನಡೆಯದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು. ಅವರು ಬುಧವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಬಾಲ್ಯ ವಿವಾಹ ತಡೆ ಮತ್ತು ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿ ಪ್ರಕರಣಗಳಿಗೆ ಸಂಬಂಧಿಸಿದಂತೆ ಮಾನ್ಯ ಮುಖ್ಯ ಮಂತ್ರಿಗಳು, ಇತ್ತೀಚೆಗೆ ಜಿಲ್ಲಾಧಿಕಾರಿಗಳು ಮತ್ತು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯನ್ನು ತೆಗೆದುಕೊಂಡು, ಸೂಕ್ತ ನಿರ್ದೇಶನಗಳನ್ನು ನೀಡಿದ್ದಾರೆ ಹಾಗೂ ಬಾಲ್ಯ ವಿವಾಹ ಮತ್ತು ಬಾಲಗರ್ಭಿಣಿ ಪ್ರಕರಣಗಳನ್ನು ತಡೆಗಟ್ಟಲು ಜನ ಸಮುದಾಯದಲ್ಲಿ ವ್ಯಾಪಕ ಪ್ರಚಾರ ಮತ್ತು ಜಾಗೃತಿ ಮೂಡಿಸಲು ಸೂಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಕೊಪ್ಪಳ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಾವಲು ಸಮಿತಿ ಸಭೆಗಳನ್ನು ಕೈಗೊಳ್ಳಬೇಕು. ಈ ಸಭೆಗಳಲ್ಲಿ ಎಲ್ಲಾ ಪ್ರೌಢ ಶಾಲೆ, ಕಾಲೇಜುಗಳು, ಮಹಿಳಾ ಸ್ವ ಸಹಾಯ ಸಂಘ ಸಂಸ್ಥೆಗಳು ಮತ್ತು ಆಯಾ ಊರಿನ ಸಾರ್ವಜನಿಕರನ್ನು ಸೇರಿಸಿ, ಅಲ್ಲಿ ಬಾಲ್ಯ ವಿವಾಹ ಕಾನೂನು ಬಾಹಿರ ಎಂಬುದರ ಕುರಿತು ಚರ್ಚೆ ಮಾಡಬೇಕು. ಎಲ್ಲರೂ ಒಳಗೊಂಡಂತೆ ಜಾಗೃತಿ ಜಾಥದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಿ ಎಂದರು. ಸಮಗ್ರ ಶಿಕ್ಷಣ ಅಭಿಯಾನದಡಿ ಪ್ರತಿ ಪ್ರೌಢಶಾಲೆಯಲ್ಲಿ ಬಾಲ್ಯ ವಿವಾಹ ಬಗ್ಗೆ ಜಾಗೃತಿ ಮೂಡಿಸಲು ಅನುದಾನ ಇದೆ. ಅದನ್ನ ಬಳಸಿಕೊಂಡು ಕಾನೂನು ಸೇವಾ ಪ್ರಾಧಿಕಾರದ ಸಹಯೋದಲ್ಲಿ ಬಾಲ್ಯ ವಿವಾಹ ತಡೆಗೆ ಜಾಗೃತಿ ಮೂಡಿಸುವಂತೆ ಶಿಕ್ಷಣ ಇಲಾಖೆಯಿಂದ ಕ್ರಮ ಕೈಗೊಳ್ಳಬೇಕು. ತಾಲ್ಲೂಕು ಹಂತದಲ್ಲಿ ತಹಶಿಲ್ದಾರರ ನೇತೃತ್ವದಲ್ಲಿರುವ ಬಾಲ್ಯ ವಿವಾಹ ತಡೆ ಸಮಿತಿಗಳು ತಮ್ಮ ವ್ಯಾಪ್ತಿಯಲ್ಲಿ ಜಾಗೃತಿ ಜಾಥ ಮತ್ತು ಇತರೆ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಿಲ್ಲೆಯಾದ್ಯಂತ ಯಾವುದೇ ರೀತಿಯ ಬಾಲ್ಯವಿವಾಹಗಳು ನಡೆಯಂತೆ ನೋಡಿಕೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹಿಳಾ ಮತ್ತು ಮಕ್ಕಳ ಇಲಾಖೆ ಹಾಗೂ ಶಿಕ್ಷಣ ಇಲಾಖೆಯವರು ಸಂಜೀವಿನಿ ಮತ್ತು ಎನ್.ಆರ್.ಎಲ್.ಎಮ್. ಮಹಿಳಾ ಸ್ವಸಹಾಯ ಸಂಘಗಳು ಅಥವಾ ಇತರೆ ಸಂಘಗಳನ್ನು ಸೇರಿಸಿಕೊಂಡು ಪ್ರೌಢ ಶಿಕ್ಷಣ ಮತ್ತು ಪಿಯು ಶಿಕ್ಷಣ ಹಂತದಿಂದ ಹೊರ ಉಳಿದ ಹೆಣ್ಣು ಮಕ್ಕಳನ್ನು ಪತ್ತೆ ಮಾಡಿ, ಅವರಲ್ಲಿ ಬಾಲ್ಯ ವಿವಾಹ ಏನಾದರೂ ಜರುಗಿದೆಯೇ ಅಥವಾ ಬಾಲ್ಯ ವಿವಾಹ ಮಾಡಲು ಪ್ರಯತ್ನ ಮಾಡಲಾಗುತ್ತಿದೆಯೇ ಎಂಬುವುದನ್ನು ಪರಿಶೀಲನೆ ಮಾಡಬೇಕು. ಯಾವುದೇ ರೀತಿಯ ಬಾಲ್ಯ ವಿವಾಹ ಅಥವಾ ಬಾಲಗರ್ಭಿಣಿ ಪ್ರಕರಣಗಳು ಕಂಡುಬಂದಲ್ಲಿ ತಕ್ಷಣವೇ ಸಂಬಂಧಪಟ್ಟವರ ವಿರುದ್ಧ ಸೂಕ್ತ ಕ್ರಮ ವಹಿಸಬೇಕು. ಆಡಳಿತ ವ್ಯವಸ್ಥೆ ಜಾಗರುಕವಾಗಿದೆ ಎಂದಾಗ ಮಾತ್ರ ಜನ ಬಾಲ್ಯ ವಿವಾಹ ಮಾಡುವುದನ್ನು ನಿಲ್ಲಿಸಬಹುದು. ಜಿಲ್ಲೆಯ ಎಲ್ಲಾ ದೇವಸ್ಥಾನ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಬಾಲ್ಯ ವಿವಾಹ ಕಾನೂನು ಬಾಹಿರ ಅಪರಾಧ ಎಂದು ಗೋಡೆ ಬರಹವನ್ನು ಬರೆಸುವಂತೆ ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಂಸ್ಥೆಗಳು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ್ ಅವರು ಮಾತನಾಡಿ, ಬಾಲ್ಯವಿವಾಹವು ಶಿಕ್ಷಾರ್ಹ ಅಪರಾದವಾಗಿದ್ದು, ಪೊಲೀಸ್ ಅಧಿಕಾರಿಯು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ನಡೆದ ಬಾಲ್ಯವಿವಾಹದ ಮಾಹಿತಿಯನ್ನು ಗಮನಿಸಿ ಸ್ವಯಂ ಪ್ರೇರಿತ ದೂರು ದಾಖಲಿಸಿಕೊಂಡು ಬಾಲ್ಯವಿವಾಹ ಅಧಿನಿಯಮದಡಿ ತಾನಾಗಿಯೇ ಕ್ರಮ ಕೈಗೊಳ್ಳಬೇಕು. ಇದರ ಜೊತೆಗೆ ಬಾಲ್ಯವಿವಾಹ ನಿಷೇಧ ಅಧಿಕಾರಿಗಳು ಬಾಲ್ಯವಿವಾಹ ನಿಷೇಧ ಕಾಯ್ದೆಯನ್ನು ಪರಿಣಾಮ ಕಾರಿಯಾಗಿ ಅನುಷ್ಠಾನ ಮಾಡಬೇಕು. ಶಾಲೆಗಳಲ್ಲಿ ಹುಡುಗ ಹುಡುಗಿಗೆ ಗಿಫ್ಟ್ ಕೊಡುತ್ತಾನೆ. ಅಲ್ಲಿಂದ ಕೆಟ್ಟ ಅವ್ಯಸಗಳು ರೂಡಿಯಾಗುತ್ತವೆ. ಅಂತಹ ಚಟುವಟಿಕೆಗಳನ್ನು ಅಲ್ಲೆ ನಿಯಂತ್ರಣ ಮಾಡುವುದು ಸೂಕ್ತ. ಈ ಬಗ್ಗೆ ಹಾಸ್ಟೆಲ್ ವಾರ್ಡನ್‌ಗಳು ಮತ್ತು ಶಾಲಾ ಶಿಕ್ಷಕರಿಗೆ ಕ್ರಮ ಕೈಗೊಳ್ಳಲು ತಿಳಿಸಬೇಕು ಎಂದು ಸೂಚನೆ ನೀಡಿದರು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಮಾತನಾಡಿ, ಬಾಲ್ಯ ವಿವಾಹ ನಡೆಯಲಿಕ್ಕೆ ಮುಖ್ಯ ಪಾತ್ರ ನೀಡುವುದು ಪ್ರೌಢಶಾಲಾ ಹಂತದಲ್ಲಿಯೇ ಆಗಿದ್ದು, ಎಸ್.ಎಸ್.ಎಲ್.ಸಿ.ಯಲ್ಲಿ ಪಾಸ್ ಆದರೆ ಮುಂದಿನ ಶಿಕ್ಷಣ ಕೊಡಿಸಲು ಪಾಲಕರು ಮುಂದಾಗುತ್ತಾರೆ. ಒಂದು ವೇಳೆ ಆ ಹೆಣ್ಣು ಮಗಳು ಫೇಲ್ ಆದರೆ ಪಾಲಕರು ವಿವಾಹ ಮಾಡಲಿಕ್ಕೆ ಮುಂದಾಗುತ್ತಾರೆ. ಈ ಹಿನ್ನೆಲೆಯಲ್ಲಿ ಪ್ರೌಢಶಾಲಾ ಶಿಕ್ಷಣ ಹಂತದಲ್ಲಿ ಎಲ್ಲಾ ಮಕ್ಕಳಿಗೆ ವಿಶೇಷವಾಗಿ ಹೆಣ್ಣುಮಕ್ಕಳಿಗೆ ಉತ್ತಮ ರೀತಿಯಲ್ಲಿ ಶಿಕ್ಷಣ ನೀಡಿ, ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಮಕ್ಕಳು ಫೇಲ್ ಆಗದಂತೆ ನೋಡಿಕೊಳ್ಳುವ ಮೂಲಕ ಶಿಕ್ಷಣ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಂಡು ಬಾಲ್ಯ ವಿವಾಹಗಳನ್ನು ತಡೆಗಟ್ಟಬೇಕು. ಇದರ ಜೊತೆಗೆ ಶಾಲೆಯಿಂದ ಹೊರಗೆ ಉಳಿದ ಮಕ್ಕಳನ್ನು ಪತ್ತೆ ಮಾಡಿ, ಅವರಿಗೆ ಮರಳಿ ಶಾಲೆಗೆ ಕರೆತರಬೇಕು. ಪ್ರಮುಖವಾಗಿ ಹೆಣ್ಣು ಮಕ್ಕಳು ಶಿಕ್ಷಣದಿಂದ ಹೊರಗುಳಿಯದಂತೆ ನೋಡಿಕೊಳ್ಳಿ. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಿಂದ ಜಿಲ್ಲಾ ಹಂತದವರೆಗಿನ ಎಲ್ಲಾ ಇಲಾಖೆಗಳು ಮತ್ತು ಕಛೇರಿಗಳು ಪತ್ರ ವ್ಯವಹಾರ ಮಾಡುವಾಗ ಕೆಳಗೆ ಬಾಲ್ಯ ವಿವಾಹ ನಿಷೇಧಿಸಲಾಗಿದೆ ಎಂದು ಬರೆಯುವುದನ್ನ ಕಡ್ಡಾಯ ಮಾಡಿಕೊಳ್ಳಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶೇಖರಗೌಡ ಜಿ. ರಾಮತ್ನಾಳ್ ಅವರು ಮಾತನಾಡಿ, ಇನ್ನು ಕೆಲವು ಗ್ರಾಮದಲ್ಲಿ ಕಾವಲು ಸಮಿತಿಗಳು ರಚನೆ ಯಾಗಿಲ್ಲ. ಬಹಳ ತುರ್ತಾಗಿ ಈ ಸಮಿತಿಗಳನ್ನು ರಚಿಸಬೇಕು. ಬಾಲ್ಯ ವಿವಾಹ ತಡೆ ಬಗ್ಗೆ ಜಾಗೃತಿ ಮೂಡಿಸಲು ಇದೆ ಸೆಪ್ಟೆಂಬರ್ 12ಕ್ಕೆ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿನ ಕಾವಲು ಸಮಿತಿಗಳ ಸಭೆಯನ್ನು ಹಮ್ಮಿಕೊಂಡು, ಆಯಾ ಗ್ರಾಮಗಳ ಹೆಚ್ಚಿನ ಸಂಖ್ಯೆಯ ಜನರನ್ನು ಸೇರಿಸಬೇಕು. ಜಿಲ್ಲಾಧಿಕಾರಿಗಳು ಹೇಳಿದಂತೆ ಜಿಲ್ಲೆಯಾದ್ಯಂತ ಸೆ. 22ಕ್ಕೆ ಜಾಗೃತಿ ಜಾಥವನ್ನು ಮಾಡುವ ಮೂಲಕ ಬಾಲ್ಯ ವಿವಾಹಗಳನ್ನು ನಿಯಂತ್ರಣ ಮಾಡಲು ಎಲ್ಲಾರು ಒಟ್ಟಾಗಿ ಸೇರಿ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತ ಕುಮಾರ್, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ಜಿ.ಪಂ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಂಜುನಾಥ ಗುಂಡೂರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪಿ.ವೈ ಶೆಟ್ಟೆಪ್ಪನವರ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಟಿ.ಲಿಂಗರಾಜು, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಗದೀಶ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಸೋಮಶೇಖರಗೌಡ ಪಾಟೀಲ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಹಂತಸ್ವಾಮಿ ಪೂಜಾರ್, ಯುನಿಸೆಫ್ ಮಕ್ಕಳ ರಕ್ಷಣ ಯೋಜನೆಯ ಸಂಯೋಜಕ ಹರೀಶ್ ಜ್ಯೋಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ತಹಶೀಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ವಿವಿಧ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ಅಗತ್ಯ ಸಿದ್ಧತೆ ಕೈಗೊಳ್ಳುವಂತೆ ಎಡಿಸಿ ಮಹಮ್ಮದ್ ಝುಬೇರ್ ನಿರ್ದೇಶನ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.12-ಬೆಂಗಳೂರಿನಲ್ಲಿ ನಡೆಯುವ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಬಳ್ಳಾರಿ ಜಿಲ್ಲೆಯಿಂದ 10 ಅನುಭವಿ ಬೈಕ್ ರೈಡರ್ ಗಳು ಸೆ.14 ರಂದು ಬೆಳಿಗ್ಗೆ 10.30 ಕ್ಕೆ ಬಳ್ಳಾರಿಯಿಂದ ರಾಷ್ಟ್ರಧ್ವಜದೊಂದಿಗೆ ಬೆಂಗಳೂರಿಗೆ ತೆರಳಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯ ಕೆಸ್ವಾನ್ ವಿಡೀಯೋ ಸಭಾಂಗಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಜಿಲ್ಲೆಯಲ್ಲಿ ಹಮ್ಮಿಕೊಳ್ಳಲಾಗುವ ವಿವಿಧ ಕಾರ್ಯಕ್ರಮಗಳನ್ನು ಇಲಾಖೆಗಳ ಸಹಯೋಗದೊಂದಿಗೆ ಯಶಸ್ವಿಗೊಳಿಸಲು ಅಧಿಕಾರಿಗಳು ಕ್ರಮವಹಿಸಬೇಕು ಎಂದು ಹೇಳಿದರು. ಇದೇ ಸೆ.15 ರಂದು ನಡೆಯಲಿರುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯ ಅಂಗವಾಗಿ "ನನ್ನ ಮತ ನನ್ನ ಹಕ್ಕು" ಎಂಬ ಧ್ಯೇಯ ವಾಕ್ಯದಡಿ ಜಿಲ್ಲಾ ಮಟ್ಟದಲ್ಲಿ ಬೈಕ್ ರ್‍ಯಾಲಿ ಹಾಗೂ ಸೈಕಲ್ ರ್‍ಯಾಲಿಗಳನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈ ಎಲ್ಲಾ ಕಾರ್ಯಕ್ರಮ ಯಶಸ್ಸಿಗೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಬೇಕು ಎಂದರು.

ಬೈಕ್ ರ್‍ಯಾಲಿಗೆ ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಬಳ್ಳಾರಿ ಜಿಲ್ಲೆಯ ಎಲ್ಲಾ ಕ್ಷೇತ್ರಗಳ ಶಾಸಕರು ಚಾಲನೆ ನೀಡಲಿದ್ದಾರೆ. ಸೆ.15 ರಂದು ಬಳ್ಳಾರಿ ಜಿಲ್ಲಾ ಕೇಂದ್ರದಲ್ಲಿ ಏರ್ಪಡಿಸಿರುವ ಸೈಕಲ್ ರ್‍ಯಾಲಿಗೆ ಬೆಳಿಗ್ಗೆ 08 ಗಂಟೆಗೆ ನೂತನ ಜಿಲ್ಲಾಡಳಿತ ಭವನದಿಂದ ಗಡಿಗಿ ಚೆನ್ನಪ್ಪ ವೃತ್ತದಿಂದ ಕನಕ ದುರ್ಗಮ್ಮ ದೇವಸ್ಥಾನ ಮಾರ್ಗವಾಗಿ ಹೆಚ್.ಆರ್.ಗವಿಯಪ್ಪ ವೃತ್ತದಿಂದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಕಾರ್ಯಕ್ರಮಕ್ಕೆ ಮುಕ್ತಾಯಗೊಳ್ಳಲಿದೆ ಎಂದರು. ರ್‍ಯಾಲಿ ಮಾರ್ಗದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ವೈದ್ಯಕೀಯ ವ್ಯವಸ್ಥೆ, ಲಘು-ಉಪಹಾರ ವ್ಯವಸ್ಥೆ ಕೈಗೊಳ್ಳಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ವಸತಿ ಶಾಲೆಗಳ ವಿದ್ಯಾರ್ಥಿಗಳು ಮತ್ತು ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸದಸ್ಯರು ಮತ್ತು ಸಾರ್ವಜನಿಕರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ, ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ರಾಜು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಪ್ರಾದೇಶಿಕ ಸಾರಿಗೆ ಅಧಿಕಾರಿ ಶ್ರೀನಿವಾಸ ಗಿರಿ ಸೇರಿದಂತೆ ಡಿಡಿಪಿಐ, ಡಿಡಿಪಿಯು ಅಧಿಕಾರಿಗಳು ಇದ್ದರು.

## ಬಳ್ಳಾರಿ: ಬಾಡಿಗೆ ಕಟ್ಟಡ ಬೇಕಾಗಿದೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.12-ಪರಿಶಿಷ್ಟವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯ ಪ್ರಸಕ್ತ ಸಾಲಿನ ನಗರದ ಸರ್ಕಾರಿ ಮೆಟ್ರಿಕ್ ನಂತರದ ಬಾಲಕೀಯರ ವಿದ್ಯಾರ್ಥಿ ನಿಯಯದಲ್ಲಿ ಅಧಿಕ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿದ್ದು, ವಿದ್ಯಾರ್ಥಿನಿಲಯ ನಿರ್ವಹಣೆಗಾಗಿ 100 ವಿದ್ಯಾರ್ಥಿಗಳ ವಾಸಕ್ಕೆ ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಚಿಸುವ ಕಟ್ಟಡಗಳ ಮಾಲೀಕರು ಸಂಪರ್ಕಿಸಬಹುದು.

ಆಸಕ್ತ ಕಟ್ಟಡ ಮಾಲೀಕರು ಸೆಪ್ಟೆಂಬರ್ 11 ರೊಳಗೆ ಅಗತ್ಯ ದಾಖಲೆಗಳೊಂದಿಗೆ ನಗರದ ನಲ್ಲಚೆರುವು ಪ್ರದೇಶದ ವಾಲ್ಮೀಕಿ ಭವನದ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಮೊ.9141004607 ಗೆ ಸಂಪರ್ಕಿಸಬಹುದು ಎಂದು ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ಸೆ.17 ರಂದು ವಿಶ್ವಕರ್ಮ ಜಯಂತಿ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.12-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಸೆ.17 ರಂದು ಮಧ್ಯಾಹ್ನ 12 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿದಲ್ಲಿ ಶ್ರೀ ವಿಶ್ವಕರ್ಮ ಜಯಂತಿ ಕಾರ್ಯಕ್ರಮ ಆಯೋಜಿಸಲಾಗಿದೆ. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು. ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಮ್, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಬಳ್ಳಾರಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಬಳ್ಳಾರಿ ಜಿಲ್ಲಾ ವಿಶ್ವಕರ್ಮ ವಿಕಾಸ್ ವೇದಿಕೆ ಅಧ್ಯಕ್ಷ ಚಂದ್ರಕಾಂತ್ ಸ.ಸೋನಾರ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಕೂಡ್ಲಿಗಿ ತಾಲ್ಲೂಕಿನ ಖಾನಹೊಸಹಳ್ಳಿಯ ನಿವೃತ್ತ ಪ್ರಾಂಶುಪಾಲರು ಹಾಗೂ ಸಾಹಿತಿ ಡಾ.ವೃಷಭೇಂದ್ರಚಾರ್ಯ ಅರ್ಕಸಾಲಿ ಅವರು ಜಯಂತಿ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಸಂಡೂರು ತಾಲ್ಲೂಕಿನ ತೋರಣಗಲ್ ನ ಕೆ.ಕೊಟ್ರೇಶ್ ತಂಡದಿಂದ ಭಕ್ತಿಸಂಗೀತ ಇರಲಿದೆ. **ಮೆರವಣಿಗೆ:** ಜಯಂತಿ ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಕಾಳಿಕಾ ಕಮಠೇಶ್ವರ ದೇವಸ್ಥಾನದಿಂದ ಮೆರವಣಿಗೆ ನಡೆಯಲಿದ್ದು, ಮೆರವಣಿಗೆಯು ಬೆಂಗಳೂರು ರಸ್ತೆ-ಹಳೇ ಬ್ರೂಸ್‌ಪೇಟೆ ಪೊಲೀಸ್ ಠಾಣೆ- ತೇರು ಬೀದಿ-ಹೆಚ್‌ಆರ್ ಗವಿಯಪ್ಪ ವೃತ್ತ-ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದವರೆಗೆ ಣಟಿಜಜಜಿಟಿಜಜ ನಡೆಯಲಿದೆ. ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಮಹಾನಗರಪಾಲಿಕೆ ಆಯುಕ್ತ ಮಂಜುನಾಥ್.ಪಿ.ಎಸ್ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

ಬಳ್ಳಾರಿ: 'ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ' ಅಂಗವಾಗಿ ಜಾಗೃತಿ ಜಾಥ

## ಮಾನಸಿಕ ಉದ್ವೇಗಳಿಗೆ ಒಳಗಾಗದಿರಿ: ನ್ಯಾ.ರಾಜೇಶ್ ಎನ್.ಹೊಸಮನೆ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.12-ವ್ಯಕ್ತಿಯು ಜೀವನದಲ್ಲಿ ಬರುವ ಮಾನಸಿಕ, ಆರ್ಥಿಕ, ಪ್ರೀತಿಯ ಆಲೋಚನೆಗಳಿಂದ ಒತ್ತಡ ಹಾಗೂ ಉದ್ವೇಗಗಳಿಂದ ಮಾನಸಿಕ ಖಿನ್ನತೆಗೆ ಒಳಗಾಗಬಾರದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಜಿಲ್ಲಾ ಮಾನಸಿಕ ಆರೋಗ್ಯ ವಿಭಾಗ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಅಂಗವಾಗಿ ನಗರದ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಶುಕ್ರವಾರ ಏರ್ಪಡಿಸಿದ್ದ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆತ್ಮಹತ್ಯೆಯನ್ನು ತಡೆಗಟ್ಟಲು 2003 ರಿಂದ ವಿಶ್ವ ಆತ್ಮಹತ್ಯೆ ದಿನವನ್ನು ಆಚರಿಸಲು ಪ್ರಾರಂಭಿಸಲಾಯಿತು. ಭಾರತದಲ್ಲಿ ವರ್ಷಕ್ಕೆ 1ಲಕ್ಷ 73 ಸಾವಿರ ಜನರು ಸಾವಿಗೀಡಾಗುತ್ತಿದ್ದು, ಪ್ರತಿ 11 ಸೆಕೆಂಡ್‌ಗಳಿಗೆ ಒಂದು ಸಾವು ಸಂಭವಿಸುತ್ತಿದೆ. ಇದಕ್ಕೆ ವ್ಯಕ್ತಿಯಲ್ಲಿ ಬರುವ ತೀವ್ರತರವಾದ ಆಲೋಚನೆಗಳು ಪ್ರಮುಖ ಕಾರಣವಾಗಿದೆ. ಅಂತವರನ್ನು ಗುರ್ತಿಸಿ ಆಪ್ತ ಸಮಾಲೋಚನೆ ಮೂಲಕ ಚಿಕಿತ್ಸೆ ನೀಡಿದರೆ ಗುಣಮುಖರಾಗುತ್ತಾರೆ ಎಂದು ತಿಳಿಸಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಮನೆಯಲ್ಲಿ ಕುಟುಂಬ ಸದಸ್ಯರ ಜೊತೆಗೂಡಿ ಸಮಸ್ಯೆಗಳ ಕುರಿತು ಮಾತನಾಡಿ ಪರಿಹರಿಸಿಕೊಳ್ಳಬೇಕು. ಶಾಲಾ-ಕಾಲೇಜುಗಳಲ್ಲಿ ಆತ್ಮಹತ್ಯೆ ಬಗ್ಗೆ ಶಿಕ್ಷಕರು ವಿದ್ಯಾರ್ಥಿಗಳಿಗೆ ಅರಿವು ಮೂಡಿಸಬೇಕು ಎಂದು ಹೇಳಿದರು.


ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ ಅವರು ಮಾತನಾಡಿ, ವಯಸ್ಕರರಲ್ಲಿ ಆತ್ಮಹತ್ಯೆ ಪ್ರಕರಣಗಳು ಹೆಚ್ಚು ಕಂಡುಬರುತ್ತಿವೆ. ಕಷ್ಟಗಳು ಬಂದರೆ ಅವುಗಳನ್ನು ಕುಟುಂಬ ಸದಸ್ಯರಿಗೆ ತಿಳಿಸಬೇಕು. ಪ್ರಸ್ತುತ ಮೊಬೈಲ್ ಯುಗದಲ್ಲಿ ಯಾರು ತಮ್ಮ ಸಮಸ್ಯೆಗಳನ್ನು ಹಂಚಿಕೊಳ್ಳುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದ ಅವರು, ತಪ್ಪು ಮಾಡುವುದು ಸಹಜ, ತಿದ್ದಿಕೊಂಡು ಒಂದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು. ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಅವರು ಮಾತನಾಡಿ, ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮನೋ ಚೈತನ್ಯ ಕಾರ್ಯಕ್ರಮ ಹಮ್ಮಿಕೊಂಡು ಮಾನಸಿಕ ರೋಗಿಗಳಿಗೆ, ಸಣ್ಣ ಪುಟ್ಟ ಮಾನಸಿಕ ತೊಂದರೆ ಇರುವ ಮನೋ ರೋಗಿಗಳಿಗೆ ಅಪ್ತ ಸಮಾಲೋಚನೆ ಹಾಗೂ ಉಚಿತ ಚಿಕಿತ್ಸೆಯನ್ನು ನೀಡಲಾಗುತ್ತದೆ. ಪ್ರತಿಯೊಬ್ಬರು ಇದರ ಸದುಪಯೊಗ ಪಡೆದುಕೊಳ್ಳಬೇಕು ಎಂದರು.

ಮಾನಸಿಕ ಸಮಸ್ಯೆಗಳಿಗೆ ಒಳಗಾದವರು ಅದರಲ್ಲಿ ಮುಖ್ಯವಾಗಿ ವ್ಯಥೆಗೆ ಒಳಪಟ್ಟವರು, ಮಾನಸಿಕ ಒತ್ತಡ, ಕೌಟುಂಬಿಕ ಸಮಸ್ಯೆ, ಆತ್ಮಹತ್ಯೆ ಅಲೋಚನೆ, ಉದ್ವೇಗ, ನಿರುದ್ಯೋಗ, ಪ್ರೀತಿ, ಮಾಧಕ ವ್ಯಸನಕ್ಕೆ ಒಳಗಾದವರು, ಜ್ಞಾಪಕ ಶಕ್ತಿ ತೊಂದರೆಯುಳ್ಳವರು, ಆರ್ಥಿಕ ಸಮಸ್ಯೆಗಳಿಂದ ಒತ್ತಡಕ್ಕೊಳಗಾದವರು ಮಾನಸಿಕ ಖಿನ್ನತೆಗೆ ಒಳಗೊಳ್ಳಬಾರದು ಎಂದು ಕಿವಿಮಾತು ಹೇಳಿದರು.

ಜಿಲ್ಲಾ ಮನೋರೋಗತಜ್ಞ ಡಾ.ನಂದ ಕಿಶೋರ್‌ರೆಡ್ಡಿ ಅವರು ಮಾತನಾಡಿ, ವ್ಯಕ್ತಿಯಲ್ಲಿ ಬರುವ ತೀವ್ರ ತರವಾದ ಕೋಪ, ಉದ್ವೇಗಗಳಿಂದ, ಒತ್ತಡ, ಆಲೋಚನೆಗಳಿಂದ ಅದರಲ್ಲೂ ಸಾಮಾನ್ಯವಾಗಿ 15-30 ವಯಸ್ಸಿನ ವ್ಯಕ್ತಿಗಳಲ್ಲಿ ಆತ್ಮಹತ್ಯೆ ಹೆಚ್ಚು ಕಂಡುಬರುತ್ತಿದ್ದು, ಜೀವನ ಶೈಲಿಯಲ್ಲಿ ಬದಲಾವಣೆ ಆಗಬೇಕು. ಮಾನಸಿಕ ಆರೋಗ್ಯ ಸಮಸ್ಯೆಗಳಿಗೆ (ಟೆಲಿ ಮಾನಸ್) ಎಂಬ ಉಚಿತ ಸಹಾಯವಾಣಿ 14416 ಸಂಖ್ಯೆಗೆ ಗೆ ಕರೆ ಮಾಡಿ ಸೂಕ್ತ ಮಾರ್ಗದರ್ಶನ ಹಾಗೂ ಆಪ್ತ ಸಮಾಲೋಚನೆಯನ್ನು ಪಡೆದು ಮಾನಸಿಕ ಸಮಸ್ಯೆಗಳಿಂದ ಮುಕ್ತಿ ಹೊಂದಬಹುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಂ, ಜಿಲ್ಲಾ ಆಸ್ಪತ್ರೆ ಸಿಬ್ಬಂದಿ, ಜಿಲ್ಲಾ ಪೊಲೀಸ್ ಸಿಬ್ಬಂದಿ ಸೇರಿದಂತೆ ಆಶಾ ಕಾರ್ಯಕರ್ತರು, ಇತರರು ಭಾಗವಹಿಸಿದ್ದರು. ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿದ್ದ ಜಾಗೃತಿ ಜಾಥಾವು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣದಿಂದ ಆರಂಭವಾಗಿ ನೂತನ ಜಿಲ್ಲಾಡಳಿತ ಆವರಣಕ್ಕೆ ತಲುಪಿ ಪುನಃ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಆವರಣಕ್ಕೆ ತಲುಪಿ ಮುಕ್ತಾಯಗೊಂಡಿತು.

ತರಬೇತಿ ಕಾರ್ಯಕ್ರಮದಲ್ಲಿ ಜಿಪಂ ಸಿಇಒ ಮಹಮ್ಮದ್ ಹ್ಯಾರಿಸ್ ಸುಮೈರ್ ನಿರ್ದೇಶನ

## ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆ ಅಚ್ಚುಕಟ್ಟಾಗಿ ನಡೆಯಲಿ




ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಸೆ.12-ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಜಿಲ್ಲೆಯಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗ್ಗೆ ನಡೆಸುವ ಸಮೀಕ್ಷಾ ಕಾರ್ಯವು ಅಚ್ಚುಕಟ್ಟಾಗಿ ನಡೆಯಲಿ ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್ ಅವರು ಆಶಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಕೈಗೊಳ್ಳಲಾಗುತ್ತಿರುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕುರಿತು ನಗರದ ಜಿಲ್ಲಾ ಪಂಚಾಯತ್ ನಜೀರ್ ಸಾಬ್ ಸಭಾಂಗಣದಲ್ಲಿ ಮಾಸ್ಟರ್ ಟ್ರೇನರ್ ಗಳಿಗೆ ಶುಕ್ರವಾರ ಏರ್ಪಡಿಸಿದ್ದ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ರಾಜ್ಯದಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಬೆಳವಣಿಗೆಗೆ ಸಮೀಕ್ಷೆಯು ಅಗತ್ಯವಾಗಿದೆ ಎಂದು ಹೇಳಿದ್ದು, ಇದೇ ಸೆ.22ರಿಂದ ಆರಂಭವಾಗಿ ಅಕ್ಟೋಬರ್ 7ರೊಳಗಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನಡೆಯಲಿದೆ. ಹಾಗಾಗಿ ರಾಜ್ಯ ಹೊರಡಿಸುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಮೂಲಕ ಜಿಲ್ಲೆಯಲ್ಲಿ ಸಹ ಸಮೀಕ್ಷೆಯನ್ನು ಅಚ್ಚುಕಟ್ಟಾಗಿ ನಡೆಸಬೇಕು ಎಂದು ತಿಳಿಸಿದರು.

ದೇಶದಲ್ಲಿ ರಾಜ್ಯದಲ್ಲಿಯೇ ಪ್ರಥಮ ಬಾರಿಗೆ ಈ ಸಮೀಕ್ಷಾ ಕಾರ್ಯ ಹಮ್ಮಿಕೊಂಡಿದೆ. ಇದು ಎಲ್ಲಾ ಆಯಾಮಗಳಲ್ಲಿ ಉಪಯೋಗವಾಗಲಿದೆ. ಇದು ಜಾತಿ ಸಮೀಕ್ಷೆಯಲ್ಲ; ಬದಲಾಗಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಾಗಿದೆ. ಈ ಕುರಿತು ಜನರಿಗೆ ಮನವರಿಕೆ ಮಾಡಿಕೊಡಬೇಕು. 65 ಪ್ರಶ್ನೆ ಆಪ್ ಮೂಲಕ ಸಮೀಕ್ಷೆ ಕಾರ್ಯವು ನಡೆಯಲಿದ್ದು, ಸಮೀಕ್ಷೆ ಸಂದರ್ಭದಲ್ಲಿ ಇದರ ಮಾಹಿತಿ ಹೊರತಾಗಿ ಬೇರೆ ಯಾವುದೇ ಮಾಹಿತಿ ಕೇಳಬಾರದು. ಇದಕ್ಕೆ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದರು. ತರಬೇತಿ ಪಡೆದ ಮಾಸ್ಟರ್ ಟ್ರೇನರ್‌ಗಳು ತಮ್ಮ ಕೆಳಹಂತದ ಗಣತಿದಾರರು ಮತ್ತು ಮೇಲ್ವಿಚಾರಕರಿಗೆ ಸರಿಯಾಗಿ ಮಾರ್ಗದರ್ಶನ ಮಾಡಬೇಕು. ವಾಟ್ಸ್‌ಆಪ್ ಗುಂಪು ರಚಿಸಬೇಕು. ತಾಂತ್ರಿಕ ದೋಷ ಹಾಗೂ ಇತರೆ ಗೊಂದಲಗಳಿದ್ದರೆ ಹಿರಿಯ ಅಧಿಕಾರಿಗಳಿಂದ ಕೇಳಿ ತಿಳಿದುಕೊಳ್ಳಬೇಕು. ಯಾವುದೇ ರೀತಿಯ ವ್ಯತ್ಯಾಸವಾಗದಂತೆ ಸಮೀಕ್ಷೆ ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಜಲಾಲಪ್ಪ ಅವರು ಮಾತನಾಡಿ, ರಾಜ್ಯದಲ್ಲಿ ಪ್ರತಿ 10 ವರ್ಷಕ್ಕೊಮ್ಮೆ ಈ ಸಮೀಕ್ಷಾ ಕಾರ್ಯ ಕೈಗೊಳ್ಳಲಾಗುತ್ತದೆ. 2024ನೇ ಸಾಲಿನಲ್ಲಿ ಜಿಲ್ಲಾ ಸಾಂಖ್ಯಿಕ ಇಲಾಖೆಯ ಪ್ರಕಾರ ಅಂದಾಜು 4,04,000 ಕುಟುಂಬಗಳಿವೆ. ಜಿಲ್ಲೆಯಲ್ಲಿ ಸಮೀಕ್ಷಾ ಕಾರ್ಯಕ್ಕೆ 2963 ಗಣತಿದಾರರನ್ನು ನೇಮಕ ಮಾಡಲಾಗಿದೆ. ಇದರಲ್ಲಿ 296 ಮಂದಿಯನ್ನು ಹೆಚ್ಚುವರಿಯಾಗಿ ಇರಿಸಿಕೊಳ್ಳಲಾಗಿದೆ. ಇದರಲ್ಲಿ 1887 ಪ್ರಾಥಮಿಕ ಶಾಲಾ ಹಂತದ ಶಿಕ್ಷಕರು ಮತ್ತು 472 ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿ ಒಳಗೊಂಡಿದ್ದಾರೆ. 135 ಮಂದಿ ಸೂಪರ್ ವೈಸರ್ ಗಳು ಮತ್ತು 63 ಮಾಸ್ಟರ್ ಟ್ರೇನರ್ ಗಳು ಮೇಲುಸ್ತುವಾರಿಯಾಗಿ ಇರಲಿದ್ದಾರೆ. ಪ್ರತಿ 150 ಮನೆಗಳಿಗೆ ಒಬ್ಬ ಗಣತಿದಾರ, 20 ಗಣತಿದಾರರಿಗೆ ಒಬ್ಬರು ಮೇಲ್ವಿಚಾರಕರಂತೆ ನೇಮಿಸಿ ಸಮೀಕ್ಷೆ ನಡೆಸಬೇಕು. ಯಾವ ಕುಟುಂಬವೂ ಸಮೀಕ್ಷೆಯಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರಾಜ್ಯಮಟ್ಟದಲ್ಲಿ ತರಬೇತಿ ಪಡೆದುಕೊಂಡ ಜಿಲ್ಲೆಯ ಶಾಲಾ ಶಿಕ್ಷಣ ಇಲಾಖೆಯ ಸಹಾಯಕ ಯೋಜನಾ ಸಮನ್ವಯಾಧಿಕಾರಿ ಶಿವಲಿಂಗಾರೆಡ್ಡಿ, ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆಯ ಉಪನ್ಯಾಸಕರಾದ ವಿಜಯರಂಗಾರೆಡ್ಡಿ, ಗಂಗಾಧರ. ಕೆ., ರೇವಣ್ಣ ಸಿದ್ದಪ್ಪ ಅವರು ಸಮೀಕ್ಷಾ ಕಾರ್ಯದ ಕುರಿತು ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ತಾಲ್ಲೂಕುಗಳ 63 ಮಾಸ್ಟರ್ ಟ್ರೇನರ್ ಗಳು ಭಾಗವಹಿಸಿದ್ದರು.

## ಇಂದು ರಾಷ್ಟ್ರೀಯ ಲೋಕ್ ಅದಾಲತ್

ಮಲ್ಲಮ್ಮನುಡಿ ವಾರ್ತೆ;ಬಳ್ಳಾರಿ,ಸೆ.12-ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಸೆಪ್ಟೆಂಬರ್ 13 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು. ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ. ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್.ಎನ್ ಹೊಸಮನೆ ಅವರು ತಿಳಿಸಿದ್ದಾರೆ.

# ಬೀಳಗಿ ಕ್ಷೇತ್ರಕ್ಕೆ ಜೆ.ಟಿ.ಪಾಟೀಲ ಕೊಡುಗೆ ಶೂನ್ಯ-ನಿರಾಣಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.12-ಬೀಳಗಿ ಕ್ಷೇತ್ರಕ್ಕೆ ಶಾಸಕ ಜೆ.ಟಿ.ಪಾಟೀಲ ಕೊಡುಗೆ ಶೂನ್ಯವಾಗಿದ್ದು,ಅಧಿಕಾರದ ಅವಧಿಯಲ್ಲಿ ಯಾವುದೇ ಕೆಲಸ ಮಾಡದೇ ಆರಾಮದಾಯಕ ಜೀವನ ಕಳೆದಿದ್ದಾರೆ ಎಂದು ಮಾಜಿ ಸಚಿವ ಮುರುಗೇಶ ನಿರಾಣಿ ಆರೋಪ ಮಾಡಿದ್ದಾರೆ.

ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಾಟೀಲರು ತಾವು ಬೀಳಗಿ ಕ್ಷೇತ್ರಕ್ಕೆ ಮಾಡಿರುವ ಅಭಿವೃದ್ಧಿ ಕಾರ್ಯಗಳ ಕುರಿತು ದಾಖಲೆ ಬಿಡುಗಡೆ ಮಾಡಲಿ ಎಂದರಲ್ಲದೇ, ನನ್ನ ಅವಧಿಯಲ್ಲಿ ಆಗಿರುವ ಕೆಲಸಗಳ ಕುರಿತು ಈಗಾಗಲೇ ನಾನು ದಾಖಲೆ ಪುಸ್ತಕ ಬಿಡುಗಡೆ ಮಾಡಿದ್ದೇನೆ ಎಂದರು. ನಾನು ಶಾಸಕನಾಗುವ ಮುನ್ನವೇ ಸಕ್ಕರೆ ಕಾರ್ಖಾನೆ, ಸಿಮೆಂಟ್ ಕಾರ್ಖಾನೆ ಪ್ರಾರಂಭಿಸಿದ್ದೇನೆ. ದಿನದ 24 ಗಂಟೆ ಕೆಲಸ ಮಾಡಿ ಹಲವಾರು ಸಂಸ್ಥೆಗಳನ್ನು ಹುಟ್ಟುಹಾಕಿದ್ದೇನೆ. ಹಾಗಾಗಿ ನನ್ನನ್ನು ಶಾಸಕ ಜೆ.ಟಿ.ಪಾಟೀಲ ಜೊತೆ ಹೋಲಿಸಿಕೊಳ್ಳುವ ಪ್ರಮೆಯವೇ ಬರುವುದಿಲ್ಲ ಎಂದ ನಿರಾಣಿ ಹೇಳಿದರು.

ಈತನಕ ನಾನು ಶಾಸಕರ ಬಗ್ಗೆ ಅನಗತ್ಯ ಆರೋಪ ಮಾಡಿಲ್ಲ. ಅವರು ಪ್ರತಿ ಚುನಾವಣೆಯಲ್ಲಿ ಇದೇ ತಮ್ಮ ಕೊನೆಯ ಚುನಾವಣೆ ಎಂದು ಸುಳ್ಳು ಹೇಳುತ್ತಾ ಬಂದಿದ್ದಾರೆ. ಇದೀಗ 2028ಕ್ಕೆ ನಾನೇ ಅಭ್ಯರ್ಥಿ ಎಂದು ಹೇಳುತ್ತಿದ್ದಾರೆ. ಅವರು ಸತ್ಯವನ್ನೇ ಹೇಳುವುದಾದರೆ ಕೊಟ್ಟ ಮಾತನ್ನು ಉಳಿಸಿಕೊಳ್ಳಲು ಬೇರೆಯವರಿಗೆ ಕ್ಷೇತ್ರ ಬಿಟ್ಟುಕೊಡಲಿ ಎಂದು ಸವಾಲೆಸೆದರು.

ನನ್ನ ಬಗ್ಗೆ ಅನಗತ್ಯ ಟೀಕೆ, ಆರೋಪ ಮಾಡುವುದನ್ನು ನಿಲ್ಲಿಸಿ ಅಭಿವೃದ್ಧಿ ಕೆಲಸಕ್ಕೆ ಮುಂದಾಗಲಿ. ಅದನ್ನು ನಾವು ಬೆಂಬಲಿಸುತ್ತೇವೆ. ಅದು ಬಿಟ್ಟು ಟೀಕೆ-ಟಿಪ್ಪಣೆ ಮುಂದುವರೆಸಿದರೆ ಅದಕ್ಕೆ ಸರಿಯಾದ ತಿರುಗೇಟು ನೀಡುವುದಾಗಿ ಮುರುಗೇಶ ನಿರಾಣಿ ಹೇಳಿದರು.

ಜಿಲ್ಲೆಯಲ್ಲಿ ಎಂಆರ್‌ಎನ್ ಸಂಸ್ಥೆಯಡಿ 500 ಎಕರೆ ಜಮೀನಿನಲ್ಲಿ ಕೃಷಿ ಸಂಶೋಧನಾ ಕೇಂದ್ರ ಸ್ಥಾಪನೆ ಮಾಡುವ ಉದ್ದೇಶ ಹೊಂದಲಾಗಿದೆ. ಈ ಸಂಬಂಧ ಪ್ರಯತ್ನಗಳು ನಡೆದಿವೆ. ಸರ್ಕಾರದಿಂದ ಅನುಮತಿ ಸಿಕ್ಕ-ರೆ ಸಂಶೋಧನಾ ಕೇಂದ್ರ ಶೀಘ್ರ ಸ್ಥಾಪನೆಗೊಳ್ಳಲಿದೆ ಎಂದರು. ಹೂವಪ್ಪ ರಾಠೋಡ, ರಮೇಶ ಮೊರಟಗಿ ಇದ್ದರು.

# ಮಾವಾ ಮಾರಾಟ ತಡೆಯುವಂತೆ ಆಗ್ರಹಿಸಿ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.12-ಮಾದಕ ವಸ್ತು ಮಾವಾ ತಯಾರಿಸುವ ಮತ್ತು ಮಾರಾಟ ಮಾಡುವ ಅಡ್ಡಾಗಳ ಮೇಲೆ ದಾಳಿ ಮಾಡಿ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಒತ್ತಾಯಿಸಿ ಜಿಲ್ಲೆಯ ಜಮಖಂಡಿ ನಗರದಲ್ಲಿ ಜನಾಂದೋಲನ ಮೆರವಣಿಗೆ ನಡೆಸಲಾಯಿತು.

ಸ್ಥಳೀಯ ಓಲೇ ಮಠದ ಆನಂದ ದೇವರ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ನಗರದ ಹಳೆ ತಹಶೀಲ್ದಾರ ಕಾರ್ಯಾಲಯದಿಂದ ದೇಸಾಯಿ ವೃತ್ತದವರೆಗೆ ಬೃಹತ್ ಪ್ರತಿಭಟನೆ ನಡೆಸಿ, ಮಾವಾ ಮುಕ್ತ ಜಮಖಂಡಿಯನ್ನಾಗಿ ಮಾಡುವಲ್ಲಿ ಅಧಿಕಾರಿಗಳು ಮುಂದಾಗಬೇಕು ಎಂದು ಆಗ್ರಹಿಸಿದರು.

ನಂತರ ನಗರದ ದೇಸಾಯಿ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆ ನಡೆಸಿ ಮಾವಾ ತಯಾರಿಸುವವರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ನಂತರ ಸ್ಥಳೀಯ ಆಡಳಿತಕ್ಕೆ ಮನವಿ ಸಲ್ಲಿಸಿದರು.

# ನೀರಲಕೇರಿ ಪಿಕೆಪಿಎಸ್ ಅಧ್ಯಕ್ಷರಾಗಿ ದುಂಡಪ್ಪ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.12-ತಾಲೂಕಿನ ನೀರಲಕೇರಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘದ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಯಲ್ಲಿ ದುಂಡಪ್ಪ ಏಳೆಮ್ಮಿ ಮತ್ತು ರಂಗಪ್ಪ ಪೂಜಾರಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಎರಡೂ ಸ್ಥಾನಗಳಿಗೂ ಒಬ್ಬೊಬ್ಬರೇ ನಾಮಪತ್ರ ಸಲ್ಲಿಸಿದ್ದರಿಂದ ಅಧ್ಯಕ್ಷರಾಗಿ ದುಂಡಪ್ಪ ಏಳೆಮ್ಮಿ, ಉಪಾಧ್ಯಕ್ಷರಾಗಿ ರಂಗಪ್ಪ ಪೂಜಾರಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ

ಮಂಜುಳಾ ಚಲವಾದಿ ಘೋಷಿಸಿದರು.

ನಿರ್ದೇಶಕರುಗಳಾದ ಸಿದ್ಧಲಿಂಗೇಶ್ವರ ಗೋಡಿ, ಈರಣ್ಣ ಜಂಗವಾಡ, ಚಂದ್ರಶೇಖರ ದಳವಾಯಿ, ಬಸವರಾಜ ನಾಯಕ, ಮಾರುತಿ ವಾಲಿಕಾರ, ಶಿವಪ್ಪ ಕೋರಿ, ಕಾಶಿನಾಥ ಹಿರೇಮಠ, ಮೇಘಾ ಜಿಗಜಿನ್ನಿ, ನಿವೇದಿತಾ ಬಾಳನ್ನವರ ಹಾಗೂ ಶಿವಾನಂದ ಶಿಕ್ಕೇರಿ ಇದ್ದರು.

ಈ ಸಂದರ್ಭದಲ್ಲಿ ಮುಖಂಡರಾದ ಸಂತೋಷ ಹೊಕ್ರಾಣಿ, ಉಮೇಶ ಮೇಟಿ, ಭರತ ಈಟಿ, ದ್ಯಾಮಣ್ಣ ಗಾಳಿ, ಅಶೋಕ ಲಾಗಲೋಟಿ, ಆನಂದ ಜಿಗಜಿನ್ನಿ, ಎಸ್.ಎನ್.ರಾಂಪೂರ, ರಾಜು ಗವಳಿ, ಗಣೇಶ ಚವ್ಹಾಣ, ಗಿಡ್ಡಪ್ಪ ಬಂಡಿವಡ್ಡರ, ಚನ್ನಪ್ಪ ಮಾಚಕನೂರ, ಮಂಜುನಾಥ ಕಾಜೂರು ಉಪಸ್ಥಿತರಿದ್ದರು.

# ಸೆ.14 ಶ್ರೀಶೈಲ ಮಲ್ಲಿಕಾರ್ಜುನ ಸಂಘದ ವಾರ್ಷಿಕ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.12-ಜಿಲ್ಲೆಯ ಬಾದಾಮಿ ನಗರದ ಶ್ರೀಶೈಲ ಮಲ್ಲಿಕಾರ್ಜುನ ಸೌಹಾರ್ದ ಪತ್ತಿನ ಸಹಕಾರಿ ಸಂಘದ 17 ನೇ ವಾರ್ಷಿಕ ಮಹಾಸಭೆ ಸೆ.14 ರಂದು ಬೆಳಿಗ್ಗೆ 11 ಗಂಟೆಗೆ ಸ್ಥಳೀಯ ಹೇಮರಡ್ಡಿ ಮಲ್ಲಮ್ಮ ಸಮುದಾಯ ಭವನದಲ್ಲಿ ಜರುಗಲಿದೆ ಎಂದು ಅಧ್ಯಕ್ಷ ವಿಜಯಕುಮಾರ ದೇಸಾಯಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಘವು ವಿವಿಧ ಜಿಲ್ಲೆಯಲ್ಲಿ 8 ಶಾಖೆಗಳನ್ನು ಹೊಂದಿದ್ದು, ಉತ್ತಮ ಪ್ರಗತಿ ಪಥದತ್ತ ಸಾಗುತ್ತಿದೆ ಎಂದು ಹೇಳಿದರು.

3753 ಸದಸ್ಯರನ್ನು ಹೊಂದಿದ್ದು, 201.78 ಲಕ್ಷ ರೂ, ಶೇರು ಬಂಡವಾಳ, 162.65ಲಕ್ಷ ರೂಗಳ ನಿಧಿಗಳು, 3807.69 ಲಕ್ಷ ರೂಗಳ ಠೇವುಗಳನ್ನು ಹೊಂದಿದೆ. 2957.09 ಲಕ್ಷ ರೂಗಳ ಸಾಲ ವಿತರಣೆ ಮಾಡಿದ್ದು, 62.01 ಲಕ್ಷ ರೂ.ಗಳ ನಿವ್ವಳ ಲಾಭ ಗಳಿಸಿದೆ. ಎ ಅಡಿಟ್ ವರ್ಗದ ಮೂಲಕ ಶೇರುದಾರರಿಗೆ ಶೇ.9ರಷ್ಟು ಡಿವ್ಹಿಡೆಂಡ್ ವಿತರಿಸಲಾಗುತ್ತಿದೆ ಎಂದು ದೇಸಾಯಿ ಹೇಳಿದರು.

ಹಿರಿಯ ನಿರ್ದೇಶಕ ಡಿ.ಎಂ.ಪೈಲ್ ಮಾತನಾಡಿ, ಎಸ್.ಎಸ್.ಎಲ್.ಸಿಯಲ್ಲಿ ಶೇ.90 ಹಾಗೂ ಪಿಯುಸಿ ಪ್ರತಿ ವಿಭಾಗದಲ್ಲಿ ಪ್ರಥಮ, ದ್ವಿತೀಯ ಸ್ಥಾನ ಪಡೆದಿರುವ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರ ನೀಡಲಾಗುತ್ತಿದೆ ಎಂದು ಹೇಳಿದರು.

ನಿರ್ದೇಶಕರಾದ ಸಿ.ವ್ಹಿ.ಚೆನ್ನವೀರಗೌಡರ, ಎಸ್.ಎನ್. ಪಾಟೀಲ, ಬಿ.ವ್ಹಿ.ಮೇಟಿ, ಎಸ್.ಎ.ಭರಮಗೌಡರ, ಎಸ್.ಎಸ್. ಸುಂಕದ, ಮುಖ್ಯ ಕಾರ್ಯನಿರ್ವಾಹಕ ಎಸ್.ಡಿ.ಅಮೇತಪ್ಪನವರ ಇದ್ದರು.

# ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.12-ಜಿಲ್ಲೆಯಲ್ಲಿ ಸೆಪ್ಟೆಂಬರ 15 ರಿಂದ 45 ದಿನಗಳ ಕಾಲ ಲಿಂಗತ್ವ ಅಲ್ಪಸಂಖ್ಯಾತರ ಬೇಸ್ ಲೈನ್ ಸಮೀಕ್ಷೆ ಮತ್ತು ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆ ಕಾರ್ಯ ನಡೆಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದ್ದಾರೆ.

ಶುಕ್ರವಾರ ಮಾಜಿ ದೇವದಾಸಿ ಮಹಿಳೆಯ ಮರು ಸಮೀಕ್ಷೆ ಕುರಿತು ಮಾಹಿತಿಯುಳ್ಳ ಪ್ರಚಾರದ ಪೋಸ್ಟರಗಳನ್ನು ಬಿಡುಗಡೆಗೊಳಿಸಿ ಮಾತನಾಡಿದ ಜಿಲ್ಲಾಧಿಕಾರಿಗಳು, ಲಿಂಗತ್ವ ಅಲ್ಪಸಂಖ್ಯಾತರ ಬೇಸ್‌ಲೈನ್ ಸಮೀಕ್ಷೆಯು ಆಯಾ ತಾಲೂಕಿನ ಆಸ್ಪತ್ರೆಗಳಲ್ಲಿರುವ ಎ.ಆರ್.ಟಿ ಕೇಂದ್ರ ಮತ್ತು ಮಾಜಿ ದೇವದಾಸಿ ಮಹಿಳೆಯರ ಮರು ಸಮೀಕ್ಷೆಯನ್ನು ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ನಡೆಸಲಾಗುತ್ತಿದೆ.

ಈ ಸಮೀಕ್ಷೆಯಲ್ಲಿ ಲಿಂಗತ್ವ ಅಲ್ಪಸಂಖ್ಯಾತರು ಮತ್ತು ಮಾಜಿ ದೇವದಾಸಿ ಮಹಿಳೆಯರು ಭಾಗವಹಿಸುವಂತೆ ಕೋರಿದರು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354-297464ಗೆ ಸಂಪರ್ಕಿಸಲು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ ಸೇರಿದಂತೆ ಮಿಲನ ಸಂಸ್ಥೆಯ ಪ್ರತಿನಿಧಿಗಳು ಇದ್ದರು.

# ಸೆ.15 ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.12-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಸೆಪ್ಟೆಂಬರ 15 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ 18ನೇ ಅಂತರರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಎಚ್.ವಾಯ್.ಮೇಟಿ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ ಸೇರಿದಂತೆ ರಾಜ್ಯಸಭಾ ಸದಸ್ಯರು, ವಿಧಾನ ಪರಿಷತ್ ಶಾಸಕರು, ವಿಧಾನಸಭೆ ಸದಸ್ಯರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

ನವನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರೊ. ಸಂಪತ್ ಲಮಾಣಿ ಅತಿಥಿ ಉಪನ್ಯಾಸ ನೀಡಲಿದ್ದಾರೆ. ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ ಪುತ್ಥಳಿಗೆ ಹೂ ಮಾಲಾರ್ಪಣೆ ಕಾರ್ಯಕ್ರಮ ಜರುಗಲಿದೆ.

ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲ ನಾಗರಿಕರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯ ಬಾಂಧವರು ಹಾಗೂ ವಿವಿಧ ಸಂಘಟನೆಗಳ ಪ್ರತಿನಿಧಿಗಳು ಪಾಲ್ಗೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆಯ ಪ್ರಭಾರಿ ಉಪನಿರ್ದೇಶಕ ರಮೇಶ ಚವ್ಹಾಣ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಕ್ಷರತೆಯಿಂದ ಸಾಮರ್ಥ್ಯ ವೃದ್ಧಿ-ನರಗುಂದ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಸೆ.12-ಪ್ರತಿಯೊಬ್ಬ ವ್ಯಕ್ತಿಯ ಜೀವನದಲ್ಲಿ ಮಹತ್ವದ ಪಾತ್ರ ವಹಿಸುವ ಸಾಕ್ಷರತೆ ಅವನ ಸಾಮರ್ಥ್ಯವನ್ನು ವೃದ್ಧಿಸುವಲ್ಲಿ ಸಹಕಾರಿಯಾಗಿ ಪ್ರಗತಿ ಪಥದತ್ತ ಕರೆದೊಯ್ಯುವ ಸಾಧನವಾಗಿದೆ ಎಂದು ಪ್ರಾಚಾರ್ಯ ಶ್ರೀನಿವಾಸ ನರಗುಂದ ಹೇಳಿದರು.

ನಗರದ ವಿದ್ಯಾ ಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಹಾಗೂ ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯದ ಆಯ್‌ಕ್ಯೂಎಸಿ ಮತ್ತು ಎನ್‌ಎಸ್‌ಎಸ್ ಘಟಕಗಳ ಆಶ್ರಯದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಸಾಕ್ಷರತಾ ಸಪ್ತಾಹ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿಕ್ಷಣ ಬದುಕಿನುದ್ದಕ್ಕೂ ನಡೆಯುವ ನಿರಂತರ ಪ್ರಕ್ರಿಯೆ. ಅದು ಸಮಗ್ರ ವ್ಯಕ್ತಿತ್ವವನ್ನು ಅರಳಿಸುವಲ್ಲಿ ಪ್ರಧಾನ ಪಾತ್ರವಹಿಸುತ್ತದೆ. ಶಿಕ್ಷಣದ ಮೂಲಕ ಪಡೆದ ಜ್ಞಾನ, ಕೌಶಲ ಹಾಗೂ ಮೌಲ್ಯಗಳು ಆರ್ಥಿಕ ಅವಶ್ಯಕತೆಗಳನ್ನು ಪೂರೈಸುತ್ತವೆ ಎಂದರು.

ವಿದ್ಯಾರ್ಥಿಗಳಾದ ಮಂಜುಳಾ ಗೌಡರ, ಸ್ಪಂದನಾ ಬಾಸುತ್ಕರ, ಪುಷ್ಪಾ ಸಂಗಮದ, ತುಳಸವ್ವಾ ಹಲಕುರ್ಕಿ, ಸ್ನೇಹಾ ಅರಬಿ, ಸಾಲಿಯಾ ಮೋಮಿನ್ ಮತ್ತು ಗುರುನಾಥ ಸಾಕ್ಷರತೆ ಕುರಿತು ಮಾತನಾಡಿದರು. ಡಾ.ಎಸ್.ಎಸ್. ಹಂಗರಗಿ ಇದ್ದರು.

ಸೃಷ್ಟಿ ಹಾಗೂ ರಕ್ಷಿತಾ ಪ್ರಾರ್ಥಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್. ವಾಯ್.ಬೊಮ್ಮಣ್ಣವರ ಸ್ವಾಗತಿಸಿದರು. ಅಶ್ವಿನಿ ಕೊನೇರಿ ನಿರೂಪಿಸಿದರು. ಎನ್‌ಎಸ್‌ಎಸ್ ಅಧಿಕಾರಿ ಎಸ್. ಎಂ.ಹಡಪದ ವಂದಿಸಿದರು.

## ಅಖಿಲ ಭಾರತೀಯ ಕೋಲಿ ಸಮಾಜದ ಸಮಿತಿಗೆ ಜಿಲ್ಲಾಧ್ಯಕ್ಷರಾಗಿ ಅಶೋಕ ಕೋಲಿ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ಸೆ.12-ಅಖಿಲ ಭಾರತೀಯ ಕೋಲಿ ಸಮಾಜದ ರಾಷ್ಟ್ರೀಯ ಬೀದರ ಜಿಲ್ಲಾಧ್ಯಕ್ಷ ಸಮಿತಿಗೆ ಅಶೋಕ ಕೋಲಿ ಚಂದ್ರಪ್ಪ ಬಾಲಕುಂದಿ ಹಾಗೂ ಬೀದರ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಗೋವಿಂದ ಜಾಲಿ ಗುಂಡಪ್ಪ ಇವರನ್ನು ನೇಮಕ ಮಾಡಲಾಗಿದೆ. ಹಾಗೂ ಕೋಲಿ ಸಮಾಜದ ಅಭಿವೃದ್ಧಿಯನ್ನು ಅಚ್ಚುಕಟ್ಟಾಗಿ ಕಾರ್ಯ ನಿರ್ವಹಿಸಬೇಕೆಂದು ಅಖಿಲ ಭಾರತೀಯ ಕೋಲಿ ಸಮಾಜದ ಕರ್ನಾಟಕ ರಾಜ್ಯಾಧ್ಯಕ್ಷ ದತ್ತಾತ್ರೇಯ ರೆಡ್ಡಿ ಮುದಿರಾಜ್ ಅವರು ಈ ನೇಮಕವನ್ನು ಮಾಡಿ ಆದೇಶ ಹೊರಾಡಿಸಿದ್ದಾರೆ.

**ಈ ಕೆಳಕಂಡಂತೆ ಪದಾಧಿಕಾರಿಗಳ**





**ನೇಮಕ:** ರಾಜ್ಯ ಉಪಾಧ್ಯಕ್ಷೆ (ಪೋಷಕ ಸಂಸ್ಥೆ), ಡಾ. ಇಂದ್ರಿಕಾ ಶಕ್ತಿ ಕಲ್ಬುರ್ಗಿ, ಬೆಳಗಾವಿ ಜಿಲ್ಲಾ ಅಧ್ಯಕ್ಷ ಡಾ. ವೆಂಕಪ್ಪ (ನಿವೃತ್ತ ಜಿಲ್ಲಾ ಆರೋಗ್ಯ ಅಧಿಕಾರಿಗಳು), ಬೆಳಗಾವಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಶಿವಪುತ್ರ ಚಂದ್ರಪ್ಪ, ಬೆಳಗಾವಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಗಂಗಾಪುರ -ಮಹಾದೇವ ಬಿ. ಅಮೀನಬಾವಿ, ಬಾಗಲಕೋಟೆ ಜಿಲ್ಲಾ ಅಧ್ಯಕ್ಷ ಮಲ್ಲಪ್ಪ ಹೆಬ್ಬಾಳ (ನಿವೃತ್ತ ಶಿಕ್ಷಕ), ಬಾಗಲಕೋಟೆ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮಹಾಂತೇಶ ಬರಿಕರ್ ಇವರುಗಳನ್ನು ನೇಮಕ ಮಾಡಲಾಗಿದೆ ಎಂದು ದತ್ತಾತ್ರೇಯರೆಡ್ಡಿ ರವರು ತಿಳಿಸಿದ್ದಾರೆ.

## ಸೆಪ್ಟೆಂಬರ್ 19 ರಂದು ಹಾಪ್‌ಕಾಮ್ಸ್ ವಾರ್ಷಿಕ ಮಹಾಸಭೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಸೆ.12-ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ತೋಟಗಾರಿಕೆ ಹುಟ್ಟುವಳಿ ಬೆಳೆಗಾರರ ಸಹಕಾರ ಮಾರಾಟ ಮತ್ತು ಸಂಸ್ಕರಣ ಸಂಘ ನಿಯಮಿತ (ಜಿಲ್ಲಾ ಹಾಪ್ ಕಾಮ್ಸ್) ಇದರ 2024-25ನೇ ಸಾಲಿನ 26ನೇ ವಾರ್ಷಿಕ ಮಹಾಸಭೆಯನ್ನು ಇದೇ ಸೆಪ್ಟೆಂಬರ್ 19 ರಂದು ಬೆಳಿಗ್ಗೆ 11.30 ಗಂಟೆಗೆ ಕಲಬುರಗಿ ನಗರದ ಚಂದ್ರಶೇಖರ ಪಾಟೀಲ್ ಕ್ರೀಡಾಂಗಣ ಹಿಂದುಗಡೆ ರಾಜಾಪೂರ ರಸ್ತೆಯಲ್ಲಿರುವ ಬಡೇಪುರ ತೋಟಗಾರಿಕೆ ಸಸ್ಯಕ್ಷೇತ್ರದ ಸಂಘದ ಕಾರ್ಯಾಲಯದ ಆವರಣದಲ್ಲಿ ನಡೆಯಲಿದೆ.

ಯಾದಗಿರಿ ಯಲ್ಲಿ ಗ್ರಾಮ ಪಂಚಾಯತಿ ನೌಕರರ 9ನೇ ರಾಜ್ಯ ಸಮ್ಮೇಳನ

# ಕನಿಷ್ಠ ವೇತನ ಜಾರಿಗೆ ಸರ್ಕಾರ ವಿಳಂಬ: ವರಲಕ್ಷ್ಮೀ ಆರೋಪ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಸೆಪ್ಟೆಂಬರ್ 12:ರಾಜ್ಯದ ಗ್ರಾಮ ಪಂಚಾಯತಿ ನೌಕರರಿಗೆ ಕನಿಷ್ಠ 31 ಸಾವಿರ ರೂ. ವೇತನ ಜಾರಿ ಮಾಡುವಲ್ಲಿ ಸರ್ಕಾರ ವಿಳಂಬ ಮಾಡುತ್ತಿದೆ ಎಂದು ಸಿಐಟಿಯು ರಾಜ್ಯಾಧ್ಯಕ್ಷೆ ಎಸ್. ವರಲಕ್ಷ್ಮೀ ಆರೋಪಿಸಿದರು.

ನಗರದ ವಿದ್ಯುತ್ ನೌಕರರ ಭವನದಲ್ಲಿ ಶುಕ್ರವಾರ ಆರಂಭವಾದ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘಟನೆಯ 9ನೇ ರಾಜ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ 40 ಸಾವಿರಕ್ಕೂ ಹೆಚ್ಚು ಪಂಚಾಯತಿ ನೌಕರರು ಸೇವೆ ಸಲ್ಲಿಸುತ್ತಿದ್ದು, ಇವರಿಗೆ ಸೇವಾಭದ್ರತೆ, ಇಎಸ್‌ಐ, ಪಿಎಫ್ ಹಾಗೂ ಕನಿಷ್ಠ ವೇತನ ನೀಡದೇ ಸರ್ಕಾರ ಶೋಷಣೆಗೆ ತೊಡಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

"1993ರಲ್ಲಿ ಪಂಚಾಯತಿ ರಾಜ ಕಾಯ್ದೆ ಜಾರಿಗೆ ಬಂದ ನಂತರವೂ ನೌಕರರಿಗೆ ಕನಿಷ್ಠ ವೇತನ ನೀಡಲಾಗಿಲ್ಲ. ನ್ಯಾಯಾಲಯದ ಆದೇಶವಿದ್ದರೂ ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿದೆ. ಜೊತೆಗೆ, ಕೇಂದ್ರ ಸರ್ಕಾರ ವಿಕೇಂದ್ರೀಕರಣಕ್ಕೆ ಕಾನೂನು ಮಾಡದೆ,15ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ಹಣ ಕಡಿತ ಮಾಡಿದೆ. ಪಂಚಾಯತಿ ಕೆಲಸಗಳನ್ನು ಖಾಸಗೀಕರಣ ಮಾಡುವತ್ತ ಸರ್ಕಾರ ಒತ್ತಡ ತರುತ್ತಿದೆ" ಎಂದು ಅವರು ಟೀಕಿಸಿದರು. ರಾಜ್ಯ ಉಪಾಧ್ಯಕ್ಷ ಗೋಪಾಲಕೃಷ್ಣ ಹರಳಹಳ್ಳಿ ಮಾತನಾಡಿ, ಸರ್ಕಾರಗಳು ಜನರ ನಡುವೆ ಜಾತಿ-ಧರ್ಮದ ವಿಭಜನೆ ಮಾಡಿ, ಪಂಚಾಯತಿ ನೌಕರರ ತ್ಯಾಗವನ್ನು ಮರೆಮಾಚುತ್ತಿವೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಚನ್ನಪ್ಪ ಆನೆಗುಂದಿ, ಆರ್. ಎಸ್.ಬಸವರಾಜ ಸೇರಿದಂತೆ ಹಲವು ನಾಯಕರು ಮಾತನಾಡಿದರು. ಸಮ್ಮೇಳನಕ್ಕೆ ಅಧ್ಯಕ್ಷತೆ ವಹಿಸಿದ್ದವರು ರಾಜ್ಯಾಧ್ಯಕ್ಷ ಎಂ.ಬಿ. ನಾಡಗೌ. ಯಾದಗಿರಿ ಜಿಲ್ಲಾ ಅಧ್ಯಕ್ಷ ಬಸವರಾಜ ದೊರೆ ಸ್ವಾಗತಿಸಿದರು; ಜೈಲಾಲ್ ತೋಟದ್ ಮನಿ ವಂದನಾರ್ಪಣೆ ಸಲ್ಲಿಸಿದರು. ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ನೌಕರರು ಈ ಸಮ್ಮೇಳನದಲ್ಲಿ ಭಾಗವಹಿಸಿದರು.



ಬಸವಕಲ್ಯಾಣ :- ತಾಲೂಕಿನ ಖಾನಾಪುರ ಬಿ. ಗ್ರಾಮದ ವತಿಯಿಂದ ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರಿಗೆ ಗುರುವಂದನೆ ಹಾಗೂ 875ನೇ ತುಲಾಭಾರ ಕಾರ್ಯಕ್ರಮ ಜರಗಿತು. ಕಾರ್ಯಕ್ರಮಕ್ಕೂ ಮೊದಲು ಹೂವಿನಿಂದ ಅಲಂಕಾರ ಮಾಡಿದ ಸಾರೋಟಿನಲ್ಲಿ ಹಾರಕೂಡದ ಪೂಜ್ಯರ ಅದ್ದೂರಿ ಮೆರವಣಿಗೆ ಜರುಗಿತು. ಈ ಸಂದರ್ಭದಲ್ಲಿ ಅನೇಕರು ಭಕ್ತರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಪೋಷಣ್ ಮಾಸಾಚರಣೆ ಅಂಗವಾಗಿ ತಾಯಿ ಹೆಸರಲ್ಲಿ ಗಿಡ ನೆಡುವ ಕಾರ್ಯಕ್ರಮ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯ, ಕೊಪ್ಪಳ ಇವರ ಸಂಯುಕ್ತಾಶ್ರದಲ್ಲಿ ಶುಕ್ರವಾರದಂದು ಕೊಪ್ಪಳ ಯೋಜನೆಯ ವದಗನಾಳ 1ನೇ ಅಂಗನವಾಡಿ ಕೇಂದ್ರದಲ್ಲಿ 8 ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆಯ ಅಂಗವಾಗಿ ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಪ್ರತಿ ವರ್ಷ ಪೋಷಣ್ ಮಾಸಾಚರಣೆ ಕಾರ್ಯಕ್ರವನ್ನು ಪ್ರತಿ ಅಂಗನವಾಡಿ ಕೇಂದ್ರಗಳಲ್ಲಿ ಮಾಹೆವಾರು ಮಾಡುವರು. ಕಾರ್ಯಕ್ರಮದ ಉದ್ದೇಶ ಪೌಷ್ಠಿಕ ಆಹಾರ ಸೇವನೆ ಮುಖ್ಯ ಎಂಬುದರ ಕುರಿತು ಜಾಗೃತಿ ಮೂಡಿಸುವುದು. ದೇಹದ ಸರ್ವಾಂಗೀಣ ಅಭಿವೃದ್ಧಿಗೆ ಪೌಷ್ಠಿಕ ಆಹಾರ ಸೇವನೆ ತುಂಬಾ ಮುಖ್ಯ. ಆಹಾರದಲ್ಲಿ ವೈವಿಧ್ಯತೆ ಕಂಡುಕೊಳ್ಳಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಪರಶುರಾಮ ಶೆಟ್ಟೆಪ್ಪನವರ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ರೋಹಿಣಿ ಕೋಟಗಾರ, ಸಹಾಯಕ ಶಿಶು ಅಭಿವೃದ್ಧಿ ಯೋಜರ್ನಾಧಿಕಾರಿಗಳಾದ ಶಿವಶರಣಪ್ಪ ಗದ್ದಿ, ಶಾಲಾ ಮುಖ್ಯೋಪಾಧ್ಯಾಯರು, ಗ್ರಾಮ ಪಂಚಾಯತಿ ಸದಸ್ಯರು, ಗರ್ಭಿಣಿ, ಬಾಣಂತಿಯರು, ವಲಯದ ಮೇಲ್ವಿಚಾರಕಿಯರು, ಅಂಗನವಾಡಿ ಕಾರ್ಯಕರ್ತೆ-ಯರು, ಸಹಾಯಕಿಯರು, ಆಶಾ ಕಾರ್ಯಕರ್ತೆ-ಯರು ಹಾಜರಿದ್ದರು.

# ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ ನೂತನ ಕಟ್ಟಡ ಉದ್ಘಾಟನೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: ಸಹಕಾರ ಕ್ಷೇತ್ರ ರೈತರ ಬೆನ್ನೆಲುಬಿ ಆಗಿ ಕೆಲಸ ಮಾಡಬೇಕಾಗಿತ್ತು,ಆದರೆ ಸರ್ಕಾರದ ನಿಲಕ್ಷದಿಂದ ಸಹಕಾರ ಕ್ಷೇತ್ರ ರೈತರಿಗೆ ಯಾವುದೇ ಸಹಾಯ ಮಾಡುತ್ತಿಲ್ಲ ಎಂದು ಶಾಸಕ ಶರಣು ಸಲಗರ ಹೇಳಿದರು.

ನಗರದಲ್ಲಿ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕಿನ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿ, ರೈತರು ಯಾವ ಪರಿಸ್ಥಿಯಲ್ಲಿ ಇದ್ದಾರೆ ಎಂಬುವುದು ಇಗಾಗಲೇ ಅಧಿಕಾರಿಗಳ ಗಮನಕ್ಕೆ ಬಂದಿದೆ. ಆದ್ದರಿಂದ ಬ್ಯಾಂಕಿನ ಆಡಳಿತ ಮಂಡಳಿ ಮತ್ತು ಅಧಿಕಾರಿಗಳು ಆದಷ್ಟು ರೈತರಿಗೆ ಸಹಾಯ ಮಾಡಲು ಮುಂದಾಗಬೇಕು ಎಂದರು. ನಾವು ಎಂದು ನೋಡದಂತ ಅತಿವೃಷ್ಠಿ ಇ ವರ್ಷ ನೋಡಿದ್ದು, ಇಗಾಗಲೇ ಉದ್ದು,ಹೆಸರು,ತೊಗರಿ ಸಂಪೂರ್ಣ ಹಾಳಾಗಿವೆ. ಮಂದಿನ ಬೆಳೆಯು ಕೂಡ ಬೆಳೆಯಲಾರದಂಥ ಸ್ಥಿತಿ ರೈತನ ಎದುರಾಗಿದೆ. ಎಲ್ಲಿಯವರಗೆ ರೈತರ ಸಮಸ್ಯೆ ಬಗೆಹರಿಯುವುದಿಲ್ಲವೋ ಅಲ್ಲಿಯವರೆಗೆ ನಾವು ನಮ್ಮ ದೇಶ ಉದ್ಧಾರ ವಾಗುವುದಿಲ್ಲ. ಆದ್ದರಿಂದ ರಾಜ್ಯ ಸರ್ಕಾರ ಪ್ರತಿ ಏಕರಗೆ 25 ರಿಂದ 30 ಸಾವಿರ ರೂ. ಪರಿಹಾರ ಕೊಡಬೇಕು. ಒಂದು ವೇಳೆ ಪರಿಹಾರದಲ್ಲಿ ಅನ್ಯಾಯ ಮಾಡಿದ್ದರೆ ಬಹುದೊಡ್ಡ ಹೋರಾಟ ಮಾಡುವುದಕ್ಕೆ ನಾವು ಸಿದ್ಧತೆ ಮಾಡಿಕೊಂಡಿದ್ದೆವೆ ಎಂದರು. ಇದಕ್ಕೆ ನಮ್ಮ ಭಾಗದ ರೈತರ ಕೂಡ ಮಂಡ್ಯ ಭಾಗದ ರೈತರಂತೆ ಒಗ್ಗಟ್ಟು ಪ್ರದರ್ಶಿಸಲು ಮುಂದಾಗಬೇಕು ಮತ್ತು ಕಲ್ಯಾಣ ಕರ್ನಾಟಕ ನಿಗಮ ದಿಂದ ರೈತರಿಗೆ ಅನುದಾನ ಕೊಡಿ ಎಂದು ಮನವಿ ಸಲ್ಲಿಸಿದ್ದಿರೀ, ಒಂದು ವೇಳೆ ಅನುದಾನ ಕೊಡಲು ಅವಕಾಶ ಇದ್ದರೆ, ಹುಮನಾಬಾದ್ ಶಾಸಕರಾದ ಡಾ.ಸಿದ್ದು ಪಾಟೀಲ ಹಾಗೂ ನಾನು ಸೇರಿ 5 ಕೋಟಿ ರೂ. ನೀಡುತ್ತವೆ ಎಂದು ಭರವಸೆ ನೀಡಿದರು.

ಹುಮನಾಬಾದ್ ಶಾಸಕ ಡಾ.ಸಿದ್ಧು ಪಾಟೀಲ್ ಅವರು ಮಾತನಾಡಿ, ಜನರಿಗೆ ಮಳ್ಳು ಮಾಡುವ ಕೆಲಸ ಸರ್ಕಾರ ಮಾಡುತ್ತಿದೆ. ಹೀಗಾಗಿ ಬಾಗಲಕೋಟ ಹಾಗೂ ಬೆಳಗಾಂವಿ ಭಾಗರದ ರೈತರಂತೆ ನಮ್ಮ ಭಾಗದ ರೈತರು ಒಗ್ಗಟ್ಟು ಮತ್ತು ಏಕತೆಯಿಂದ ಕೂಡಿದಾಗ ಮಾತ್ರ ನಿಮ್ಮ ಹಕ್ಕು ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಸಾನಿಧ್ಯ ವಹಿಸಿದ ತಡೋಳಾ ಗುರುಕುಲಾಶ್ರಮದ ಶ್ರೀ ರಾಜೇಶ್ವರ ಶಿವಾಚಾರ್ಯರು ಹಾಗೂ ತ್ರೀಪುರಾಂತ ಗವಿಮಠದ ಶ್ರೀ. ಡಾ.ಅಭಿನಯ ಘನಲಿಂಗ ರುದ್ರಮುನಿ ಶಿವಾಚಾರ್ಯರು ಆಶೀರ್ವಚನ ನೀಡಿದರು. ಬ್ಯಾಂಕಿನ ಅಧ್ಯಕ್ಷ ಮಹಾದೇವರೆಡ್ಡಿ ನರಹರೆ ಅಧ್ಯಕ್ಷತೆ ವಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ನಿರ್ದೇಶಕ ಮಲ್ಲಿಕಾರ್ಜುನ

ಮಾಳಶೆಟ್ಟಿ, ಭಾಲ್ಕಿ ಅಧ್ಯಕ್ಷ ಮಡೋಳಪ್ಪ ಮಂಗಲಗಿ, ಭಾಲ್ಕಿ ಅಧ್ಯಕ್ಷ ರಘುನಾಥ ಬಿರಾದಾರ್, ಬಸವಕಲ್ಯಾಣ ಬ್ಯಾಂಕಿನ ಆಡಳಿತ ಮಂಡಳಿ ಉಪಾಧ್ಯಕ್ಷ ಮಾಣಿಕ ಸಾಯಗಾಂವೆ ಹಾಗೂ ನಿರ್ದೇಶಕರಾದ ವೀರಣ್ಣಾ ಹಲಶೆಟ್ಟೆ, ಜೈರಾಜ ಭೋಜರಾಜ, ಗೋಪಾಲರೆಡ್ಡಿ ನಾರಾಯಣಪೂರೆ, ಸಿದ್ಧಾರೂಢ ಶರಣಪ್ಪಾ, ದೀಲೀಪ್ ಸೂರ್ಯವಂಶಿ, ಬೇಬಿ ಗುಲಾಬರೆಡ್ಡಿ, ಸಂಜಯಸಿಂಗ್ ಹಜಾರಿ, ಬಸವರಾಜ ಪಾಟೀಲ್, ಚನ್ನಬಸಪ್ಪಾ ಜಯಪ್ಪಾ, ಸೂರ್ಯಕಾಂತ ಬಾಬುರೆ, ಬ್ರಹ್ಮರೆಡ್ಡಿ ಚಿಲಾಮೆ, ಸುಶೀಲಬಾಯಿ ಫುಲೆ, ಗೋವಿಂದರೆಡ್ಡಿ ಪಾಟೀಲ್ ಸೇರಿದಂತೆ ಮತ್ತಿತರರು ಇದ್ದರು. ಬ್ಯಾಂಕಿನ ವ್ಯವಸ್ಥಾಪಕರಾದ ಮಂಜುನಾಥ ಪಾಟೀಲ್ ಸ್ವಾಗತಿಸಿ, ವಂದಿಸಿದರು.

## ಮುಂಗಡ ಹಣಕ್ಕೆ ಒತ್ತಾಯಿಸದೆ ಆಸ್ಪತ್ರೆಗಳು ಮೊದಲು ಚಿಕಿತ್ಸೆ ನೀಡಬೇಕು ಡಿ.ಸಿ.ಸೂಚನೆ

ಕಲಬುರಗಿ,ಸೆ.12ರಸ್ತೆ ಅಪಘಾತ ಪ್ರಕರಣಗಳು ಸೇರಿದಂತೆ ಆಕಸ್ಮಿತ ಅಥವಾ ಪ್ರೇರಿತ ಸುಡುವಿಕೆ, ಪ್ರೇರಿತ ಗುಂಡೇಟುಗಳು, ವಿಷಪ್ರಾಶನ, ಕ್ರಿಮಿನಲ್ ಹಲ್ಲೆ ಹಾಗೂ ವೈದ್ಯಕೀಯ ಕಾನೂನು ಪ್ರಕರಣಗಳು ಸಂಭವಿಸಿದ ಸಂದರ್ಭದಲ್ಲಿ ಚಿಕಿತ್ಸೆಗೆ ಬರುವ ರೋಗಿಗೆ ಮುಂಗಡ ಹಣ ಕಟ್ಟುವಂತೆ ಒತ್ತಾಯಿಸದೆ ಆದ್ಯತೆ ಮೇಲೆ ಮೊದಲು ಚಿಕಿತ್ಸೆ ನೀಡಬೇಕು ಎಂದು ಕೆ.ಪಿ.ಎಮ್.ಇ.ಕಾಯ್ದೆಯಡಿ ಜಿಲ್ಲೆಯಲ್ಲಿ ನೋಂದಾಯಿತ ಎಲ್ಲಾ ಖಾಸಗಿ ಆರೋಗ್ಯ ಸಂಸ್ಥೆಗಳಿಗೆ ಡಿ.ಸಿ ಬಿ.ಫೌಜಿಯಾ ತರನ್ನುಮ್ ಸೂಚನೆ ನೀಡಿದ್ದಾರೆ.ಒಂದು ವೇಳೆ ಈ ನಿಯಮವನ್ನು ಉಲ್ಲಂಘಿಸಿದರೆ ಅಂತಹ ಖಾಸಗಿ ಆರೋಗ್ಯ ಸಂಸ್ಥೆಗಳ ಮೇಲೆ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಕಾಯ್ದೆ 2007ರ ಸೆಕ್ಷನ್ 19(5)ಅಡಿಯಲ್ಲಿ 1 ಲಕ್ಷ ರೂ. ವರೆಗೆದಂಡ ವಿಧಿಸಲಾಗುವುದು ಎಂದು ಕೆ.ಪಿ.ಎಂ.ಇ.ಕಾಯ್ದೆ ನೋಂದಣಿ ಮತ್ತು ಕುಂದು ಕೊರತೆ ಪ್ರಾಧಿಕಾರದ ಅಧ್ಯಕ್ಷರಾಗಿರುವ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.ಹಣಕ್ಕೆ ಒತ್ತಾಯಿಸಿ ಚಿಕಿತ್ಸೆ ನೀಡದ ಪ್ರಕರಣಗಳಲ್ಲಿ ಈ ಕುರಿತಂತೆ ಸಾರ್ವಜನಿಕರು ತಮ್ಮ ದೂರನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬಹುದಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

# ಗಣಪತಿ ಸರ್ಕಾರಕ್ಕೆ ಸದ್ಬುದ್ಧಿ ನೀಡಲಿ : ಶಾಸಕ ಕಂದಕೂರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಸೆ.12: ಅನ್ನದಾತರನ್ನು ಆ ಭಗವಂತ ಗಣೇಶ ಕಾಪಾಡಲಿ, ಅತಿವೃಷ್ಠಿಯಿಂದ ಹಾನಿಗೀಡಾದ ಪರಿಹಾರ ನೀಡಲು ಸರ್ಕಾರಕ್ಕೆ ಗಣಪತಿ ದೇವ ಸದ್ಬುದ್ದಿ ಕೊಡಲಿ ಎಂದು ಗುರುಮಠಕಲ್ ಶಾಸಕ ಶರಣಗೌಡ ಕಂದಕೂರ ಹೇಳಿದರು.

ನಗರದಲ್ಲಿ ಪ್ರತಿಷ್ಠಾಪಿಸಲಾಗಿರುವ ಹಿಂದೂ ಮಹಾಗಣಪತಿಗೆ ವಿಶೇಷ ಪೂಜೆ ಸಲ್ಲಿಸಿ ಮಾತನಾಡಿದ ಅವರು, ನಮ್ಮ ಹಿರಿಯ ಸಹೋದರ ಮಲ್ಲಿಕಾರ್ಜುನ ರಡ್ಡಿ ಆಶಯದಂತೆ ನಮ್ಮ ಕುಟುಂಬದವರು ಗಣೇಶನಿಗೆ ಪ್ರತಿವರ್ಷ ವಿಶೇಷ ಪೂಜೆ ಸಲ್ಲಿಸುತ್ತೇವೆ. ಗಣಪತಿ ನಮ್ಮ ಜನರ ಎಲ್ಲಾ ಕಷ್ಟಗಳನ್ನು ಪರಿಹರಿಸಲಿ ಎಂದರು.


ಹಿಂದೂ ಮಹಾಗಣಪತಿ ಪ್ರತಿಷ್ಠಾಪನೆ ಸ್ಥಳದಲ್ಲಿ ಮಂಟಪವನ್ನು ಅಯೋದ–ೖಯಂತೆ ವಾತಾವರಣ ನಿರ್ಮಾಣ ಮಾಡಿ, ಮಹಾಭಾರತದ ವಿಶೇಷ ಚಿತ್ರಗಳನ್ನು ಭಿತ್ತರಿಸಿರುವುದು ಎಲ್ಲರೂ ಭಕ್ತಿಯಿಂದ ಪುನಿತರಾಗುವಂತೆ ಮಾಡಲಾಗಿರುವುದು ಹಿಂದೂ ಕಾರ್ಯಕರ್ತರ ಭಕ್ತಿಗೆ ಸಾಕ್ಷಿಯಾಗಿದೆ ಎಂದರು.

ಶನಿವಾರದಂದು ಜರುಗುವ ಹಿಂದೂ ಮಹಾಗಣಪತಿಯ ವಿಸರ್ಜನೆ ಕಾರ್ಯಕ್ರಮದಲ್ಲಿ ಜಿಲ್ಲೆಯ ಪ್ರತಿಯೊಬ್ಬರೂ ಭಾಗವಹಿಸಿ ಇದೊಂದು ಐತಿಹಾಸಿಕ ಕಾರ್ಯಕ್ರಮವನ್ನಾಗಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಖ್ಯಾತ ಹಾಸ್ಯ ಕಲಾವಿದರಾದ

ಬಸವರಾಜ ಮಹಾಮನಿ, ಪ್ರಮುಖರಾದ ಚನ್ನಪ್ಪಗೌಡ ಮೋಸಂಬಿ, ವಿಶ್ವನಾಥ ಶಿರವಾಳ, ಬಂದಪ್ಪ ಅರಳಿ, ಮಲ್ಲಣಗೌಡ ಹಳಿಮನಿ ಕೌಳೂರು, ಮಲ್ಲಣಗೌಡ ಹೊಸಳ್ಳಿ, ಮಲ್ಲಿಕಾರ್ಜುನ ಅರುಣಿ, ಸಾಹೇಬಗೌಡ ಗೌಡಗೇರಾ, ಈಶ್ವರನಾಯಕ ಸೇರಿದಂತೆ ಇತರರಿದ್ದರು.

# ಅಲ್ಪಸಂಖ್ಯಾತರ ಯೋಜನೆಯ ಕಾರ್ಯಕ್ರಮಗಳನ್ನು ಸಮರ್ಪಕ ಅನುಷ್ಠಾನಗೊಳಿಸಿ: ನಿಸಾರ್ ಅಹಮದ್



ರಾಯಚೂರು ಸೆ,12 : ಅಲ್ಪಸಂಖ್ಯಾತರ ವರ್ಗಗಳ ಕಲ್ಯಾಣಕ್ಕಾಗಿ ರೂಪಿಸಲಾಗಿರುವ ಪ್ರಧಾನಮಂತ್ರಿಗಳ 15 ಅಂಶಗಳ ಕಾರ್ಯಕ್ರಮಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ನಿಗದಿತ ಅವಧಿಯೊಳಗೆ ಗುರಿ ಸಾಧಿಸಿಬೇಕೆಂದು ಅಲ್ಪಸಂಖ್ಯಾತ ಆಯೋಗದ ಅಧ್ಯಕ್ಷರಾದ ಯು.ನಿಸಾರ್ ಅಹಮದ್ ಅವರು ಹೇಳಿದರು. ಸೆಪ್ಟೆಂಬರ್ 12ರ ಶುಕ್ರವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರಧಾನ ಮಂತ್ರಿಗಳ 15 ಅಂಶಗಳ ಕಾರ್ಯಕ್ರಮದ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾರ್ಯಕ್ರಮದಡಿ ಅಲ್ಪಸಂಖ್ಯಾತರ ಸಮುದಾಯಕ್ಕೆ ಶಿಕ್ಷಣ, ಕೌಶಲ್ಯ ಹಾಗೂ ಇತರೆ ಉದ್ಯೋಗಗಳಿಗೆ ತರಬೇತಿ ನೀಡಲು ಹೆಚ್ಚಿನ ಆದ್ಯತೆ ನೀಡಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮಕ್ಕೆ ಬಂದಂತಹ ಅರ್ಜಿಗಳನ್ನು ನಿಗದಿತ ಸಮಯದಲ್ಲಿ ವಿಲೇವಾರಿ ಮಾಡಬೇಕು. ಕಾಲಕಾಲಕ್ಕೆ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ವಿವಿಧ ಯೋಜನೆಯಡಿ ಅಲ್ಪಸಂಖ್ಯಾತರಿಗೆ ಸಾಲ ಸೌಲಭ್ಯ ಒದಗಿಸಬೇಕೆಂದರು. ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಶೈಕ್ಷಣಿಕ ಅವಕಾಶ ಹೆಚ್ಚಳ, ಆರ್ಥಿಕ ಚಟುವಟಿಕೆ, ಜೀವನ ಮಟ್ಟ ಸುಧಾರಿಸಲು ವಿಶೇಷ ಕಾಳಜಿ ವಹಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವದ್ಧಿ ಇಲಾಖೆಯಿಂದ ಅಂಗನವಾಡಿ ಕೇಂದ್ರಗಳ ಮೂಲಕ ಪೌಷ್ಟಿಕ ಆಹಾರ ಪೂರೈಕೆ, ಆರೋಗ್ಯ ಸೇವೆ, ಶಾಲಾ ಪೂರ್ವ ಅನೌಪಚಾರಿಕ ಶಿಕ್ಷಣ ಮತ್ತಿತರ ಸೇವೆಗಳನ್ನು ಅವಕಾಶ ವಂಚಿತ ಅಲ್ಪಸಂಖ್ಯಾತರ ಸಮುದಾಯಕ್ಕೆ ಒದಗಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಸಾರ್ವಜನಿಕ ಶಿಕ್ಷಣ ಇಲಾಖೆ ಮೂಲಕ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ, ಬೈಸಿಕಲ್, ವಿದ್ಯಾರ್ಥಿ ವೇತನ ಮತ್ತಿತರ ಸೌಲಭ್ಯ, ಎಸ್.ಎಸ್. ಎಲ್.ಸಿ.,ಪಿ.ಯು.ಸಿ., ಪದವಿಗಳಲ್ಲಿ ಹೆಚ್ಚು ಅಂಕಗಳಿಸಿದ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಸೇರಿದಂತೆ ಇತರೆ ಯೋಜನೆಯ ಕುರಿತು ಮಾಹಿತಿ ತಲುಪಿಸಬೇಕೆಂದರು. ಅಲ್ಪಸಂಖ್ಯಾತರ ಶೈಕ್ಷಣಿಕ ಅವಕಾಶಗಳನ್ನು ಹೆಚ್ಚಿಸಬೇಕು. ಉರ್ದು ಶಿಕ್ಷಣಕ್ಕೆ ಹೆಚ್ಚಿನ ಸಂಪನ್ಮೂಲ ಒದಗಿಸುವುದು ಹಾಗೂ ಶಿಕ್ಷಣ ಸೌಲಭ್ಯಗಳನ್ನು ಕಲ್ಪಿಸುವುದು ಮುಖ್ಯವಾಗಿದೆ. ತಂತ್ರಜ್ಞಾನ ತರಬೇತಿ ಮೂಲಕ ಕೌಶಲ್ಯ ಕಾರ್ಯಕ್ರಮಗಳನ್ನು ತಲುಪಿಸಬೇಕು ಎಂದರು. ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರಪಾಲಿಕೆಯ ಆಯುಕ್ತರಾದ ಜುಬೀನ್ ಮೊಹಪಾತ್ರ, ಅಧ್ಯಕ್ಷರ ವಿಶೇಷಕರ್ತವ್ಯಾಧಿಕಾರಿ ಮುಜಿಬಲ್, ಡಿವೈಎಸ್ಪಿ ಶಾಂತಮೂರ್ತಿ, ನಿವೃತ್ತ ಎಎಸ್ಪಿ ಅಬ್ದುಲ್ ಖಾದರ್, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್, ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ್ ಸಂಗೇಪಾಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ ಕುಮಾರ್ ಸೇರಿದಂತೆ ಇತರರು ಇದ್ದರು.

# ಕನಿಷ್ಠ ವೇತನ ಜಾರಿ ಸರ್ಕಾರದಿಂದ ವಿಳಂಬ: ವರಲಕ್ಷ್ಮೀ ಆರೋಪ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ, ಸೆ12: ರಾಜ್ಯದ ಗ್ರಾಮ ಪಂಚಾಯತಿ ನೌಕರರಿಗೆ ಕನಿಷ್ಠ 31 ಸಾವಿರ ರೂ. ವೇತನ ಜಾರಿ ಮಾಡುವಲ್ಲಿ ಸರ್ಕಾರ ವಿಳಂಬ ಮಾಡುತ್ತಿದೆ ಎಂದು ಸಿಐಟಿಯು ರಾಜ್ಯಾಧ್ಯಕ್ಷೆ ಎಸ್. ವರಲಕ್ಷ್ಮೀ ಆರೋಪಿಸಿದರು.

ನಗರದ ವಿದ್ಯುತ್ ನೌಕರರ ಭವನದಲ್ಲಿ ಶುಕ್ರವಾರ ಆರಂಭವಾದ ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘಟನೆಯ 9ನೇ ರಾಜ್ಯ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ 40 ಸಾವಿರಕ್ಕೂ ಹೆಚ್ಚು ಪಂಚಾಯತಿ ನೌಕರರು ಸೇವೆ ಸಲ್ಲಿಸುತ್ತಿದ್ದು, ಇವರಿಗೆ ಸೇವಾಭದ್ರತೆ, ಇಎಸ್ಐ, ಪಿಎಫ್ ಹಾಗೂ ಕನಿಷ್ಠ ವೇತನ ನೀಡದೇ ಸರ್ಕಾರ ಶೋಷಣೆಗೆ ತೊಡಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

"1993ರಲ್ಲಿ ಪಂಚಾಯತಿ ರಾಜ ಕಾಯ್ದೆ ಜಾರಿಗೆ ಬಂದ ನಂತರವೂ ನೌಕರರಿಗೆ ಕನಿಷ್ಠ ವೇತನ ನೀಡಲಾಗಿಲ್ಲ. ನ್ಯಾಯಾಲಯದ ಆದೇಶವಿದ್ದರೂ ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿದೆ. ಜೊತೆಗೆ, ಕೇಂದ್ರ ಸರ್ಕಾರ ವಿಕೇಂದ್ರೀಕರಣಕ್ಕೆ ಕಾನೂನು ಮಾಡದೆ, 15ನೇ ಹಣಕಾಸು ಆಯೋಗದಲ್ಲಿ ರಾಜ್ಯಕ್ಕೆ ಹಣ ಕಡಿತ ಮಾಡಿದೆ. ಪಂಚಾಯತಿ ಕೆಲಸಗಳನ್ನು ಖಾಸಗೀಕರಣ ಮಾಡುವತ್ತ ಸರ್ಕಾರ ಒತ್ತಡ ತರುತ್ತಿದೆ" ಎಂದು ಅವರು ಟೀಕಿಸಿದರು.

ರಾಜ್ಯ ಉಪಾಧ್ಯಕ್ಷ ಗೋಪಾಲಕೃಷ್ಣ ಹರಳಹಳ್ಳಿ ಮಾತನಾಡಿ, ಸರ್ಕಾರಗಳು ಜನರ ನಡುವೆ ಜಾತಿ–ಧರ್ಮದ ವಿಭಜನೆ ಮಾಡಿ, ಪಂಚಾಯತಿ ನೌಕರರ ತ್ಯಾಗವನ್ನು ಮರೆಮಾಚುತ್ತಿವೆ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಚನ್ನಪ್ಪ ಆನೆಗುಂದಿ, ಆರ್.ಎಸ್. ಬಸವರಾಜ ಸೇರಿದಂತೆ ಹಲವು ನಾಯಕರು ಮಾತನಾಡಿದರು.

ಸಮ್ಮೇಳನಕ್ಕೆ ಅಧ್ಯಕ್ಷತೆ ವಹಿಸಿದ್ದವರು ರಾಜ್ಯಾಧ್ಯಕ್ಷ ಎಂ.ಬಿ. ನಾಡಗೌ.

ಯಾದಗಿರಿ ಜಿಲ್ಲಾ ಅಧ್ಯಕ್ಷ ಬಸವರಾಜ ದೊರೆ ಸ್ವಾಗತಿಸಿದರು; ಜೈಲಾಲ್ ತೋಟದ್ ಮನಿ ವಂದನಾರ್ಪಣೆ ಸಲ್ಲಿಸಿದರು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ನೌಕರರು ಈ ಸಮ್ಮೇಳನದಲ್ಲಿ ಭಾಗವಹಿಸಿದರು.

# ಆಹಾರ ಆಮದು ಮಾಡಿಕೊಳ್ಳುತ್ತಿದ್ದ ಭಾರತ ಆಹಾರ ರಫ್ತು ಮಾಡುವ ದೇಶವಾಗಿದೆ :ಸಿ.ಎನ್.ಶಿವಪ್ರಕಾಶ್



ಬೆಂಗಳೂರು, ಸೆ12: ಭಾರತದಲ್ಲಿ 2024–25ನೇ ವರ್ಷದಲ್ಲಿ 355 ಮಿಲಿಯನ್ ಟನ್ ಆಹಾರ ಧಾನ್ಯಗಳು ಮತ್ತು 367 ಮಿಲಿಯನ್ ಟನ್ ತೋಟಗಾರಿಕೆ ಉತ್ಪನ್ನಗಳನ್ನು ಉತ್ಪಾದಿಸಿದ್ದು, 2019–2020ರವರೆಗೆ ಆಹಾರ ಆಮದು ಮಾಡಿಕೊಳ್ಳುತ್ತಿದ್ದ ಭಾರತವು 2020–21ರಿಂದ ಆಹಾರ ರಫ್ತು ಮಾಡುವ ದೇಶವಾಗಿದೆ ಎಂದು ಕಪೆಕ್ ವ್ಯವಸ್ಥಾಪಕ ನಿರ್ದೇಶಕ ಸಿ.ಎನ್.ಶಿವಪ್ರಕಾಶ್ ತಿಳಿಸಿದರು.

ಇಂದು ಬೆಂಗಳೂರಿನ ಕೃಷಿ ಸಂಸ್ಥೆಯಲಿ ಕರ್ನಾಟಕ ರಾಜ್ಯ ಕೃಷಿ ವ್ಯವಹಾರ ಅಭಿವೃದ್ಧಿ ನಿಗಮ, ಕರ್ನಾಟಕ ರಾಜ್ಯ ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮ, ಕೃಷಿ ತಂತ್ರಜ್ಞರ ಸಂಸ್ಥೆ ಇವರ ಸಹಯೋಗದಲ್ಲಿ "ಮುಕ್ತ ವ್ಯಾಪಾರ ಒಪ್ಪಂದ : ದೇಶದ ಕೃಷಿ ವಹಿವಾಟಿನ ಹಿತರಕ್ಷಣೆ " ಕುರಿತು ಹಮ್ಮಿಕೊಂಡಿದ್ದ ಒಂದು ದಿನದ ರಾಷ್ಟ್ರ ಮಟ್ಟದ ವಿಚಾರ ಸಂಕಿರಣ ಕಾರ್ಯಾಗಾರದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ದೇಶದ ಕೃಷಿ ಕ್ಷೇತ್ರವನ್ನು ಹಾಗೂ ಕೃಷಿ ವಹಿವಾಟಿನ ಹಿತಾಸಕ್ತಿಯನ್ನು ಕಾಪಾಡುವ ಉದ್ದೇಶದಿಂದ ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಮುಕ್ತ ವ್ಯಾಪಾರ ಒಪ್ಪಂದಗಳಿಂದ ಸಂಭವಿಸುವ ಸವಾಲುಗಳು ಮತ್ತು ಅವಕಾಶಗಳು ಕುರಿತು ವಿಸ್ತೃತವಾಗಿ ವಿಚಾರ ವಿನಿಮಯ ಮಾಡುವ ಹಾಗೂ ತನ್ಮೂಲಕ ದೇಶದ ಕೃಷಿ ಕ್ಷೇತ್ರವನ್ನು ಹಾಗೂ ಕೃಷಿ ವಹಿವಾಟನ್ನು ಕಾಪಾಡುವ ಉದ್ದೇಶವಾಗಿದೆ ಎಂದರು.

ಭಾರತವು ಆಸ್ಟ್ರೇಲಿಯಾ, ಯುನೈಟೆಡ್ ಕಿಂಗ್‌ಡಮ್, ಯುಎಇ, ಸಿಂಗಾಪೂರ್, ಸೌತ್ ಕೋರಿಯಾ, ಮೌರೀಷಿಯಸ್ ಹಾಗೂ ಮುಂತಾದ ದೇಶಗಳೊಂದಿಗೆ ಮುಕ್ತ ಹಾಗೂ ಬಹುಮುಖ ವ್ಯಾಪಾರ ಒಪ್ಪಂದಕ್ಕೆ ಯಶಸ್ವಿಯಾಗಿ ಸಹಿ ಹಾಕಿದೆ. ಭೌಗೋಳಿಕ ಮತ್ತು ರಾಜಕೀಯ ಬದಲಾದ ಸನ್ನಿವೇಶದಲ್ಲಿ ಅನೇಕ ದೇಶಗಳು ಭಾರತದೊಂದಿಗೆ ವ್ಯಾಪಾರ ಒಪ್ಪಂದ ಮಾಡಿಕೊಳ್ಳಲು ಆಸಕ್ತಿ ತೋರಿಸುತ್ತಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕೃಷಿ ತಂತ್ರಜ್ಞರ ಸಂಸ್ಥೆಯ ಅಧ್ಯಕ್ಷ ಎ.ಬಿ.ಪಾಟೀಲ್ ಅವರು, ಈ ಸಂಸ್ಥೆಯು 1968 ರಲ್ಲಿ ಪ್ರಾರಂಭವಾಗಿದ್ದು, ಇಲ್ಲಿಯವರೆಗೆ ಕೃಷಿ ಉತ್ಪಾದನೆ ಕುರಿತು ಚಿಂತನ–ಮಂಥನ ನಡೆಸಲಾಗಿದೆ. ರೈತರ ಅಭ್ಯುದಯಕ್ಕಾಗಿ ಈಗ ನಮ್ಮ ಕೃಷಿ ವಹಿವಾಟಿನ ಹಿತರಕ್ಷಣೆ ಹೇಗೆ ಮಾಡಬೇಕು ಎನ್ನುವ ಬಗ್ಗೆ ಚಿಂತನ–ಮಂಥನ ನಡೆಸಲಾಗುತ್ತಿದೆ ಎಂದರು.

ಈ ವೇದಿಕೆಯು ರಫ್ತುದಾರರು, ನೀತಿ ನಿರೂಪಕರು, ಶಿಕ್ಷಣ ತಜ್ಞರು ಮತ್ತು ನವೋದ್ಯಮಗಳು ಸೇರಿ–ಕೊಂಡು ಭಾರತೀಯ ಕೃಷಿ ರಫ್ತಿನ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸುವ ತಂತ್ರಗಳನ್ನು ಚರ್ಚಿಸಲು ಹಾಗೂ ತನ್ಮೂಲಕ ಜಾಗತಿಕ ವ್ಯಾಪಾರ ಒಪ್ಪಂದಗಳ ಜಾಲದಲ್ಲಿ ರೈತರ ಹಿತಾಸಕ್ತಿಗಳನ್ನು ರಕ್ಷಿಸಲು ಸೂಕ್ತ ಅವಕಾಶ ಕಲ್ಪಿಸುತ್ತದೆ ಎಂದರು.

ಈ ಕಾರ್ಯಾಗಾರದಲ್ಲಿ ಭಾರತೀಯ ಮ್ಯಾನೇಜ್‌ಮೆಂಟ್ ಸಂಸ್ಥೆ, ಭಾರತೀಯ ರಿಸರ್ವ್ ಬ್ಯಾಂಕ್, ಭಾರತೀಯ ರಫ್ತು ಸಂಸ್ಥೆಗಳ ಒಕ್ಕೂಟ, ಸಾಮಾಜಿಕ–ಆರ್ಥಿಕ ಬದಲಾವಣೆ ಸಂಸ್ಥೆ, ರಫ್ತು–ಆಮದು ನೀತಿ ಬ್ಯಾಂಕ್ ಮುಂಬೈ, ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರ, ವಿದೇಶಿ ವ್ಯಾಪಾರ ನಿರ್ದೇಶನಾಲಯದಂತಹ ಪ್ರಮುಖ ರಾಷ್ಟ್ರೀಯ ಸಂಸ್ಥೆಗಳ ವಿವಿಧ ವಿಷಯ ತಜ್ಞರು ಭಾಗವಹಿಸಿ ವಿಷಯದ ಕುರಿತಾಗಿ ತಮ್ಮ ಒಳನೋಟಗಳನ್ನು ಹಂಚಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ನೊಂದಾಯಿತ ರಫ್ತುದಾರರು, ಕೃಷಿ–ಸ್ಟಾರ್ಟಅಪ್‌ಗಳು, ಕಿರು ಆಹಾರ ಸಂಸ್ಕರಣಾ ಉದ್ದಿಮೆಗಳ ಫಲಾನುಭವಿಗಳು, ಗೂಗಲ್ ನೋಂದಾಯಿತ ಕೃಷಿ ಉದ್ಯಮಾಸಕ್ತರು, ಕೃಷಿ ತಂತ್ರಜ್ಞ ಸಂಸ್ಥೆಯ ಸದಸ್ಯರು, ರಾಜ್ಯದ ಕೃಷಿ ವಿಶ್ವವಿದ್ಯಾಯದ ಕೃಷಿ––ವ್ಯವಹಾರ ನಿರ್ವಹಣಾ ಸಂಸ್ಥೆ, ಜೈವಿಕ ತಂತ್ರಜ್ಞಾನ ವಿಭಾಗ ಮತ್ತು ಕೃಷಿ, ಅರ್ಥಶಾಸ್ತ್ರ ವಿಭಾಗದ ಅಧ್ಯಾಪಕರು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಹಾಗೂ ಕೃಷಿ ಉತ್ಪನ್ನಗಳ ರಫ್ತು ಆಸಕ್ತರನ್ನು ಏಕಕಾಲಕ್ಕೆ ಒಂದೆಡೆ ಸೇರುವಂತೆ ಮಾಡಿ ಅಗತ್ಯ ಚರ್ಚೆಗೆ ಸೂಕ್ತ ವೇದಿಕೆಯನ್ನು ಕಲ್ಪಿಸುತ್ತಿದೆ ಎಂದರು. ಕಾಯಾಗಾರದಲ್ಲಿ ಕಪೆಕ್ ಜನರಲ್ ಮ್ಯಾನೇಜರ್ ಡಾ.ಹೆಚ್. ಕೆ.ಶಿವಕುಮಾರ್, ಆರ್‌ಬಿಐನ ಮುಖ್ಯ ಜನರಲ್ ಮ್ಯಾನೇಜರ್ ಡಾ. ಬಾಲಕೆಂಚಪ್ಪ, ಕೃಷಿ ತಂತ್ರಜ್ಞ ಸಂಸ್ಥೆಯ ಕಾರ್ಯಕಾರಿ ಸಮಿತಿಯ ಅಧ್ಯಕ್ಷ ಡಾ.ಎಸ್.ಬಿ.ಯೋಗಾನಂದ, ಕಾರ್ಯದರ್ಶಿ ಜಿ.ಹೆಚ್.ಯೋಗೇಶ್, ಸುಮಾರು 185 ನೊಂದಾಯಿತ ಸದಸ್ಯರುಗಳು ಉಪಸ್ಥಿತರಿದ್ದರು.

ಕರ್ನಾಟಕ ಸರ್ಕಾರ

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**

**ಉಪ ನಿರ್ದೇಶಕರವರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ.**

ಮೈಲೂರ ರಸ್ತೆ, ಬೀದರ,: 08482–233146 :08482–234237 Email: adwcdbidar@gmail.com.

ಸಂಖ್ಯೆ:ಉನಿಬಿ/ಮಮಅಇ/ಆಡಳಿತ/ವಾ.ಬಾ/ಟೆಂಡರ್/2025–26 ದಿನಾಂಕ:09/09/2025

**(Notice Inviting Tender through E- Procurement)**

ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ ಕಛೇರಿ ಉಪಯೋಗಕ್ಕಾಗಿ ವಾಹನ ಬಾಡಿಗೆ ಪಡೆಯಲು ಇ–ಪ್ರೊಕ್ಯೂರ್‌ಮೆಂಟ್' ಅಲ್ಪಾವಧಿ ಟೆಂಡರ್ ಪ್ರಕಟಣೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ ಕಛೇರಿ ಉಪಯೋಗಕ್ಕಾಗಿ ಸರ್ಕಾರದ ಅಧಿಕೃತ ಕೆಲಸ ಕಾರ್ಯಗಳಿಗಾಗಿ ವಾಹನ ಚಾಲಕರೊಂದಿಗೆ ವಾಹನ ಬಾಡಿಗೆ ಆಧಾರದ ಮೇಲೆ ಹವಾ ನಿಯಂತ್ರಣ ರಹಿತ ವಾಹನ ಪಡೆಯಲು ಗರಿಷ್ಟ ಮಾಹೆಯಾನ **ರೂ:35,000=00 + ತೆರಿಗೆ ಮಿತಿಗೆ ಒಳಪಟ್ಟು ಗರಿಷ್ಠ 2500 ಕಿ.ಮಿ.**ಗಳಿಗೆ ಮೀರದಂತೆ, ನೊಂದಾಯಿತ ವ್ಯಕ್ತಿ / ಏಜೆನ್ಸಿಯವರಿಂದ ದ್ವಿ–ಲಕೋಟೆ ಪದ್ಧತಿಯ ಮೂಲಕ ಟೆಂಡರ್ ಆಹ್ವಾನಿಸಲಾಗಿದೆ. ನಿಬಂಧನೆಗಳಿಗೆ ಒಳಪಟ್ಟು ಅನುಬಂಧ–2 ರಲ್ಲಿ ನಿಗದಿಪಡಿಸಿರುವ ವೇಳಾಪಟ್ಟಿಯಂತೆ, ಕರ್ನಾಟಕ ಸರ್ಕಾರದ e-Procurement Portal ಪದ್ಧತಿಯಂತೆ http://kppp.karnataka.gov.in ಮುಖಾಂತರ ಅನುಬಂಧ–1 ರಲ್ಲಿ ತಿಳಿಸಿದಂತೆ ಅಲ್ಪಾವಧಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. **ಅನುಬಂಧ–1 :– 1) ಟೆಂಡರ್:–** ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ ಕಛೇರಿ ಅಧಿಕೃತ ಕೆಲಸ ಕಾರ್ಯಗಳಿಗಾಗಿ ಖಾಸಗಿ ವಾಹನ ಬಾಡಿಗೆ ಟೆಂಡರ್, **2) ಅಂದಾಜು ಮೊತ್ತ** : ರೂ.4,50,000=00 (ರೂಪಾಯಿ ನಾಲ್ಕು ಲಕ್ಷದ ಐವತ್ತು ಸಾವಿರ ಮಾತ್ರ), **3) ಇ.ಎಂ.ಡಿ ಮೊತ್ತ** : 10,000/–(ಹತ್ತು ಸಾವಿರ ರೂಪಾಯಿಗಳು ಮಾತ್ರ),
**ಅನುಬಂಧ–2:– (ಟೆಂಡರ್ ವೇಳಾಪಟ್ಟಿ):** 1) ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ದಿನಾಂಕ ಮತ್ತು ಸಮಯ: **ದಿನಾಂಕ 09/09/2025 ರಿಂದ 23/09/2025 ರಂದು ಸಾಯಂಕಾಲ 5.00 ಗಂಟೆಯೊಳಗೆ** http://kppp.karnataka.gov.in ಮೂಲಕ, 2) ಇ–ಪೋರ್ಟಲ್‌ನಲ್ಲಿ ದಾಖಲಾತಿಗಳ/ ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **ದಿನಾಂಕ 24/09/2025 ಬೆಳಿಗ್ಗ 05:30 ಗಂಟೆಗೆ,** 3) ಇ–ಪೋರ್ಟಲ್‌ನಲ್ಲಿ ಆರ್ಥಿಕ ಬಿಡ್‌ಗಳನ್ನು ತೆರೆಯುವ ದಿನಾಂಕ: **ದಿನಾಂಕ 26/09/2025 ಬೆಳಿಗ್ಗ 05:30 ಗಂಟೆಗೆ,** ಅ) ವಾಹನ ಉಪಯೋಗಮಾಡುವ ಅಧಿಕಾರಿ/ ಪ್ರಾಧಿಕಾರದ ಹೆಸರು: ಜಿಲ್ಲಾ ಮಹಿಳಾ ಸಬಲೀಕರಣ ಘಟಕ, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೀದರ ಆ) ಬೇಕಾಗುವ ವಾಹನ ಸಂಖ್ಯೆ:**01,** ಇ) ಮಾಹೆಯಲ್ಲಿ ನಿಗದಿಪಡಿಸಿದ ಕಿ.ಮೀ/ಗಂಟೆಗಳು :**2500 ಕಿ.ಮೀ ಅಥವಾ 300 ಗಂಟೆಗಳು,** ಈ) ಸರಕಾರದ ಆದೇಶದನ್ವಯ ನಿಗದಿಪಡಿಸಿದ ದರ:**35,000=00,** ಉ) ಈ ಟೆಂಡರ್‌ಗೆ ಸಂಬಂಧಿಸಿದ ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ಕಚೇರಿ ವಿವರ: ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೈಲೂರ ಬೀದರ ಪಿನ್–ಕೊಡ್–585403. ದೂರವಾಣಿ ಸಂಖ್ಯೆ: 08482–234237 Email: adwcdbidar@gmail.com.

**ಸಹಿ/_ಉಪ ನಿರ್ದೇಶಕರು**

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಇಲಾಖೆ ಬೀದರ.**

ವಾ.ಸಾ.ಸಂ.ಇ/ಬೀದರ/173/ಕೆ.ಎಸ್.ಎಂ.ಸಿ.&ಎ/2025–26

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.